ಬೀದರ * ಕಲಬುರಗಿ * ಯಾದಗಿರಿ * ರಾಯಚೂರು * ಕೊಪ್ಪಳ * ಬಳ್ಳಾರಿ * ಬಾಗಲಕೋಟೆ * ವಿಜಯಪೂರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Registration No. BDR/054/2024-2026 EMAIL ID:mallammanudi@gmail.com E- Paper WWW.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

Mallammanudi Regional NewsPaper ಸಂಪಾದಕರು: ರಮೇಶರೆಡ್ಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ ಮೊ.9448604450

VOLUME-ಸಂಪುಟ:12 | ISSUE- ಸಂಚಿಕೆ: 335 | PAGE- ಪುಟ 8 | ಶನಿವಾರ 04.01.2025 ಬೀದರ | RNI NO:KARKAN/2011/48371 | RS.ಬೆಲೆ 2/-

# ಆಧುನಿಕ- ಪಾರಂಪರಿಕ ವೈದ್ಯ ಪದ್ಧತಿ ಮಿಶ್ರಣದಿಂದ

## ಮಾನಸಿಕ ಕಾಯಿಲೆಗಳ ಚಿಕಿತ್ಸೆ ಫಲಕಾರಿ: ರಾಷ್ಟ್ರಪತಿ ದ್ರೌಪದಿ ಮುರ್ಮು



ಬೆಂಗಳೂರು:ಜ.03:ಮನುಷ್ಯ ಆರೋಗ್ಯಕರ ಮನಸ್ಸನ್ನು ಹೊಂದಿದ್ದಲ್ಲಿ ಸ್ವಾಸ್ಥ್ಯ ಸಮಾಜ ನಿರ್ಮಾಣವಾಗುವುದರಲ್ಲಿ ಸಂದೇಹವಿಲ್ಲ. ಆಧುನಿಕ ಮತ್ತು ಪಾರಂಪರಿಕ ವೈದ್ಯ ಪದ್ಧತಿಗಳ ಮಿಶ್ರಣದಿಂದಾಗಿ ಮಾನವನ ಮಾನಸಿಕ ಕಾಯಿಲೆಗಳಿಗೆ ನೀಡುವ ಚಿಕಿತ್ಸೆ ಫಲಕಾರಿಯಾಗುವುದು ಎಂದು ಭಾರತದ ಗೌರವಾನ್ವಿತ ರಾಷ್ಟ್ರಪತಿಗಳಾದ ಶ್ರೀಮತಿ ದ್ರೌಪದಿ ಮುರ್ಮು ಅವರು ತಿಳಿಸಿದರು.

ಇಂದು ಬೆಂಗಳೂರಿನ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ (ನಿಮ್ಹಾನ್ಸ್)ನ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ಅವರು, ನಿಮ್ಹಾನ್ಸ್ ಸುವರ್ಣ ಮಹೋತ್ಸವ ಆಚರಿಸುತ್ತಿರುವುದು ಹೆಮ್ಮೆ ತಂದಿದೆ. ಇಡೀ ದೇಶದಲ್ಲಿಯೇ ಇದು ಒಂದು ಉತ್ಕೃಷ್ಟ ಸಂಸ್ಥೆಯಾಗಿ ಹೆಸರು ಮಾಡಿದೆ ಎಂದರು.

ಶಿಕ್ಷಣ, ಸಂಶೋಧನೆ, ರೋಗಿಗಳ ಚಿಕಿತ್ಸೆ, ಪುನರ್ವಸತಿ ಕಲ್ಪಿಸುವ ನಿಟ್ಟಿನಲ್ಲಿ ನಿಮಾನ್ಸ್ ಸಂಸ್ಥೆಯು ನಿಸ್ವಾರ್ಥ ಸೇವೆಯನ್ನು ಸಲ್ಲಿಸುತ್ತಿದೆ. ದೇಶದಲ್ಲಿ 53 ಟೆಲಿ ಮಾನಸ್ ಸಹಾಯವಾಣಿ ಕಾರ್ಯ ನಿರ್ವಹಿಸುತ್ತಿದ್ದು, ಸಾರ್ವಜನಿಕರು ಇದರ ಪ್ರಯೋಜನ ಪಡೆ-ಯುತ್ತಿದ್ದಾರೆ. ನಿಮ್ಹಾನ್ಸ್‌ಗೆ ವಿಶ್ವ ಆರೋಗ್ಯ ಸಂಸ್ಥೆಯಿಂದ ನೆಲ್ಸನ್ ಮಂಡೇಲಾ ಪ್ರಶಸ್ತಿ ಸಹ ಲಭಿಸಿರುವುದು ಸಂತೋಷಕರ ವಿಷಯವಾಗಿದೆ ಎಂದರು.

ಯೋಗ ಹಾಗೂ ಆಯುರ್ವೇದ ಪದ್ಧತಿಗಳು ಮಾನಸಿಕ ವ್ಯಾಧಿಗಳನ್ನು ಹತೋಟಿಗೆ ತರುವಲ್ಲಿ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸ್ತಿವೆ. ನಾವು ಮನಸ್ಸನ್ನು ಸಮಚಿತ್ತದಿಂದ ಇಟ್ಟುಕೊಳ್ಳಬೇಕು. ಇಂದು ಗೃಹಣಿಯರು, ಉದ್ಯೋಗಸ್ಥರು, ವಿದ್ಯಾರ್ಥಿಗಳು, ವಯೋವೃದ್ಧರು ತಮ್ಮದೇ ಆದ ಮಾನಸಿಕ ಒತ್ತಡದಿಂದ ಬಳಲುತ್ತಿದ್ದಾರೆ. ಕೋವಿಡ್ – 19ರ ನಂತರ ಜನರಿಗೆ ಮಾನಸಿಕ ಒತ್ತಡಗಳು ಹೆಚ್ಚಿವೆ. ನಿಮ್ಹಾನ್ಸ್‌ನಲ್ಲಿ ಪದವಿ ಹಾಗೂ ಸ್ನಾತಕೋತ್ತರ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವವರಲ್ಲಿ ಹೆಚ್ಚು ಮಹಿಳೆಯರೇ ಇರುವುದು ಸಂತಸದ ಸಂಗತಿ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ನಿಮ್ಹಾನ್ಸ್‌ನಲ್ಲಿ ಕೇಂದ್ರೀಯ ಪ್ರಯೋಗಾಲಯ ಸಂಕೀರ್ಣ, ವಿಶೇಷ ಮನೋಶಾಸ್ತ್ರ ಬ್ಲಾಕ್, ಭೀಮಾ ಹಾಸ್ಟೆಲ್, ಅತ್ಯಾಧುನಿಕ ರೋಗಪತ್ತೆ ಸೌಲಭ್ಯಗಳ ಸುಧಾರಿತ ಐಟಿಎಂ, ಆರ್‌ಐ ಸ್ಕ್ಯಾನರ್ ಮತ್ತು




ಅತ್ಯಾಧುನಿಕ ಡಿ.ಎನ್.ಎ ವ್ಯವಸ್ಥೆ ಘಟಕ ಮುಂತಾದುವುಗಳನ್ನು ಗೌರವಾನ್ವಿತ ರಾಷ್ಟ್ರಪತಿಗಳು ಉದ್ಘಾಟಿಸಿದರು.

ಮಾನಸಿಕ ಆರೋಗ್ಯ ಹಾಗೂ ನರ ರೋಗಗಳ ಕ್ಷೇತ್ರದಲ್ಲಿ ನಿಮ್ಹಾನ್ಸ್ ಸಂಸ್ಥೆಯಿಂದ ಅಪರಿಮಿತ ಸಾಧನೆ : ಮುಖ್ಯಮಂತ್ರಿ ಸಿದ್ದರಾಮಯ್ಯ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾತನಾಡಿ ನಿಮ್ಹಾನ್ಸ್ ಐದು ದಶಕಗಳಿಂದ ಮಾನಸಿಕ

(2ನೇ ಪುಟ ನೋಡಿ)

# ಶಿಕ್ಷಣ ಕ್ಷೇತ್ರಕ್ಕೆ ಗಾದಾ ರವರ

## ಕೊಡುಗೆ ಅಪಾರ: ರಾಜಶೇಖರ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್. ಜ. 03: ಶಿಕ್ಷಣ ಕ್ಷೇತ್ರಕ್ಕೆ ಮಾಣಿಕಪ್ಪಾ ಗಾದಾ ರವರ ಕೊಡುಗೆ ಅಪಾರವಾಗಿದೆ. ಈ ಸಂಸ್ಥೆ ದೇಶಕ್ಕೆ ಪರಿಚಯವಾಗಬೇಕು ಆವಾಗ ಗಾದಾ ರವರ ಆಸೇ ಈಡೆರುತ್ತದೆ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ ಹೇಳಿದರು.

ಶುಕ್ರವಾರ ಹಿರಿಯ ಪಾಲಕರ. ಹಾಗೂ ಮಾಣಿಕಪ್ಪ ಗಾದಾ ರವರ 98ನೇ ಜನ್ಮದಿನಾಚಾರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಿದ್ದರು. ಗಾದಾ ಸರ್ ರವರು ಶಿಕ್ಷಣ ಕ್ಷೇತ್ರದಲ್ಲಿ ಕ್ರಾಂತಿ ಮಾಡಿದ್ದಾರೆ. ಇಂದು ಮೂರು ಸಾವೀರ ವಿದ್ಯಾರ್ಥಿಗಳು ಶಿಕ್ಷಣ ಪಡೆಯಬೇಕಾದರೆ ಮಾಣಿಕಪ್ಪಾ ಗಾದಾ ರವರ

(2ನೇ ಪುಟ ನೋಡಿ)

# ಗುತ್ತಿಗೆದಾರ ಸಚಿನ್ ಕೇಸ್; ತನಿಖೆ ಆರಂಭಿಸಿದ ಸಿಐಡಿ ತಂಡ



ಬೀದರ.ಜ.03:ಕಟ್ಟಿತುಗಾಂವ್ ಗ್ರಾಮದ ಯುವ ಗುತ್ತಿಗೆದಾರ ಸಚಿನ್ ಪಾಂಚಾಳ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಐಡಿ ಅಧಿಕಾರಿಗಳ ತಂಡ ಶುಕ್ರವಾರ (ಜ.03) ನಗರಕ್ಕೆ ಆಗಮಿಸಿದ್ದು, ತನಿಖೆಯನ್ನು ಆರಂಭಿಸಿದೆ.

ಟೆಂಡರ್ ವಂಚನೆ ಮತ್ತು ಕೊಲೆ ಬೆದರಿಕೆಯಿಂದ ನೊಂದು

(2ನೇ ಪುಟ ನೋಡಿ)

# ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ರೈತರ ಬದುಕಿಗೆ ಬೆಳಕು: ಖರ್ಗೆ

ಕಲಬುರಗಿ:ಜ.3:ಉದ್ಯೋಗ ಖಾತ್ರಿ ಯೋಜನೆ ರಾಜ್ಯದ ರೈತರ ಬದುಕಿಗೆ ಬೆಳಕಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಈ ಬಗ್ಗೆ ತಮ್ಮ ಫೇಸ್ ಬುಕ್ ಖಾತೆಯಲ್ಲಿ ಬರೆದುಕೊಂಡಿರುವ ಅವರು, ಗ್ರಾಮೀಣ ಭಾಗದ ಜನರು ವೈಯಕ್ತಿಕ ಕಾಮಗಾರಿಗಳನ್ನು ಕೈಗೊಳ್ಳಬೇಕು ಎಂದರೆ ಗ್ರಾಮಸಭೆಗಳಲ್ಲಿ ಕಾಮಗಾರಿಗೆ ಬೇಡಿಕೆ ಸಲ್ಲಿಸಬೇಕಿತ್ತು. ಇದನ್ನು ತಪ್ಪಿಸಲು ತಾವಿದ್ದಲ್ಲಿಯೇ ಆನ್ ಲೈನ್ ಮೂಲಕ ಕಾಮಗಾರಿ ಬೇಡಿಕೆ ಸಲ್ಲಿಸಲು ಅವಕಾಶ

(2ನೇ ಪುಟ ನೋಡಿ)

# ಬಸವೇಶ್ವರ ಬ್ಯಾಂಕ ಅಧ್ಯಕ್ಷರಾಗಿ ಪ್ರಕಾಶ ತಪಶೆಟ್ಟಿ ಪುನರಾಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.3:ರಾಜ್ಯದ ಪ್ರತಿಷ್ಠಿತ ಸಹಕಾರಿ ಬ್ಯಾಂಕುಗಳಲ್ಲಿ ಒಂದಾದ ಬಾಗಲಕೋಟೆಯ ಬಸವೇಶ್ವರ ಸಹಕಾರಿ ಬ್ಯಾಂಕಿಗೆ ನೂತನ ಅಧ್ಯಕ್ಷರಾಗಿ ಪ್ರಕಾಶ ತಪಶೆಟ್ಟಿ ಪುನರಾಯ್ಕೆಯಾಗಿದ್ದಾರೆ.

ಈಚೆಗೆ ನಡೆದ ನಿರ್ದೇಶಕರ ಆಯ್ಕೆ ಚುನಾವಣೆಯಲ್ಲಿ ಅವಿರೋಧ ಆಯ್ಕೆ ನಡೆದು ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆಯೂ ನಡೆಯಿತು. ಪ್ರಕಾಶ ತಪಶೆಟ್ಟಿ ಮತ್ತೊಮ್ಮೆ ಅಧ್ಯಕ್ಷರಾಗಿ ರವಿಕುಮಾರ ಯೋಗಪ್ಪ ಪಟ್ಟಣದ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ನೂತನ ಅಧ್ಯಕ್ಷ–ಉಪಾಧ್ಯಕ್ಷರ ಆಯ್ಕೆ ಪ್ರಕ್ರಿಯೆಯಲ್ಲಿ ನಿರ್ದೇಶಕರಾದ ಮೋಹನ ಗುರಲಿಂಗಪ್ಪ ವಾಲಿ, ಚಂದ್ರಶೇಖರಗೌಡ ತಮ್ಮನಗೌಡ ಪಾಟೀಲ, ಹೂವಪ್ಪ ಸೀತಪ್ಪ ರಾಥೋಡ, ವೀರಪ್ಪ ವಿರುಪಾಕ್ಷಪ್ಪ ಶಿರಗಣ್ಣನ್ನವರ, ಶ್ರೀಶೈಲ ಚನ್ನಬಸಪ್ಪ ಆರಬ್ಬಿ, ಶ್ರೀನಿವಾಸ ತಿಮ್ಮಯ್ಯ ಬಳ್ಳಾರಿ, ಶಶಿಧರ ಶಿವಯೋಗಪ್ಪ ಜಿಗಳೂರ, ಸಿದ್ದಪ್ಪ ಚಿನ್ನಪ್ಪ ಆಡಿನ, ದುರ್ಗಪ್ಪ ತಿಮ್ಮನ್ನನಾಯಕ, ಶಂಕರ ಸಂಗಪ್ಪ ಅರಿಶಿನಗೋಡಿ, ಶಂಕರಲಿಂಗ ಮೋನಪ್ಪ ತಪಶೆಟ್ಟಿ, ಸುನೀಲ ಬಾಳಾಸಾಹೇಬ ಕಲಬುರ್ಗಿ, ಶರಣಪ್ಪ ಸಂಗಪ್ಪ ಹೆರಕಲ, ಶ್ರೀಮತಿ ಶೈಲಜಾ ಮಹಾಬಳೇಶ್ವರಯ್ಯ ಗುಡಗುಂಟಿ, ಶ್ರೀಮತಿ ಗೀತಾ ಸುಭಾಸಚಂದ್ರ ನಾರಾ ಪಾಲ್ಗೊಂಡಿದ್ದರು.

ಮುಖ್ಯಕಾರ್ಯನಿರ್ವಹಣಾಧಿಕಾರಿ ವಿವೇಕಾನಂದ ಕೇಮಾಳಿ, ಬ್ಯಾಂಕಿನ ಅಧಿಕಾರಿಗಳಾದ ಬಿ.ಎಸ್.ನಾವಲಗಿ, ಎಸ್.ಬಿ.ಬದಾಮಿ, ಎಮ್.ಎಸ್.

(2ನೇ ಪುಟ ನೋಡಿ)




## ಒಂದನೇ ಪುಟದಿಂದ

# ಮಾನಸಿಕ ಕಾಯಿಲೆಗಳ ಚಿಕಿತ್ಸೆ ಫಲಕಾರಿ: ರಾಷ್ಟ್ರಪತಿ ದ್ರೌಪದಿ ಮುರ್ಮು

ಆರೋಗ್ಯ ಹಾಗೂ ನರರೋಗಗಳ ಕ್ಷೇತ್ರದಲ್ಲಿ ಅಪರಿಮಿತ ಸಾಧನೆ ಮಾಡಿದೆ, ನಿಮಾನ್ಸ್ ಮಾನಸಿಕ ಆರೋಗ್ಯ ಮತ್ತು ಶಿಕ್ಷಣಕ್ಕೆ ಮೀಸಲಾದ ಭಾರತದ ಪ್ರಪ್ರಥಮ ಸಂಸ್ಥೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಮಾನಸಿಕ ರೋಗ, ರೋಗಿ ಹಾಗೂ ಆರೈಕೆಯ ಕುರಿತಾದ ಜನರ ನಕಾರಾತ್ಮಕ ದೃಷ್ಟಿಕೋನವನ್ನು ನಿವಾರಿಸುವಲ್ಲಿ ನಿಮಾನ್ಸ್ ಶ್ರಮಿಸುತ್ತಿದೆ ಎಂದು ತಿಳಿಸಿದರು.

ಮೆದುಳು, ನರಗಳ ಖಾಯಿಲೆಗಳಿಗೆ ಅತ್ಯುತ್ತಮ ಚಿಕಿತ್ಸೆ ನೀಡುವಲ್ಲಿ ನಿಮಾನ್ಸ್ ಸಂಸ್ಥೆ ಹೆಸರುವಾಸಿಯಾಗಿದೆ. ರಾಜ್ಯದಲ್ಲಿ ಟೆಲಿ ಮಾನಸ್ ಸಹಾಯವಾಣಿ ಯಶಸ್ವಿಯಾಗಿದ್ದು, ದೂರವಾಣಿ ಆಪ್ತ ಸಮಾಲೋಚನೆ ಮೂಲಕ ಸುಮಾರು 17 ಲಕ್ಷ ಜನರು ಪ್ರಯೋಜನ ಪಡೆದಿದ್ದಾರೆ. ಜಿಲ್ಲಾ ಮಟ್ಟದಲ್ಲಿ ಸಹ ನರರೋಗ ಮತ್ತು ಇತರ ಕಾಯಿಲೆಗಳಿಗೆ ಚಿಕಿತ್ಸೆ ನೀಡಲು ತಜ್ಞರ ಸೇವೆಯನ್ನು ವಿಸ್ತರಿಸಲಾಗಿದೆ. ಸರ್ಕಾರವು ನಿಮ್ಹಾನ್ಸ್ ಸಂಸ್ಥೆಯ ಕಾರ್ಯನಿರ್ವಹಣೆಗಾಗಿ ಪ್ರತಿ ವರ್ಷ 137 ಕೋಟಿ ರೂಪಾಯಿಗಳನ್ನು ಒದಗಿಸುತ್ತಿದೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಆಲದ ಮರ ಫೌಂಡೇಷನ್ ಸಹಯೋಗದಲ್ಲಿ ನಗರದ ಸಿ.ವಿ. ರಾಮನ್ ಆಸ್ಪತ್ರೆಯಲ್ಲಿ 25 ಹಾಸಿಗೆ ಸಾಮರ್ಥ್ಯದ ತುರ್ತು ಚಿಕಿತ್ಸೆ ಮತ್ತು ರಿಕವರಿ ಕೇಂದ್ರದಲ್ಲಿ ಮಾನಸಿಕ ಕಾಯಿಲೆಯಿಂದ ಬಳಲುತ್ತಿರುವ ಬಡವರಿಗೆ ಪುನರ್ವಸತಿ ಸ್ಥಾಪಿಸಲಾಗಿದೆ. ಜಿಲ್ಲಾ ಉಪ ಕೇಂದ್ರ ಆಸ್ಪತ್ರೆಗಳಲ್ಲಿ ಮನೋ ಚೈತನ್ಯ ಮಾನಸಿಕ ಆರೋಗ್ಯ ಚಿಕಿತ್ಸಾ ಕಾರ್ಯಕ್ರಮಗಳ ಮೂಲಕ 146 ತಾಲ್ಲೂಕುಗಳ 5 ಲಕ್ಷ ಜನರು ಪ್ರಯೋಜನ ಪಡೆದಿದ್ದಾರೆ. ಒಟ್ಟಿನಲ್ಲಿ ಈ ಸಂಸ್ಥೆಯ ಸರ್ವತೋಮುಖ ಬೆಳವಣಿಗೆಗೆ ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಜನರ ಮಾನಸಿಕ ರೋಗಕ್ಕೆ ಚಿಕಿತ್ಸೆ ನೀಡುವಲ್ಲಿ ನಿಮಾನ್ಸ್‌ನಿಂದ ಹೊಸ ಮೈಲುಗಲ್ಲು ಸೃಷ್ಟಿ : ಜೆ.ಪಿ. ನಡ್ಡಾ

ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ರಸಗೊಬ್ಬರ ಮತ್ತು ರಾಸಾಯನಿಕ ಖಾತೆ ಸಚಿವರಾದ ಜಗತ್ ಪ್ರಕಾಶ್ ನಡ್ಡಾ ಅವರು ಮಾತನಾಡಿ ನಿಮ್ಹಾನ್ಸ್ ಜನರಿಗೆ ಮಾನಸಿಕ ರೋಗ ಚಿಕಿತ್ಸೆಗೆ ಸಂಬಂಧಿಸಿದಂತೆ ಹೊಸ ಮೈಲುಗಲ್ಲು ಸೃಷ್ಟಿಸಿದೆ. ದೇಶದ ಉನ್ನತ ಮಟ್ಟದ 200 ಆಸ್ಪತ್ರೆಗಳಲ್ಲಿ ನಿಮಾನ್ಸ್ ಸಹ ಒಂದು ಸ್ಥಾನ ಅಲಂಕರಿಸಿದೆ. ಲಕ್ಷಾಂತರ ಜನರು ಇಲ್ಲಿ ಮಾನಸಿಕ ಖಾಯಿಲೆಗಳಿಗೆ ಚಿಕಿತ್ಸೆ ಪಡೆಯುತ್ತಿದ್ದಾರೆ. ಇಲ್ಲಿಯ ಉತ್ತಮ ಪ್ರಯೋಗಾಲಯ ಮತ್ತು ಅತ್ಯಾಧುನಿಕ ಚಿಕಿತ್ಸೆಗಳು ಜನರಿಗೆ ಲಭ್ಯವಾಗಿದೆ. ದೇಶದಲ್ಲಿಯೇ ಈ ಸಂಸ್ಥೆ ಹೆಸರು ಮಾಡಿದ್ದು, ಮುಂದೆ ಜಾಗತಿಕ ಮಟ್ಟದಲ್ಲೂ ಸಹ ಗುರುತಿಸಲ್ಪಡುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವೈದ್ಯಕೀಯ ಶಿಕ್ಷಣ ಸಚಿವರಾದ ಡಾ. ಶರಣ ಪ್ರಕಾಶ್ ರುದ್ರಪ್ಪ ಪಾಟೀಲ್, ಸಂಸದರಾದ ತೇಜಸ್ವಿ ಸೂರ್ಯ, ಯಧುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಪಿ.ಸಿ.ಮೋಹನ್, ಡಾ. ಸಿ.ಎನ್. ಮಂಜುನಾಥ್, ನಿಮ್ಹಾನ್ಸ್ ನಿರ್ದೇಶಕಿ ಡಾ. ಪ್ರತಿಮಾ ಮೂರ್ತಿ ಸೇರಿದಂತೆ ಗಣ್ಯರುಗಳು ಹಾಗೂ ನಿಮ್ಹಾನ್ಸ್ ಸಮಸ್ಥೆಯ ಹಿರಿಯ ಅಧಿಕಾರಿಗಳು, ವೈದ್ಯರುಗಳು ಉಪಸ್ಥಿತರಿದ್ದರು.

# ಕೊಡುಗೆ ಅಪಾರ: ರಾಜಶೇಖರ ಪಾಟೀಲ

ಕೊಡುಗೆ ಅಪಾರವಾಗಿದೆ ಎಂದರು. ಮನೆಗಳಲ್ಲಿ ಹಿರಿಯರು ಇಲ್ಲದಿದ್ದರೆ ಕಳೆ ಇರುವುದಿಲ್ಲ. ಹಿರಯರಿಗೆ. ತಂದೆ ತಾಯಿಯವರಿಗೆ ಮಕ್ಕಳು ಗೌರವದಿಂದ ಕಾಣಬೇಕು ಎಂದು ಕರೆ ನೀಡಿದರು. ಮಕ್ಕಳು ಅಮೇರಿಕಾದಲ್ಲಿದ್ದರೆ ಅವರ ಮಕ್ಕಳು ವ್ರದ್ಧಾಶ್ರಮದಲ್ಲಿದ್ದಾರೆ. ಎಂದು ಕಳವಳ ವ್ಯಕ್ತ ಪಡಿಸಿದರು. ಮಾಜಿ ಶಾಸಕ.ಬಿಎಸ್ ಎಸ್ ಕೆ ಅಧ್ಯಕ್ಷ ಸುಭಾಷ್ ಕಲ್ಲೂರ ಮಾತನಾಡಿ. ಪಾಲಕರಿಗೆ ಗೌರವ ನೀಡುವುದನ್ನು ಮಕ್ಕಳು ಕಲಿತುಕೊಳ್ಳಬೇಕು. ಹಿರಿಯರಿಗೆ ಗೌರವದಿಂದ ಕಾಣಬೇಕು. ಮಾಣಿಕಪ್ಪಾ ಗಾದಾ ರವರ ಜೀವನ ಆದರ್ಶದ ಜೀವನವಾಗಿದೆ. ಶಿಕ್ಷಣದ ಜೊತೆಗೆ ಸಾಮಾಜಿಕ ಕಳಕಳಿ ಇರುವ ಧೀಮಂತ ನಾಯಕರು ಗಾದಾ ರವರಾಗಿದ್ದಾರೆ ಎಂದರು. ವೇದಿಕೆಯ ಮೇಲೆ ರಮೇಶ ಗಾದಾ, ಅನೀಲ ಪಲ್ಲೇರಿ. ಶಾಂತಕುಮಾರ ಸಲಗರ, ವೆಂಕಟ್ ಜಾಜಿ. ದತ್ತಕುಮಾರ ಚಿದ್ರಿ. ಸೇರಿದಂತೆ ಇತರರಿದ್ದರು. ಭಾಲ್ಕಿ ಶ್ರೀ ಗಳು ಆಶಿರ್ವಚನ ನೀಡಿದರು. ಪ್ರದ್ಯಾಪಕರು.ಸಿಬ್ಬಂದಿ ವರ್ಗ, ಸೇರಿದಂತೆ ಇತರರಿದ್ದರು.

# ತನಿಖೆ ಆರಂಭಿಸಿದ ಸಿಐಡಿ ತಂಡ

ಗುತ್ತಿಗೆದಾರ್ ಸಚಿನ್ ಕಳೆದ ಡಿ.26 ರಂದು ಡೆತ್ ನೋಟ್ ಬರೆದಿಟ್ಟು, ನಗರದ ಬಸವೇಶ್ವರ ವೃತ್ತ ಬಳಿಯ ರೈಲ್ವೆ ಹಳಿ ಮೇಲೆ ತಲೆಯೊಡ್ಡಿ ಆತ್ಮಹತ್ಯೆ ಮಾಡಿಕೊಂಡಿದ್ದ. ಈ ಕುರಿತು ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿತ್ತು.

ಆದರೆ, ಇತ್ತೀಚೆಗೆ ರಾಜ್ಯ ಸರ್ಕಾರ ಪ್ರಕರಣವನ್ನು ಸಿಐಡಿಗೆ ವಹಿಸಿ ಆದೇಶಿಸಿತ್ತು. ಈ ಹಿನ್ನೆಲೆ ಶುಕ್ರವಾರ ಸಿಐಡಿ ಡಿವೈಎಸ್.ಪಿ ಸುಲೇಮನ್ ತಹಸೀಲ್ದಾರ್ ನೇತೃತ್ವದ ತಂಡ ಬೀದರ್ ಗೆ ಆಗಮಿಸಿದೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿ, ನಂತರ ರೈಲ್ವೆ ಠಾಣೆಗೆ ಭೇಟಿ ನೀಡಿದೆ. ಈವರೆಗೆ ನಡೆಸಿರುವ ತನಿಖೆಯ ವರದಿಯನ್ನು ಪಡೆದಿದೆ.

ತದನಂತರ ಆತ್ಮಹತ್ಯೆ ಘಟನಾ ಸ್ಥಳಕ್ಕೆ ತೆರಳಿದ ಅಧಿಕಾರಿಗಳ ತಂಡ ಜಾಗವನ್ನು ಪರಿಶೀಲಿಸಿದೆ.

# ಪ್ರಕಾಶ ತಪಶೆಟ್ಟಿ ಪುನರಾಯ್ಕೆ

ಗುಡಗುಂಟಿ, ಪಿ. ಎನ್.ಹಳ್ಳಿಕೇರಿ, ವ್ಹಿ.ಎಮ್.ಹಿರೇಮಠ, ರಂಗನಾಥ ಬಡಿಗೇರ, ಶ್ರೀಮತಿ ಜ್ಯೋತಿ ನಾವಲಗಿ, ಎಸ್.ಎಚ್.ಕುರ್ತಕೋಟಿ, ಅರವಿಂದ ಯಲಿಗಾರ ಉಪಸ್ಥಿತರಿದ್ದು, ನೂತನ ಅಧ್ಯಕ್ಷ, ಉಪಾಧ್ಯಕ್ಷರು ಹಾಗೂ ನಿರ್ದೇಶಕರಿಗೆ ಹೂಗುಚ್ಛ ನೀಡಿ ಅಭಿನಂದಿಸಿದರು.

# ರೈತರ ಬದುಕಿಗೆ ಬೆಳಕು: ಖರ್ಗೆ

ಕಲ್ಪಿಸಲಾಗಿದೆ. ಈ ವಿನೂತನ ವ್ಯವಸ್ಥೆಗೆ ರಾಜ್ಯಾದ್ಯಂತ ಉತ್ತಮ ಸ್ಪಂದನೆ ದೊರೆತಿದ್ದು, ಬೆಳಗಾವಿ ಜಿಲ್ಲೆಯೊಂದರಲ್ಲಿಯೇ 23,380 ಅರ್ಜಿ ಸಲ್ಲಿಕೆಯಾಗಿವೆ. ಇದು ಹೆಮ್ಮೆಯ ಸಂಗತಿಯಾಗಿದೆ ಎಂದು ಹೇಳಿದ್ದಾರೆ.

" ನರೇಗಾ ಯೋಜನೆಯಡಿ ರೈತರು ಕೃಷಿ ಹೊಂಡ, ಬದು ನಿರ್ಮಾಣ, ಭೂಮಿ ಸುಧಾರಣೆ ಮಾಡಿಕೊಳ್ಳಬಹುದು. ಜೊತೆಗೆ ದನದ ಕೊಟ್ಟಿಗೆ ಮತ್ತು ಶೆಡ್ ನಿರ್ಮಾಣವನ್ನು ಮಾಡಿಕೊಳ್ಳಬಹುದಾಗಿದೆ. ತೋಟಗಾರಿಕೆ ಇಲಾಖೆ ವತಿಯಿಂದ ಬಾಳೆಹಣ್ಣಿನ ತೋಟ, ಚಿಕ್ಕು, ಪೇರಲ, ಪಪ್ಪಾಯಿ, ದ್ರಾಕ್ಷಿ, ಮುಂತಾದ ಹಣ್ಣಿನ ತೋಟ ನಿರ್ಮಾಣ ಮಾಡಬಹುದು. ಅರಣ್ಯ ಇಲಾಖೆ ವತಿಯಿಂದ ಹೊಲದ ಬದುಗಳಲ್ಲಿ ಸಸಿ ನೆಡಲು ಅವಕಾಶವಿದೆ. ಇಂತಹ ಹತ್ತಾರು ಯೋಜನೆಗಳನ್ನು ರೈತರು ನರೇಗಾದ ಮೂಲಕ ಸದುಪಯೋಗ ಪಡೆದುಕೊಳ್ಳುತ್ತಿರುವ ನಿಜಕ್ಕೂ ಸಂತಸ ತಂದಿದೆ" ಎಂದು ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಯೋಜನೆಗಳ ಅನುಷ್ಠಾನಕ್ಕೆ, ಸುಗಮ ಸೇವೆಗೆ ಹಾಗೂ ಪಾರದರ್ಶಕತೆಗಾಗಿ ತಂತ್ರಜ್ಞಾನದ ಬಳಕೆ ಸಹಕಾರಿಯಾಗಿದೆ. ಈ ಆನ್ ಲೈನ್ ವ್ಯವಸ್ಥೆಗೆ ಗ್ರಾಮೀಣ ಜನರಿಂದ ಉತ್ತಮ ಸ್ಪಂದನೆ ದೊರೆಯುತ್ತಿದ್ದು, ನಮ್ಮ ವಿಶಿಷ್ಠ ಪ್ರಯತ್ನಕ್ಕೆ ಯಶಸ್ಸು ದೊರಕಿದಂತಾಗಿದೆ. ಗ್ರಾಮೀಣ ಜನರು ತಂತ್ರಜ್ಞಾನದ ಬಳಕೆಯಲ್ಲಿ ನಮ್ಮ ನಿರೀಕ್ಷೆಗಿಂತ ಹೆಚ್ಚು ಆಸಕ್ತಿ ವಹಿಸುತ್ತಿರುವುದು ಉತ್ತಮ ಬೆಳವಣಿಗೆ ಎಂದು ಕೊಂಡಾಡಿದ್ದಾರೆ.


# ಮಹಿಳಾ ಸಾಕ್ಷರತೆಗೆ ಶ್ರಮಿಸಿದ್ದ ಸಾವಿತ್ರಿಬಾಯಿ




ಬೀದರ.ಜ.03:ಸಾವಿತ್ರಿಬಾಯಿ ಫುಲೆ ದೇಶದಲ್ಲಿ ಮಹಿಳಾ ಸಾಕ್ಷರತೆಗೆ ಶ್ರಮಿಸಿದ್ದರು ಎಂದು ಕಲಬುರಗಿಯ ಸಾಹಿತಿ ಕಾವ್ಯಶ್ರೀ ಮಹಾಗಾಂವಕರ್ ಹೇಳಿದರು.ನಗರದಜೀಜಾಮಾತಾ ಶಿಕ್ಷಣ ಕೇಂದ್ರದಲ್ಲಿ ಶುಕ್ರವಾರ ಆಯೋಜಿಸಿದ್ದ ಸಾವಿತ್ರಿಬಾಯಿ ಫುಲೆ ಜಯಂತ್ಯುತ್ಸವ ಉದ್ಘಾಟಿಸಿ ಅವರು ಮಾತನಾಡಿದರು.19ನೇ ಶತಮಾನದಲ್ಲೇ ಶಾಲೆಗಳನ್ನು ಆರಂಭಿಸಿ, ಅಕ್ಷರ ಕಲಿಸಿದ್ದರು. ಅಂದಿನ ಬ್ರಿಟಿಷ್ ಸರ್ಕಾರ ಅವರನ್ನು ಭಾರತದ ಮೊದಲ ಶಿಕ್ಷಕಿಯೆಂದು ಪ್ರಶಸ್ತಿ ನೀಡಿ, ಗೌರವಿಸಿತು ಎಂದು ತಿಳಿಸಿದರು. ಅಮೋಘ ಸಾಧನೆ ಮಾಡಿದ್ದಕ್ಕಾಗಿ ಸಾವಿತ್ರಿಬಾಯಿ ಅವರನ್ನು ಇಂದಿಗೂ ಸ್ಮರಿಸಿಕೊಳ್ಳುತ್ತಿದ್ದೇವೆ. ಮಹಿಳೆಯರಿಗೆ ಅವರ ಸಾಧನೆ ಪ್ರೇರಣೆಯಾಗಬೇಕು ಎಂದು ಹೇಳಿದರು. ಸಾವಿತ್ರಿಬಾಯಿ ಫುಲೆ ಮಹಿಳಾ ಶಿಕ್ಷಣಕ್ಕೆ ಸಂಕಲ್ಪ ತೊಟ್ಟಿದ್ದರು. ಎಷ್ಟೇ ಪ್ರತಿಕೂಲ ಪರಿಸ್ಥಿತಿ ಎದುರಾದರೂ ಅದ-ರಿಂದ ಹಿಂದೆ ಸರಿಯಲಿಲ್ಲ. ಅಂದುಕೊಂಡಿದ್ದನ್ನು ಮಾಡಿ ತೋರಿದ್ದರು ಎಂದು ಅಂಚೆ ಇಲಾಖೆಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಮಂಗಲಾ ಭಾಗವತ್ ತಿಳಿಸಿದರು.ಸಾವಿತ್ರಿಬಾಯಿ ಫುಲೆ ಅವರ ಯಶಸ್ಸಿನಲ್ಲಿ ಅವರ ಪತಿಯ ಪಾತ್ರ ಬಹಳ ಮಹತ್ವದ್ದಾಗಿತ್ತು ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಪ್ರಧಾನ ಕಾಯದರ್ಶಿ ಪ್ರಭುಲಿಂಗ ತೂಗಾವೆ ಹೇಳಿದರು.

# ಹಾರಕೂಡದಲ್ಲಿ ಶ್ರೀ ಚನ್ನಬಸವ ಶಿವಯೋಗಿಗಳ 73ನೇಯ ಜಾತ್ರಾ ಮಹೋತ್ಸವ ಹಾಗೂ ರಥೋತ್ಸವ ಇಂದು




ಮಲ್ಲಮ್ಮ ನುಡಿ ವಾರ್ತೆ

(ವರದಿ. ಡಿ. ಕೆ. ಪ್ರಹ್ಲಾದ.) ಬಸವಕಲ್ಯಾಣ :ಜ.3: ತಾಲೂಕಿನ ಸುಕ್ಷೇತ್ರ ಹಾರಕೂಡ ಸಂಸ್ಥಾನ ಹಿರೇಮಠದಲ್ಲಿ ಜನವರಿ 4 ರಿಂದ 6 ರವರೆಗೆ ಪೂಜ್ಯಶ್ರೀ ಚನ್ನಬಸವ ಶಿವಯೋಗಿಗಳ 73 ನೇಯ ಜಾತ್ರಾ ಮಹೋತ್ಸವ ಕಾರ್ಯಕ್ರಮವನ್ನು ಅದುರಿಯಾಗಿ ಆಚರಿಸಲಾಗುತ್ತಿದೆ. ಜನೇವರಿ 4 ರಂದು ಬೆಳಿಗ್ಗೆ 8 ಗಂಟೆಗೆ ಅಭಿಷೇಕ ಸಂಜೆ 4 ಕೆ ಪಲ್ಲಕಿ ಉತ್ಸವ 6 ಗಂಟೆಗೆ ಸಂಭ್ರಮದಿಂದ ರಥೋತ್ಸವ. ಹಾಗೂ 7 ಗಂಟೆಗೆ ಶಿವಾನುಭವ ಚಿಂತನ ಕಾರ್ಯಕ್ರಮ ಜರುಗಲಿದೆ. ಈ ಕಾರ್ಯಕ್ರಮದಲ್ಲಿ ಧಾರವಾಡದ ಮುರಘಾ ಮಠದ ಪೂಜ್ಯ ಶ್ರೀ ಡಾ. ಮಲ್ಲಿಕಾರ್ಜುನ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಹಾರಕೂಡ ಮಠದ ಪಿಠಾಧಿಪತಿಗಳಾದ ಪರಮಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನೇತೃತ್ವ. ಬೈಲೂರಿನ ಪೂಜ್ಯ ಶ್ರೀ ನಿಜಗುಣ ಪ್ರಭು. ತೋಂಟದಾರ್ಯ ಮಹಾಸ್ವಾಮಿಜಿ ಅಧ್ಯಕ್ಷತೆ ವಹಿಸುವರು. ಸಂಸದರಾದ ಸಾಗರ ಖಂಡ್ರೆ ಸಮಾರಂಭವನ್ನು ಉದ್ಘಾಟಿಸಲಿದ್ದಾರೆ. ಸಿ. ಎಂ. ಸಲಹೆಗಾರ ಆಳಂದ ಶಾಸಕರಾದ ಬಿ. ಆರ್. ಪಾಟೀಲ. ಶಾಸಕರಾದ ಶರಣು ಸಲಗರ್. ಹುಮನಾಬಾದ್ ಶಾಸಕರಾದ ಡಾ. ಸಿದ್ದು ಪಾಟೀಲ. ಬಸವರಾಜ ಮತ್ತಿಮೂಡ. ವಿಧಾನ ಪರಿಷತ್ ಸದಸ್ಯರಾದ ಎಂ. ಜಿ. ಮುಳೆ. ಡಾ. ಚಂದ್ರಶೇಖರ ಪಾಟೀಲ್. ಜಗದೇವ ಗುತ್ತೇದಾರ. ಕರ್ನಾಟಕ ಮೀನುಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಾಲಾ ಬಿ. ನಾರಾಯಣರಾವ. ಕಾಂಗ್ರೆಸ್ ಮುಖಂಡರಾದ ಧನರಾಜ ತಾಡಂಪ್ಪಳ್ಳಿ ಸೇರಿದಂತೆ ಅನೇಕರು ಪಾಲ್ಗೊಳ್ಳಲಿದ್ದಾರೆ. ಸಿದ್ದರಾಮಯ್ಯ ಸ್ವಾಮಿ ಗೋರ್ಟಾ. ಜನಾರ್ದನ ವಾಘಮಾರೆ. ನವಲಿಂಗ ಪಾಟೀಲ. ಭಗವಂತರಾವ ಕಣ್ಣೂರ್ ಅವರಿಂದ ಸಂಗೀತ ಸಂಗೀತ ಸಭೆ ಮಲ್ಲಯ್ಯಾ ಸ್ವಾಮಿ ಐನಾಪುರ ಮತ್ತು ಶಿವಕುಮಾರ ಶಾಸ್ತ್ರಧುತ್ತರಗಾಂವ ಶಿವಕೀತ್ರನೆ. ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಮಠದ ವತಿಯಿಂದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಡಿತರ ವಿತರಣೆಗೆ ಹಣ ವಸೂಲಿ: ಶಾಸಕ ಪ್ರಭು ಚವ್ಹಾಣ ಗರಂ



ಶಿವಕುಮಾರ ಬಿರಾದಾರ

ಔರಾದ್:ಜ.3:ಪಡಿತರ ಪಡೆಯಬೇಕೆಂದರೆ ನ್ಯಾಯಬೆಲೆ ಅಂಗಡಿಯಲ್ಲಿ 10 ರುಪಾಯಿ ಕೊಟ್ಟು ಹೆಬ್ಬೆಟ್ಟಿನ ಗುರುತು ನೀಡಬೇಕು. ಇಲ್ಲವಾದರೆ ಪಡಿತರ ಸಿಗುವುದಿಲ್ಲ. ಒಂದು ಕೆ.ಜಿ ಅಕ್ಕಿ ಕಡಿತಗೊಳಿಸುತ್ತಿದ್ದಾರೆ. ತಿಂಗಳು ಪೂರ್ತಿ ಪಡಿತರ ವಿತರಿಸದೇ 2–3 ದಿನ ಮಾತ್ರ ವಿತರಿಸಲಾಗುತ್ತಿದೆ ಎಂದು ಜಕನಾಳ ಗ್ರಾಮಸ್ಥರು ಸಮಸ್ಯೆ ಹೇಳಿಕೊಂಡಾಗ ಶಾಸಕ ಪ್ರಭು ಬಿ.ಚವ್ಹಾಣ ಅವರು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಧಿಕಾರಿಗಳ ವಿರುದ್ಧ ಕಿಡಿಕಾರಿದರು.

ಗ್ರಾಮ ಸಂಚಾರದ ನಿಮಿತ್ತ ಶಾಸಕರು ಜ.3ರಂದು ಔರಾದ(ಬಿ) ತಾಲ್ಲೂಕಿನ ಜಕನಾಳ ಗ್ರಾಮಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಸಾರ್ವಜನಿಕರು ಒಬ್ಬೊಬ್ಬರಾಗಿ ಸಮಸ್ಯೆಗಳನ್ನು ಹೇಳಿದರು. ಪಡಿತರ ಪಡೆಯಲು ಬೇರೆ ಊರಿಗೆ ಹೋಗಬೇಕಾಗುತ್ತದೆ. ಒಂದು ದಿನ ಹೆಬ್ಬೆಟ್ಟಿನ ಗುರುತು ನೀಡಲು ಹೋಗಬೇಕು. ಮತ್ತೊಮ್ಮೆ ಪಡಿತರ ಪಡೆಯಲು ಹೋಗಬೇಕು. ತಿಂಗಳಲ್ಲಿ 2–3 ದಿನ ಮಾತ್ರ ಪಡಿತರ ವಿತರಣೆ ಮಾಡುತ್ತಾರೆ. ನಂತರ ಹೋದರೆ ರೇಷನ್ ಸಿಗದೇ ವಾಪಸ್ಸಾಗಬೇಕಾಗುತ್ತದೆ. ಕೂಲಿ–ನಾಲಿ ಮಾಡಿಕೊಂಡು ಬದುಕುವ ನಾವು ಎಲ್ಲ ಕೆಲಸ ಬಿಟ್ಟು ರೇಷನ್‌ಗಾಗಿ ಅಲೆದಾಡಬೇಕಾಗುತ್ತಿದೆ ಎಂದು ಗ್ರಾಮಸ್ಥರು ಶಾಸಕರ ಗಮನಕ್ಕೆ ತಂದರು.

ಇಷ್ಟೊಂದು ಸಮಸ್ಯೆಯಿದ್ದರೂ ನೀವು ಕಣ್ಣುಮುಚ್ಚಿಕುಳಿತಿದ್ದೀರಾ ? ಸಂಬಂಧಪಟ್ಟವರ ವಿರುದ್ಧ ಇನ್ನೂ ಯಾಕೆ ಕ್ರಮ ಜರುಗಿಸಿಲ್ಲ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಧಿಕಾರಿಗಳ ವಿರುದ್ಧ ಆಕ್ರೋಶಗೊಂಡರು. ಇದು ಒಂದು ಊರಿನ ಸಮಸ್ಯೆ ಮಾತ್ರವಲ್ಲ. ಎಲ್ಲ ಗ್ರಾಮಗಳಲ್ಲಿ ಇದೇ ರೀತಿಯ ಪರಿಸ್ಥಿತಿಯಿದೆ. ಬಡವರಿಂದ ಹಣ ವಸೂಲಿ ಮಾಡುವುದು ಮಹಾಪಾಪ. ಅಂಥವರ ವಿರುದ್ಧ ಕೂಡಲೇ ಕಠಿಣ ಕ್ರಮವಾಗಬೇಕು. ಇಲ್ಲವಾದಲ್ಲಿ ತಮ್ಮ ವಿರುದ್ಧವೇ ಕ್ರಮಕ್ಕೆ ಮುಂದಾಗಬೇಕಾಗುತ್ತದೆ ಎಂದು ಅಧಿಕಾರಿಗಳಿಗೆ ಎಚ್ಚರಿಸಿದರು.

ನ್ಯಾಯಬೆಲೆ ಅಂಗಡಿ ಎಲ್ಲೇ ಇರಲಿ. ವಿತರಕರು ಪ್ರತಿ ತಿಂಗಳು ಗ್ರಾಮಕ್ಕೆ ಬಂದು ಪಡಿತರ ವಿತರಣೆ ಮಡಬೇಕು. ಹೆಬ್ಬೆಟ್ಟುಗುರುತು ಪಡೆಯಲು ಎಲ್ಲಿಯೂ ಹಣ ಪಡೆಯುವಂತಿಲ್ಲ. ತಿಂಗಳು ಪೂರ್ತಿ ಪಡಿತರ ವಿತರಣೆ ಮಾಡಬೇಕು ಮತ್ತು ನಿಗದಿತ ಪ್ರಮಾಣದಲ್ಲಿ ರೇಷನ್ ಕೊಡಬೇಕು. ಮುಂದಿನ ದಿನಗಳಲ್ಲಿ ಇಂತಹ ದೂರುಗಳು ಪುನಃ ಕೇಳಿ ಬಂದರೆ ಇಲಾಖೆಯ ಅಧಿಕಾರಿಗಳು ಸಮಸ್ಯೆ ಎದುರಿಸಬೇಕಾಗುತ್ತದೆ ಎಂದರು. ಅಲ್ಲದೇ ಪಡಿತರಕ್ಕಾಗಿ ಯಾರೊಬ್ಬರೂ ಹಣ ಪಾವತಿಸುವ ಅಗತ್ಯವಿಲ್ಲ. ಯಾರಾದರೂ ಹಣ ಕೇಳಿದರೆ ನೇರವಾಗಿ ನನ್ನನ್ನು ಸಂಪರ್ಕಿಸಿ ಎಂದು ಗ್ರಾಮಸ್ಥರಿಗೆ ಹೇಳಿದರು.

ಸುಂದಾಳ, ನಂದ್ಯಾಳ, ಮಾನೂರ(ಕೆ), ನಾಗಮಾರಪಳ್ಳಿ, ಕರಂಜಿ(ಕೆ), ಕರಂಜಿ(ಬಿ), ರಾಯಪಳ್ಳಿ ಹಾಗೂ ಲಿಂಗದಳ್ಳಿ ಗ್ರಾಮದಲ್ಲಿ ಸಂಚರಿಸಿ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿದರಲ್ಲದೇ ಶಾಲೆ, ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿದರು. ರಸ್ತೆ, ಚರಂಡಿ, ಹೆಚ್ಚುವರಿ ತರಗತಿ ಕೋಣೆಗಳು, ಸಮುದಾಯ ಭವನ ಹೀಗೆ ಅವಶ್ಯಕ ಕೆಲಸಗಳನ್ನು ಆದ್ಯತೆಗೆ ಅನುಗುಣ ಮಾಡಿಕೊಡಲಾಗುವುದೆಂದು ಭರವಸೆ ನೀಡಿದರು. ಗ್ರಾಮದಲ್ಲಿನ ಕುಡಿಯುವ ನೀರು, ರಸ್ತೆ, ಚರಂಡಿ, ವಿದ್ಯುತ್ ದೀಪದಂತಹ ಸಮಸ್ಯೆಗಳನ್ನು ಪರಿಹರಿಸುವಂತೆ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ಔರಾದ(ಬಿ) ಎಪಿಎಂಸಿ ಅಧ್ಯಕ್ಷರಾದ ಧೊಂಡಿಬಾ ನರೋಟೆ, ತಹಸೀಲ್ದಾರರಾದ ಮಲಶೆಟ್ಟಿ ಚಿದ್ರೆ, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ ಪಾಟೀಲ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಎಇಇ ಸುಭಾಷ, ಕ್ಷೇತ್ರ ಶಿಕ್ಷಣಾಧಿಕಾರಿ ಸುಧಾರಾಣಿ, ಜೆಸ್ಕಾಂ ಎಇಇ ರವಿ ಕಾರಬಾರಿ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಗಾಯತ್ರಿ, ತಾಲ್ಲೂಕು ಪಂಚಾಯತ್ ಸಹಾಯಕ ನಿರ್ದೇಶಕ ಶಿವಕುಮಾರ ಘಾಟೆ, ಕೃಷಿ ಇಲಾಖೆಯ ಧೂಳಪ್ಪ, ಪಂಚಾಯತ್ ರಾಜ್ ಇಂಜಿನೀಯರಿಂಗ್ ಇಲಾಖೆಯ ವೆಂಕಟರಾವ ಶಿಂಧೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ರವೀಂದ್ರ ಕಲ್ಯಾಣ, ಪಶು ಸಂಗೋಪನೆ ಇಲಾಖೆಯ ಫಾಹೀಮ್ ಖು-ರೇಶಿ, ಸಿಡಿಪಿಓ ಎಮಲಪ್ಪಾ, ಮುಖಂಡರಾದ ವಸಂತ ಬಿರಾದಾರ, ಸಚಿನ ರಾಠೋಡ್, ಕೇರಬಾ ಪವಾರ, ಬಸವರಾಜ ಪಾಟೀಲ ಕಮಲನಗರ, ಶಿವರಾಜ ಅಲ್ಮಾಜೆ, ಖಂಡೋಬಾ ಕಂಗಟೆ, ಸುಜಿತ ರಾಠೋಡ್, ಪ್ರದೀಪ ಪವಾರ, ರವೀಂದ್ರ ರೆಡ್ಡಿ, ಖಾಜಾಮಿಯ್ಯಾ, ಸಂಜು ವಡೆಯರ್, ರಾಮರೆಡ್ಡಿ ಪಾಟೀಲ, ರಾವಸಾಬ ಪಾಟೀಲ, ಶರಣಪ್ಪ ಇಟಗ್ಯಾಳ, ಜಗದೀಶ ಪಾಟೀಲ, ಅನೀಲ ಬಿರಾದಾರ, ಬಾಬು ರಾಠೋಡ್, ದೇವಿದಾಸ ಪವಾರ್, ವಾಸುದೇವ ರಾಠೋಡ್, ಹರಿದಾಸ ರಾಠೋಡ್ ಸೇರಿದಂತೆ ಇತರರಿದ್ದರು.

# ಭಾರತೀಯ ಸಂಸ್ಕೃತಿ ಉತ್ಸವ ಪ್ರಚಾರಕ್ಕೆ ಕುದ್ರೋಳಿ ಗಣೇಶ್ ಜಾದೂ ಸ್ಪರ್ಶ





ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜ.3: ಸೇಡಂನಲ್ಲಿ ಜನವರಿ 29 ರಿಂದ ಫೆಬ್ರವರಿ 6 ರವರೆಗೆ ನಡೆಯಲಿರುವ ಏಳನೇ ಭಾರತೀಯ ಸಂಸ್ಕೃತಿ ಉತ್ಸವದ ಪ್ರಚಾರ ಅಭಿಯಾನಕ್ಕೆ ಅಂತರಾಷ್ಟ್ರೀಯ ಜಾದೂಗಾರ ಕುದ್ರೋಳಿ ಗಣೇಶ್ ಜನವರಿ ಮೂರರಿಂದ 12 ರವರೆಗೆ ಜಾಗೃತಿ ಅಭಿಯಾನ ಕೈಗೊಂಡಿ-ದ್ದು ಬಸವಕಲ್ಯಾಣದಲ್ಲಿ ಶುಭಾರಂಭಗೊಂಡಿದೆ.

ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳ ಒಟ್ಟು 20 ಕಡೆಗಳಲ್ಲಿ ಜಾಗೃತಿ ಜಾದೂ ಪ್ರದರ್ಶನ ಮಾಡುವುದರ ಮೂಲಕ ವಿನೂತನ ಪ್ರಚಾರ ಅಭಿಯಾನ ಕೈಗೊಳ್ಳಲು ಭಾರತೀಯ ಸಂಸ್ಕೃತಿ ಉತ್ಸವದ ಪ್ರಧಾನ ಸಂಯೋಜಕರಾದ ಬಸವರಾಜ ಪಾಟೀಲ್ ಸೇಡಂ ಸಂಕಲ್ಪ ಕೈಗೊಂಡಿದ್ದು ಅದರನ್ವಯ ಜನವರಿ 3 ರಂದು ಬಸವಕಲ್ಯಾಣದಲ್ಲಿ ಜಾಗೃತಿ ಜಾದೂ ಉದ್ಘಾಟನೆಗೊಂಡಿತು. ವಿಕಾಸ ಅಕಾಡೆಮಿಯ ಬೀದರ್ ಜಿಲ್ಲಾ ಸಂಚಾಲಕರಾದ ರೇವಣಸಿದ್ದಪ್ಪ ಜಲಾದೆ ನೇತೃತ್ವದಲ್ಲಿ ಕುದ್ರೋಳಿ ಗಣೇಶ್ ಮತ್ತು ಅವರ ತಂಡವನ್ನು ಸ್ವಾಗತಿಸಿ ಉದ್ಘಾಟನೆ ನೆರವೇರಿಸಲಾಯಿತು. ಮಧ್ಯಾಹ್ನ ನಂತರ ಭಾಲ್ಕಿಯಲ್ಲಿ ಜಾದೂ ಪ್ರದರ್ಶನಗೊಂಡಿತು. ಜನವರಿ 4ರಂದು ಶನಿವಾರ ಬೀದರ್ ನಗರದಲ್ಲಿ ಎರಡು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಸುಮಾರು ಒಂದುವರೆ ಗಂಟೆಗಳ ಕಾಲದ ಕಾರ್ಯಕ್ರಮದಲ್ಲಿ ಭಾರತೀಯ ಸಂಸ್ಕೃತಿ ಉತ್ಸವದ ಮಾಹಿತಿ ಹಾಗೂ ಮಹತ್ವವನ್ನು ಸಾರುವುದರ ಜೊತೆಗೆ ಭಾರತೀಯ ಪರಂಪರೆ, ಕೃಷಿ, ಸ್ವಚ್ಛತೆ, ಭಾವೈಕ್ಯತೆ ಮುಂತಾದ ವಿಷಯಗಳ ಕುರಿತಾಗಿ ಮನೋರಂಜನೆಯ ಜೊತೆಗೆ ವಿಸ್ಮಯ ಜಾದುನಲ್ಲಿ ಕಲಾಪ್ರದರ್ಶನ ನೀಡುವುದರ ಮೂಲಕ ಜಾದೂ ಜಾಥಾ ವಿದ್ಯಾರ್ಥಿಗಳು ಯುವಜನರು ಮತ್ತು ಸಾರ್ವಜನಿಕರ ಮನ ಸೂರೆಗೊಳ್ಳುತ್ತಿದೆ. ಪ್ರದರ್ಶನ ನೀಡಿದ ಕಡೆಗಳಲ್ಲಿ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿರುವುದಕ್ಕೆ ಸಂತಸವಾಗಿದೆ ಎಂದು ಅಂತರಾಷ್ಟ್ರೀಯ ಖ್ಯಾತಿಯ ಜಾದೂಗಾರ ಕುದ್ರೋಳಿ ಗಣೇಶ್ ಹೇಳಿದರು.

ಕಲ್ಬುರ್ಗಿಯಲ್ಲಿ ಜನವರಿ 5ರಂದು ಬೆಳಗ್ಗೆ 10.30 ಕ್ಕೆ ಶ್ರೀ ಶರಣಬಸವೇಶ್ವರ ವಸತಿ ಶಾಲೆ ಹಾಗೂ ಮಧ್ಯಾಹ್ನ 2 ಗಂಟೆಗೆ ಸರ್ವಜ್ಞ ಶಿಕ್ಷಣ ಸಂಸ್ಥೆಯಲ್ಲಿ ಹಾಗೂ ಜನವರಿ 6ರಂದು ಬೆಳಿಗ್ಗೆ 10.30 ಕ್ಕೆ ಕಲ್ಬುರ್ಗಿಯ ಸಂತೋಷ್ ಕಾಲೋನಿಯ ಮಿಲೇನಿಯಮ್ ಶಾಲೆ, 12.30ಕ್ಕೆ ನೆಹರು ಗಂಜ್ ನ ನಗರೇಶ್ವರ ಶಾಲೆಯಲ್ಲಿ ಹಾಗೂ ಮಧ್ಯಾಹ್ನ 3.30ಕ್ಕೆ ಆರಾಧನಾ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಜಾಗೃತಿ ಜಾದೂ ಪ್ರದರ್ಶನಗೊಳ್ಳಲಿದೆ.

ಯಾದಗಿರಿ ಜಿಲ್ಲೆಯಲ್ಲಿ ಜನವರಿ 7ರಂದು ಜಾಗೃತಿ ಜಾದೂ ನಡೆಯಲಿದ್ದು ಬೆಳಿಗ್ಗೆ 10 ಗಂಟೆಗೆ ಯಾದಗಿರಿ ನಗರದ ಸರಕಾರಿ ಪಿಯು ಕಾಲೇಜ್ ಹಾಗೂ ಮಧ್ಯಾಹ್ನ 2.30ಕ್ಕೆ ಸುರಪುರದ ರಂಗಂಪೇಟೆಯ ವೀರಶೈವ ಕಲ್ಯಾಣ ಮಂಟಪದಲ್ಲಿ ಜಾದೂ ಪ್ರದರ್ಶನ ನಡೆಯಲಿದೆ.

ರಾಯಚೂರು ಜಿಲ್ಲೆಯಲ್ಲಿ ಜನವರಿ 8ರಂದು ಬೆಳಿಗ್ಗೆ 10 ಗಂಟೆಗೆ ರಾಯಚೂರು ನಗರದ ಜಂಬಲದಿನ್ನಿ, ರಂಗಮಂದಿರದಲ್ಲಿ ಹಾಗೂ 2.30ಕ್ಕೆ ಮಸ್ಕಿಯ ಜೋಗಿನ್ ರಾಮಣ್ಣ ಪ್ರೌಢಶಾಲೆಯಲ್ಲಿ ಜಾಗೃತಿ ಜಾದೂ ಪ್ರದರ್ಶನ ನೆರವೇರಲಿದೆ. ಜನವರಿ 9 ರಂದು ಕೊಪ್ಪಳ ಜಿಲ್ಲೆ, ಹತ್ತರಂದು ವಿಜಯನಗರ ಜಿಲ್ಲೆ ಹಾಗೂ ಜನವರಿ 11 ಮತ್ತು 12ರಂದು ಬಳ್ಳಾರಿ ಜಿಲ್ಲೆಗಳಲ್ಲಿ ಜಾಗೃತಿ ಜಾದೂ ಪ್ರದರ್ಶನ ಏರ್ಪಡಿಸಲಾಗಿದೆ. ಜಾಗೃತಿ ಜಾದೂ ಕಾರ್ಯಕ್ರಮಕ್ಕೆ ಸಾರ್ವಜನಿಕರಿಗೆ ಮುಕ್ತ ಪ್ರವೇಶವಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಪ್ರದರ್ಶನವನ್ನು ವೀಕ್ಷಿಸಬೇಕು ಎಂದು ಮಾಧ್ಯಮ ವಿಭಾಗದ ಸಂಚಾಲಕರಾದ ಡಾ. ಸದಾನಂದ ಪೆರ್ಲ ಹಾಗೂ ಪ್ರಭಾಕರ ಜೋಶಿ ಸೇಡಂ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜ. 5ಕ್ಕೆ ಕಾವ್ಯ ಸಂಸ್ಕೃತಿ ಯಾನ!

ಮಲ್ಲಮ್ಮ ನುಡಿ ವಾರ್ತೆ

ಬೀದರ್ ಡಿ 03– ಬೀದರ ನಗರದ ಹೋಟೆಲ್ ಕೃಷ್ಣರೇಜೆನ್ಸಿ ಸಭಾಂಗಣದಲ್ಲಿ ಜ. 5 ರಂದು ರವಿವಾರ ಬೆಳಗ್ಗೆ 10 ರಿಂದ ಸಾಯಂಕಾಲ 6:30 ರವರಿಗೆ ರಂಗಮಂಡಲ ಬೆಂಗಳೂರು, ಅತಿವಾಳೆ ಸಾಂಸ್ಕೃತಿಕ ಪ್ರತಿಷ್ಠಾನ ಬೀದರ, ಹಾಗೂ ಪ್ರತಿ ಜಿಲ್ಲೆ ಮತ್ತು ಕನ್ನಡ ಪ್ರದೇಶದಲ್ಲಿ ಸ್ಥಳೀಯ ಸಂಘ ಸಂಸ್ಥೆಗಳ ಸಹಕಾರದೊಂದಿಗೆ "ಕಾವ್ಯ ಸಂಸ್ಕೃತಿ ಯಾನ" ಬೀದರ, ರಾಷ್ಟ್ರ ಕವಿ ಕುವೆಂಪು ಅವರ ಜನ್ಮದಿನೋತ್ಸವಪ್ರಯುಕ್ತ "ಶರಣರ ನಾಡಿನಲ್ಲಿ ಜನರೆಡೆಗೆ ಕಾವ್ಯ" ಕಾರ್ಯಕ್ರಮ ಏರ್ಪಡಿಸಲಾಗಿದೆ.

ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯರಾದ ಶ್ರೀಮತಿ ಚಂದ್ರಕಲಾ ಬಿದ್ರಿರವರು ಕಾರ್ಯಕ್ರಮ ಉದ್ಘಾಟಿಸುವವರು, ಈ ಕಾರ್ಯಕ್ರಮದ ಸರ್ವಾಧ್ಯಕ್ಷರಾಗಿ ಬೀದರ್ ಕಾವ್ಯ ಸಂಸ್ಕೃತಿ ಯಾನ ಹಿರಿಯ ಸಾಹಿತಿ ಡಾ.ವಿಜಯಶ್ರೀ ಸಬರದ ವಹಿಸುವರು.

ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ಸಂಜೀವಕುಮಾರ ಅತಿವಾಳೆ, ಅಧ್ಯಕ್ಷತೆ ವಹಿಸಿವವರು, ಮುಖ್ಯ ಅತಿಥಿಗಳಾಗಿ ರಂಗಕರ್ಮಿ ಪ್ರಧಾನ ಸಂಚಾಲಕರಾದ ಮಲ್ಲಿಕಾರ್ಜುನ ಮಹಾಮನೆ, ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಅಧ್ಯಕ್ಷರಾದ ಸುರೇಶ ಚೆನ್ನಶೆಟ್ಟಿ, ಮಾಜಿ ಅಧ್ಯಕ್ಷರಾದ ಸಿದ್ರಾಮಪ್ಪಾ ಮಾಸಿಮಾಡೆ, ಹಿರಿಯ ಸಾಹಿತಿಗಳಾದ ಶ್ರೀಮತಿ ಪುಣ್ಯವತಿ ವಿಸಾಜಿ, ಕಾಶಿನಾಥರಾವ ಚಲ್ವಾ, ಬೆಳಗು



ಸಾಮಾಜಿಕ ಸಾಂಸ್ಕೃತಿಕ ಟ್ರಸ್ಟನ ಅಧ್ಯಕ್ಷರಾದ ಅನೀಲಕುಮಾರ ದೇಶಮುಖ ಸೇರಿದಂತೆ ಮುಂತಾದ ಅತಿಥಿ ಗಣ್ಯರು ಭಾಗವಹಿಸುವವರು.

ಪ್ರಥಮ ಕವಿಗೋಷ್ಠಿ–1

ಬೆಳಿಗ್ಗೆ 11:30 ರಿಂದ 1 ಗಂಟೆಯ ವರೆಗೆ ಪ್ರಥಮ ಕವಿಗೋಷ್ಠಿ ನಡೆಯಲಿದೆ. ಈ ಕವಿಗೋಷ್ಠಿಯ ಅಧ್ಯಕ್ಷತೆ ಎಂ. ಜಿ. ದೇಶಪಾಂಡೆ ವಹಿಸಿವವರು, ಗೌರವ ಉಪಸ್ಥಿತಿ ಬಿ.ಎಮ್. ಅಮರವಾಡಿ, ಹಿರಿಯ ಸಾಹಿತಿ ಶಕೀಲ್ ಐ.ಎಸ್. ಅವರು ಆಶಯ ನುಡಿ ಹೇಳುವರು. ವೇದಿಕೆ ಮೇಲೆ ಅನೇಕ ಕವಿಗಳು, ಕಾರ್ಯಕ್ರಮಕ್ಕೆ ಭಾಗಿಯಾಗಿ ತಮ್ಮ ಸ್ವರಚಿತ ಕವನ ವಾಚನ ಮಾಡುವವರು.

ದ್ವಿತೀಯ ಕವಿಗೋಷ್ಠಿ–2

ಸಮಯ 1:30 ರಿಂದ 4 ಗಂಟೆಗೆ ಕಾರ್ಯಕ್ರಮದ ಅಧ್ಯಕ್ಷತೆ ಹಿರಿಯ ಸಾಹಿತಿ ಎಸ್, ಎಂ, ಜನವಾಡಕರ್, ವಹಿಸುವವರು, ಗೌರವ ಉಪಸ್ಥಿತಿ, ವಿಶ್ವ ಕನ್ನಡಿಗರ ಸಂಸ್ಥೆಯ ಅಧ್ಯಕ್ಷರಾದ ಡಾ. ಸುಬ್ಬಣ್ಣ ಕರಕನಳ್ಳಿ, ಆಶಯ ನುಡಿ ಹಿರಿಯ ಸಾಹಿತಿ ರಮೇಶ್ ಬಿರಾದಾರ, ಹಾಗೂ ಮುಂತಾದವರು, ಭಾಗವಹಿಸುವವರು, ಕಾರ್ಯಕ್ರಮದಲ್ಲಿ ಅನೇಕ ಕವಿಗಳು ಭಾಗಿಯಾಗಿ ತಮ್ಮ ಸ್ವರಚಿತ ಕವನ ವಾಚನ ಮಾಡುವವರು. ನಂತರ ಸರ್ವಾಧ್ಯಕ್ಷರೊಂದಿಗೆ ಸಂವಾದ ನಡೆಯಲಿದೆ. ಅನೇಕ ಸಂವಾದಕರು ಕಾರ್ಯಕ್ರಮದಲ್ಲಿ ಭಾಗವಹಿಸಿ ತಮ್ಮ ಸಂವಾದವನ್ನು ಮಂಡಿಸಲಿದ್ದಾರೆ.

ಕೊನೆಯಲ್ಲಿ ಕಾರ್ಯಕ್ರಮದ ಸಮಾರೋಪ ಸಮಯ ಸಂಜೆ 5:30 ರಿಂದ 7 ಗಂಟೆಗೆ ನಡೆಯಲಿದೆ. ಸರ್ವಾಧ್ಯಕ್ಷರ ಮಾತು ಡಾ. ವಿಜಯಲಕ್ಷ್ಮಿ ಸಬರದ, ಸಮಾರೋಪ ನುಡಿ, ಕಸಾಪ ಗೌರವ ಅಧ್ಯಕ್ಷರಾದ ಶಿವಕುಮಾರ ಕಟ್ಟೆ, ಮುಖ್ಯ ಅತಿಥಿಗಳಾಗಿ, ಹಿರಿಯ ಸಾಹಿತಿಗಳಾದ ಗುರುನಾಥ ಅಕ್ಕಣ್ಣ, ಶಂಭುಲಿಂಗ ವಾಲ್ದೊಡ್ಡಿ, ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯರಾದ ವಿಜಯಕುಮಾರ ಸೋನಾರೆ, ಎಂ ಎಸ್. ಮನೋಹರ, ರಾಷ್ಟ್ರೀಯ ಜಾನಪದ ಕಲಾ ಪರಿಷತ್ತಿನ ಪ್ರಧಾನ ಕಾರ್ಯದರ್ಶಿಯಾದ, ರಾಜಕುಮಾರ ಹೆಬ್ಬಾಳೆ, ಕರ್ನಾಟಕ ವಚನ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷೇ ಶ್ರೀಮತಿ ಸುನೀತಾ ದಾಡಗೆ, ಸೇರಿದಂತೆ ಅನೇಕರು ಭಾಗವಹಿಸಲಿದ್ದಾರೆಂದು ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ಸಂಜೀವಕುಮಾರ ಅತಿವಾಳೆ, ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲತಾ ಮಂಗೇಶ್ಕರ ಶಾಲೆಯಲ್ಲಿ ಸಾವಿತ್ರಿಬಾಯಿ ಫುಲೆ ಜಯಂತಿ



ಮಲ್ಲಮ್ಮ ನುಡಿ ವಾರ್ತೆ

(ಪರಮೇಶ ರಾಂಪುರೆ)

ಕಮಲನಗರ:

ಪಟ್ಟಣದ ಲತಾ ಮಂಗೇಶ್ಕರ್ ಕನ್ಯಾ ಪ್ರೌಢ ಶಾಲೆಯಲ್ಲಿ ಶುಕ್ರವಾರ ಸಾವಿತ್ರಿಬಾಯಿ ಫುಲೆ ಜಯಂತಿ ಮತ್ತು ಸ್ವಸ್ಥ ಸಂಕಲ್ಪ ಜನಜಾಗೃತಿ ಕಾರ್ಯಕ್ರಮದಲ್ಲಿ ನೂತನ ಮುಖ್ಯ ಶಿಕ್ಷಕರಾದ ಅನಿಲಕುಮಾರ ಬಿರಾದಾರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಸಾವಿತ್ರಿಬಾಯಿ ಫುಲೆ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು.

ಜಿಲ್ಲಾ ಜನ ಜಾಗೃತಿ ವೇದಿಕೆ ಸದಸ್ಯ ಮಡಿವಾಳಪ್ಪ ಮುರ್ಕೆ ಮಾತನಾಡಿ,

ಸ್ವಸ್ಥ ಸಮಾಜ ನಿರ್ಮಾಣಕ್ಕಾಗಿ ಪ್ರತಿಯೊಬ್ಬ ನಾಗರೀಕನೂ ದುಶ್ಚಟಗಳಿಂದ ದೂರವಿರಬೇಕೆಂದು

ಮದ್ಯಪಾನ, ಧೂಮಪಾನ ಮುಂತಾದ ದುಶ್ಚಟಗಳಿಂದ ಕುಟುಂಬದ ಆರ್ಥಿಕ ಪರಿಸ್ಥಿತಿ, ಆರೋಗ್ಯ ಹಾಗೂ ಮಾನಸಿಕ ಪರಿಸ್ಥಿತಿಯ ಮೇಲೆ ಕೆಟ್ಟ ಪರಿಣಾಮ ಉಂಟಾಗುತ್ತದೆ. ಸಾಮಾಜಿಕ ಪಿಡುಗುಗಳನ್ನು ದೂರ ಮಾಡುವ ಮೂಲಕ ಗಾಂಧೀಜಿಯವರ ಕನಸನ್ನು ನನಸಾಗಿಸಬೇಕು ಎಂದು ಹೇಳಿದರು. ಬಂಟಿ ರಾಂಪುರೆ ಮಾತನಾಡಿ, ಉತ್ತಮ ಕಾರ್ಯಗಳನ್ನು ಕೈಗೊಳ್ಳಲು ಉತ್ತಮ ಮನಸ್ಸುಗಳು ಹಾಗೂ ಕೈಗಳು ಮುಖ್ಯ. ಪ್ರತಿಯೊಂದು ಕುಟುಂಬವು ಸುಭೀಕ್ಷವಾಗಿದ್ದು, ಆರ್ಥಿಕ, ಶೈಕ್ಷಣಿಕ, ಆರೋಗ್ಯವಂತ ಕುಟುಂಬವಾಗಿರಬೇಕಾದರೆ ದುಶ್ಚಟ, ದುರಭ್ಯಾಸಗಳಿಂದ ದೂರವಾಗಿರಬೇಕು ಎಂದರು.

ಕಮಲನಗರದ ಭಾಗಿರಥಿ ಪಬ್ಲಿಕ್ ಶಾಲೆ ಮುಖ್ಯಶಿಕ್ಷಕ ಮನೋಜಕುಮಾರ ಹಿರೇಮಠ ಮಾತನಾಡಿ, ಪುರುಷರು ದುಶ್ಚಟಗಳಿಂದ ದೂರವಾಗುವಂತೆ ಮಹಿಳೆಯರು ನೈತಿಕತೆಯ ಬಗ್ಗೆ ಸಕಾರಾತ್ಮಕ ಮನೋಬಾವನೆ ಬೆಳೆಸಿಕೊಳ್ಳಬೇಕಾದ ಅನಿವಾರ್ಯತೆ ಇದೆ ಎಂದು ಹೇಳಿದರು.

ಶಾಲೆ ಮುಖ್ಯಗುರುಗಳು ಅನೀಲಕುಮಾರ ಬಿರಾದಾರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ಸಾವಿತ್ರಿಬಾಯಿ ಫುಲೆ ಅವರು ಹೆಣ್ಣು ಮಕ್ಕಳ ಶಿಕ್ಷಣಕ್ಕಾಗಿ ಬಹಳ ಹೋರಾಟವನ್ನು ಮಾಡಿದರು. ಹಾಗಾಗಿ ಇಂದು ಹೆಣ್ಣುಮಕ್ಕಳಿಗೆ ಸಮಾನ ಶಿಕ್ಷಣದ ಅಧಿಕಾರ ಸಿಕ್ಕಿದೆ ಎಲ್ಲರೂ ಒಳ್ಳೆಯ ಶಿಕ್ಷಣ ಪಡೆದು ನಿಮ್ಮ ತಂದೆ ತಾಯಿ ಹೆಮ್ಮೆ ಪಡುವಂತ ಶಿಕ್ಷಣ ಪಡಬೇಕೆಂದು ಹೇಳಿದರು.

ಮೇಲ್ವಿಚಾರಕ ಮಲ್ಲಿಕಾರ್ಜುನ. ಸಿ , ಸೇವಾಪ್ರತಿನಿಧಿ ಮೀನಾಕ್ಷಿ ಹಡಪದ, ಆಶಾ ಪಾಟೀಲ, ಪ್ರಕಾಶ ಸೂರ್ಯವಂಶಿ, ರಾಜೇಂದ್ರ ಲಸ್ಕರೆ, ದೀಲಿಪ ಸಂತಪುರೆ, ರಮಾಕಾಂತ ಕಣಜೆ, ಶಿಲ್ಪಾ ಬಿರಾದಾರ, ಸರಸ್ವತಿ ಮಹಾಜನ, ಸಂಗೀತಾ ಸೇರಿದಂತೆ ಶಾಲೆ ಮಕ್ಕಳು ಇದ್ದರು.




ಹುಮನಾಬಾದ: ಪಟ್ಟಣದ ಹೊರವಲಯದಲ್ಲಿರುವ ಶ್ರೀ ವಿವೇಕಾನಂದ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಹಮ್ಮಿಕೊಂಡಿದ್ದ ಶಿಕ್ಷಣ ಪ್ರೇಮಿಗಳಾದ ಮಾಣಿಕಪ್ಪಾ ಗಾದಾರವರ 98ನೇ ಜನ್ಮದಿನಾಚರಣೆ ಕಾರ್ಯಕ್ರಮ ಜರುಗಿತ್ತು. ಮಾಜಿ ಸಚಿವ ರಾಜಶೇಖರ ಬಿ.ಪಾಟೀಲರವರು ಮಾಣಿಕಪ್ಪಾ ಗಾದಾರವರಿಗೆ ಸನ್ಮಾನಿಸಿ ಜನ್ಮದಿನದ ಶುಭಾಶಯಗಳು ಕೋರಿದರು. ಪರಮ್ಮ ಪೂಜ್ಯ ಗುರುಬಸವ ಪಟ್ಟದೇವರು, ಮಾಜಿ ಶಾಸಕ ಸುಭಾಷ ಕಲ್ಲೂರ, ದತ್ತಕುಮಾರ ಚಿದ್ರಿ ಹಾಗೂ ವಿವೇಕಾನಂದ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿ ಹಾಗೂ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).

# ಸಮಾಜದಲ್ಲಿ ಮಾನವಿಯತೆಯ ಸಂದೇಶ ಸಾರುವುದೇ ಜಮಾಅತೆ ಇಸ್ಲಾಮಿಯ ಉದ್ದೇಶ: ನಿಝಾಮುದ್ದಿನ್




ಮಲ್ಲಮ್ಮ ನುಡಿ ವಾರ್ತೆ

ಬೀದರ.ಜ. 02 :– ಬಣ್ಣ, ಭಾಷೆ, ಉಡುಪು ಬೇರೆ ಬೇರೆ ಇರಬಹುದು ಆದರೆ ನಾವೆಲ್ಲರು ಒಂದೆ ಎಂಬ ಸಂದೇಶ ಸಾರುವುದೇ ಜಮಾಅತೆ ಇಸ್ಲಾಮೀ ಹಿಂದ್ ನ ಉದ್ದೇಶವಾಗಿದೆ ಎಂದು ನಿವೃತ್ತ ಪ್ರಾಚಾರ್ಯರು ಹಾಗೂ ಜಮಾಅತೆ ಇಸ್ಲಾಮಿ ಹಿಂದ್ ನ ಹಿರಿಯ ಸದಸ್ಯರಾದ ಮುಹಮ್ಮದ್ ನಿಝಾಮೊದ್ದಿನ್ ತಿಳಿಸಿದರು. ಗುರುವಾರ ಪತ್ರಿಕಾ ಭವನದಲ್ಲಿ ಪತ್ರಕರ್ತರಿಗೆ ಆಯೋಜಿಸಲಾಗಿದ್ದ ನೂತನ ವರ್ಷದ ಸ್ನೇಹ ಕೂಟದಲ್ಲಿ ಮಾತನಾಡಿ, ಜಮಾಅತೆ ಇಸ್ಲಾಮೀ ಎಲ್ಲ ಸಮುದಾಯದವರಿಗಾಗಿ ನಮ್ಮ ಚಟುವಟಿಕೆಗಳು ನಡೆಯುತ್ತವೆ. ಮುಸ್ಲಿಂರಲ್ಲಿ ಧಾರ್ಮಿಕ, ನೈತಿಕ ವಿಷಯಗಳ ಬಗ್ಗೆ ಜಾಗೃತಿ ಮುಡಿಸಿ ಮಾನವಿಯತೆ ಎಂಬುದನ್ನು ಒತ್ತಿ ಹೇಳುತ್ತದೆ. ಯಾವುದೇ ಧರ್ಮದ ಬಗ್ಗೆ ತಪ್ಪು ಕಲ್ಪನೆ ಇರಬಾರದು, ಸಹಬಾಳ್ವೆಯಿಂದ ಜೀವಿಸಬೇಕು ಎಂಬ ಉದ್ದೇಶದಿಂದ ಈಗಾಗಲೇ ಸದ್ಭಾವನಾ ಮಂಚ ಎಂಬ ಸಂಘಟನೆ ರಚಿಸಿ ಗುರುನಾಥ ವಡ್ಡೆ ಅವರನ್ನು ಅಧ್ಯಕ್ಷರನ್ನಾಗಿ ಮಾಡಲಾಗಿದೆ ಎಂದರು.

ಜಮಾಅತೆ ಇಸ್ಲಾಮಿ ಹಿಂದ್ ರಾಜ್ಯ ಸಲಹಾ ಸಮಿತಿ ಸದಸ್ಯರು ಹಾಗೂ ಮಾಧ್ಯಮ ಪ್ರಭಾರಿ ಮುಹಮ್ಮದ ಆಸಿಫೋದ್ದಿನ್ ಮಾತನಾಡಿ, ರಾಜಕೀಯ ವ್ಯಕ್ತಿಗಳು ದು ಜಾತಿಯತೆಯ ಲಾಭ ಪಡೆಯುತಿದ್ದಾರೆ ಹೀಗಾಗಿ ನಾವು ರಾಜಕೀಯದ ಒತ್ತಡಕ್ಕೆ ಮಣಿಯದೆ ಭಾವೈಕ್ಯತೆಯಿಂದ ಜೀವಿಸಬೇಕೆಂಬುದೆ ನಮ್ಮ ಉದ್ದೇಶವಾಗಿದೆ ಎಂದರು.

# ಕಮಲನಗರ: ಸಾವಿತ್ರಿಬಾಯಿ ಫುಲೆ ಅವರ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಕಮಲನಗರ: ಇಲ್ಲಿನ ಶಾಸ್ತ್ರೀ ಶಿಕ್ಷಣ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ನಡೆಯುತ್ತಿರುವ ಭಾಗಿರಥಿ ಪಬ್ಲಿಕ್ ಶಾಲೆಯಲ್ಲಿ ಶುಕ್ರವಾರ ದೇಶದ ಪ್ರಥಮ ಮಹಿಳಾ ಶಿಕ್ಷಕಿ ಸಾವಿತ್ರಿಬಾಯಿ ಫುಲೆ ಅವರ ಜಯಂತಿಯನ್ನು ಆಚರಿಸಲಾಯಿತು.

ಸಾವಿತ್ರಿಬಾಯಿ ಫುಲೆ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದ ಮುಖ್ಯಶಿಕ್ಷಕ ಮನೋಜಕುಮಾರ ಹಿರೇಮಠ ಅವರು ಮಾತನಾಡಿ, ವಿದ್ಯಾರ್ಥಿಗಳಿಗೆ ಫುಲೆ ಅವರು ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿರುವ ಸೇವೆ ಕುರಿತು ವಿವರಿಸಿದರು.

ಶೇಖ್ ಇಜಾಜ್, ಶ್ರೀದೇವಿ ಸೋನಕಾಂಬಳೆ, ದೀಪಮಾಲಾ ಸೂರ್ಯವಂಶಿ, ರಾಜಶ್ರೀ ಸಿರಗಿರೆ, ಶೀತಲ ನಂದಕುಮಾರ ಹಂಗರಗೆ, ಉಷಾ ವಿದ್ಯಾಸಾಗರ, ಅಂಜಲಿ ಸ್ವಾಮಿ, ಪಂಚಫುಲಾ, ಅಶ್ವೀನಿ ಸೇರಿದಂತೆ ಶಾಲೆಯ ವಿದ್ಯಾರ್ಥಿ–ವಿದ್ಯಾರ್ಥಿನಿಯರು ಪಾಲ್ಗೊಂಡಿದರು.

ಮಾನಸಿ, ದೀಪಿಕಾ ಸಂತೋಷ, ಚೈತ್ರಾಲಿ ಪ್ರದೀಪ, ಸುದರ್ಶನಾ, ಮಹೇಶ್ವರಿ, ದಿವ್ಯಾ, ಕರುಣಾ ರಾಜಕುಮಾರ, ಅವನಿ ಬಚ್ಚಣ್ಣಾ, ತನಿಷ್ಕಾರವಿ ಇವರುಗಳು ಸಾವಿತ್ರಿಬಾಯಿ ಫುಲೆ ಅವರ ವೇಷ ಧರಿಸಿದ್ದು ನೋಡುಗರ ಗಮನ ಸೆಳೆದರು. ದೀಕ್ಷಾ ಕಾಲೇಕರ್ ನಿರೂಪಿಸಿದರು. ಶ್ರೇಯಾ ಸಂಗಪ್ಪ ಬಿರಾದಾರ ಸ್ವಾಗತಿಸಿದರು. ಸ್ವಾತಿ ಉಮೇಶ ಮಹಾಜನ ವಂದಿಸಿದರು.



ಹುಮನಾಬಾದ:ಪಟ್ಟಣದ ಹೊರವಲಯದಲ್ಲಿರುವ ಶ್ರೀ ವಿವೇಕಾನಂದ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಹಮ್ಮಿಕೊಂಡಿದ್ದ ಶಿಕ್ಷಣ ಪ್ರೇಮಿಗಳಾದ ಮಾಣಿಕಪ್ಪಾ ಗಾದಾರವರ 98ನೇ ಜನ್ಮದಿನಾಚರಣೆ ಕಾರ್ಯಕ್ರಮ ಜರುಗಿತ್ತು. ಇದೇ ಸಂದರ್ಭದಲ್ಲಿ ಡಾ.ಪಾಪ್‌ರೆಡ್ಡಿ ಮಂಡಾರವರು ಶಾಲು ಹೊದಿಸಿ ಸನ್ಮಾನಿಸಿ ಹೊಸ ವರ್ಷದ ಶುಭಾಶಯ ಹಾಗೂ ಜನ್ಮದಿನದ ಶುಭಾಶಯಗಳು ಕೋರಿದರು. ಈ ಸಂದರ್ಭದಲ್ಲಿ ಮಾಜಿ ಸಚಿವ ರಾಜಶೇಖರ ಬಿ.ಪಾಟೀಲ, ಮಾಜಿ ಶಾಸಕ ಸುಭಾಷ ಕಲ್ಲೂರ, ದತ್ತಕುಮಾರ ಚಿದ್ರಿ ಹಾಗೂ ವಿವೇಕಾನಂದ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿ ಹಾಗೂ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).

# ನಿಜಲಿಂಗಪ್ಪ ದಂತ ಕಾಲೇಜಿನಲ್ಲಿ ಪುನಶ್ಚೇತನ ಕಾರ್ಯಾಗಾರ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜ.3: ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ 12 ಅಂಶಗಳ ಕೋಶದ ವತಿಯಿಂದ ಎಸ್ ನಿಜಲಿಂಗಪ್ಪ ದಂತ ಮಹಾ ವಿದ್ಯಾಲಯದಲ್ಲಿ ನ್ಯೂ ಮೆಥಡಾಲಾಜಿ ಆಫ್ ನ್ಯಾಕ್ ಬೈನರಿ ಅಕ್ರಿಡಿಯೇಷನ್ ಸಿಸ್ಟಮ್ ವಿಷಯ ಕುರಿತು ಒಂದು ದಿನದ ಸಿಬ್ಬಂದಿ ಪುನಶ್ಚೇತನ ಶಿಬಿರ ಜರುಗಿತು. ನ್ಯಾಕ್ ಯುಜಿಸಿ ಕಮೀಟಿ ಪುಣೆಯ ಸದಸ್ಯ ಹಾಗೂ ಶಿಕ್ಷಣ ತಜ್ಞ ಡಾ ಎನ್ ಎಸ್ ಧರ್ಮಾಧಿಕಾರಿ ಕಾರ್ಯಾಗಾರದ ಉದ್ಘಾಟನೆ ನೇರವೇರಿಸಿದರು.



ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಸಂಚಾಲಕ ಹಾಗೂ ಆಡಳಿತಮಂಡಳಿ ಸದಸ್ಯ ಡಾ ಅನೀಲಕುಮಾರ ಪಟ್ಟಣ, ಮುಖ್ಯ ಅತಿಥಿಗಳಾಗಿ ಬೀದರ ಕರ್ನಾಟಕ ಕಾಲೇಜು ಐಕ್ಯುಎಸಿ ಕೋರ್ಡಿನೇಟರ್ ಡಾ ರಾಮಮೋಹನ್ ಪರದೇಶಿ, 12 ಅಂಶಗಳ ಯೋಜನಾಧಿಕಾರಿ ಡಾ ಉಮಾ ರೇವೂರ, ಕಾಲೇಜಿನ ಪ್ರಾಚಾರ್ಯ ಡಾ ಜಯಶ್ರೀ ಮುದ್ದಾ, ಉಪ ಪ್ರಾಚಾರ್ಯ ಡಾ ವೀರೇಂದ್ರ ಪಾಟೀಲ್, ಡಾ ಪ್ರಶಾಂತ್ ಕುಮಾರ್ ಉಪಸ್ಥಿತರಿದ್ದರು.

## ಸಾವಿತ್ರಿಬಾಯಿ ಫುಲೆ ಸಮಾಜಕ್ಕೆ

# ಅಕ್ಷರ ಬೀಜ ಬಿತ್ತಿದ ಮೊದಲ ತಾಯಿ ಶರಣು ನಾಯ್ಕಲ.



ಮಲ್ಲಮ್ಮ ನುಡಿ ವಾರ್ತೆ

ಶಹಪುರ್ ನಗರದ ಮೊರಾರ್ಜಿ ದೇಸಾಯಿ ವಸತಿ ಶಾಲೆ ದೊ–ರೆಗುಡ್ಡ ಉಕ್ಕಿನಾಳ ಶಾಲೆಯಲ್ಲಿ ತಾಯಿ ಸಾವಿತ್ರಿಬಾಯಿ ಫುಲೆ ಈ ಪಾಠಶಾಲೆಗಳ ಆಡಳಿತದ ಜವಾಬ್ದಾರಿಯನ್ನು ಸಾವಿತ್ರಿಬಾಯಿ ನಿರ್ವಹಿಸಬೇಕಾಗಿತ್ತು. ಶಿಕ್ಷಕಿ, ಸಂಚಾಲಕಿ, ಮುಖ್ಯೋಪಾಧ್ಯಾಯಿನಿ ಮುಂತಾದ ಕೆಲಸಗಳನ್ನು ಇವರು ಸಮರ್ಪಕವಾಗಿ ನಿಭಾಯಿಸುವುದರ ಮೂಲಕ ಜ್ಯೋತಿಬಾ ಫುಲೆ ಅವರಿಗೆ ನೆರವಾದರು. ಬ್ರಿಟಿಷ್ ಸರ್ಕಾರದವರು ಅವರ ಕೆಲಸ ಕಾರ್ಯಗಳನ್ನು ಕೂಲಂಕುಷವಾಗಿ ಅವಲೋಕಿಸಿ ಮೆಚ್ಚುಗೆ ಸೂಸಿದ್ದರು.

ಇಂದು ಭಾರತದ ಮಹಿಳೆಯರ ಸಮಾಜದ ಎಲ್ಲಾ ಕ್ಷೇತ್ರದಲ್ಲಿ ಸಮಾನತೆಯ ಹಕ್ಕಿಗೆ ಕಾರಣರಾದವರು ಮಾತೆ ಸಾವಿತ್ರಿ ಬಾಫುಲೆ. ಇವರು ಸಮಾಜದ ಅನಿಷ್ಟ ಪದ್ಧತಿಗಳಾದ ಬಾಲ್ಯ ವಿವಾಹ, ಸತಿಸಹಗಮನ ಪದ್ಧತಿ, ಕೇಶ ಮುಂಡನೆ ವಿರುದ್ಧ ಹೋರಾಟ ಮಾಡಿ, ಮಹಿಳೆಯರಿಗೋಸ್ಕರ ಪ್ರ ಪ್ರಥಮವಾಗಿ ಶಾಲೆಗಳು, ಅಬಲಾಶ್ರಮ ಸ್ಥಾಪನೆ ಮಾಡಿದ ಕೀತಿ9 ಇವರಿಗೆ ಸಲ್ಲುತ್ತದೆ. ಇವರು ಒಟ್ಟು ಶಾಲೆಗಳನ್ನು ಸ್ಥಾಪನೆ ಮಾಡುತ್ತಾರೆ.

ಈ ಎಲ್ಲಾ ಸಾಧನೆಗಳನ್ನು ಪರಿಗಣಿಸಿ , ಬ್ರಿಟಿಷ್ ಸರಕಾರ ಇವರಿಗೆ "ಇಂಡಿಯಾಸ್ ಫಸ್ಟ್ ಲೇಡಿ ಟೀಚರ್" ಎಂದು ಬಿರುದು ಕೂಡ ಕೊಟ್ಟಿದೆ. ಸ್ತ್ರೀಯರು ಕೂಡ ಪುರುಷರಂತೆ ಶಿಕ್ಷಣವನ್ನು ಪಡೆಯಬೇಕೆಂಬ ಮಹದಾಸೆಯಿಂದ ತಮಗೊದಗಿದ ಕಷ್ಟ – ಕಾರ್ಪಣ್ಯಗಳನ್ನು ಲೆಕ್ಕಿಸದೇ ಸ್ತ್ರೀ ಸಂಕುಲಕ್ಕೆ ಶೈಕ್ಷಣಿಕ ರಹದಾರಿಯನ್ನು ತೋರಿಸಿದರು.

ಸುಭಾಷ್ ನಾಯಕ್. ಮಡಿವಾಳಪ್ಪ ಪಾಟೀಲ್ ಹೆಗ್ಗಣದೊಡ್ಡಿ. ಶಂಕರ್ ಹಳ್ಳೂರ್. ಚಂದ್ರು ರಾಥೋಡ್. ಸಂತೋಷ್ ಜೋಗುರ್. ದತ್ತು ಸರ್. ರಾಜಕುಮಾರ್ ಬಡಿಗೇರ್. ಭಾಗಮ್ಮ ಪಿ ಪಾಟೀಲ್. ದೀಪಾ. ಶಕುಂತಲಾ. ಸೌಮ್ಯ ಕುಲಕರ್ಣಿ. ಉಪಸ್ಥಿತರಿದ್ದರು.



ಬಸವಕಲ್ಯಾಣ :– ತಾಲೂಕಿನ ಸುಕ್ಷೇತ್ರ ಹಾರಕೂಡ ಗ್ರಾಮದಲ್ಲಿ ಅಗಲಿಕರಿಸಿ ನಿರ್ಮಿಸಿದ ರಸ್ತೆ ಹಾಗೂ ರಸ್ತೆ ಬದಿ ಅಳವಡಿಸಿದ ಬೀದಿ ದೀಪ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಲೋಕಾರ್ಪಣೆಗೊಳಿಸಿದರು. ಈ ಸಂದರ್ಭದಲ್ಲಿ ಶಾಸಕರಾದ ಶರಣು ಸಲಗರ, ಮುಖಂಡರಾದ ಮೇಘರಾಜ ನಾಗರಾಳೆ, ರಾಜಕುಮಾರ ಬಿರಾದಾರ ಸಿರಗಾಪುರ ಮುಂತಾದವರು ಉಪಸ್ಥಿತರಿದ್ದರು.

# ಶರಣರು ಸಂಪಾದಿತ ಕವನ ಸಂಕಲನ ಸಿ. ಪಿ. ಐ. ಅಲಿಸಾಬ ಬಿಡುಗಡೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಇಲ್ಲಿನ ತಿಪುರಾಂತಿನ ಗವಿಮಠದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತ ಹಾಗೂ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಭಿನವ ಶ್ರೀ ಪ್ರಕಾಶನ ತಿಪುರಾಂತ ಪ್ರತಿಮಾ ಪ್ರಕಾಶನ ಸಹಯೋಗದಲ್ಲಿ ಪ್ರತಿಮಾ ವೀರಶೆಟ್ಟಿ. ಪಾಟೀಲ ಮಗನಾದ ಸಾತ್ವಿಕನ 7 ನೇಯ ಹುಟ್ಟು ಹಬ್ಬದ ನಿಮಿತ್ತವಾಗಿ ಅಗೋ ಅಲನೋಡಿ ಮತ್ತೆ ಕಲ್ಯಾಣಕ್ಕೆ ಬರುತ್ತಿರುವ ಶರಣರು ಸಂಪಾದಿತ ಕವನ ಸಂಕಲನ ಸಿ. ಪಿ. ಐ. ಅಲಿಸಾಬ ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ತಿಪುರಾಂತಿನ ಗವಿಮಠದ ಪೂಜ್ಯಶ್ರೀ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು. ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಶಂಭುಲಿಂಗ ಕಾಮಣ್ಣ. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಖಜಾಂಚಿಗಳಾದ ಶಿವ ಶಂಕರ್ ಟೋಕರೆ. ತಾಲ್ಲೂಕಿನ ಅಧ್ಯಕ್ಷರಾದ ಶಾಂತಲಿಂಗ ಮಠಪತಿ. ಹುಲಸೂರ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ನಾಗರಾಜ್ ಹಾವಣ್ಣ. ಇಲ್ಲಿನ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ಸಂತೋಷ ಅಕ್ಕಣ್ಣ. ನಿವೃತ್ತ ಉಪನ್ಯಾಸಕರಾದ ತುಳಸಿರಾಮ ಕುಂಬಾರೆ. ನಾಗೇದ್ರ ಬಿರಾದಾರ. ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.




ಬೀದರ: ಇತ್ತಿಚೇಗೆ ಧರಿನಾಡು ಸೌಹಾರ್ದ ಸಹಕಾರಿ ಸಂಘ ನಿಯಮಿತ ಬೀದರ್ ಕಚೇರಿಯಲ್ಲಿ ಸೌಹಾರ್ದ ಸಹಕಾರಿ ಕಾಯ್ದೆ ಜಾರಿಗೆ ಬಂದ 25ನೇ ವರ್ಷದ ರಜತ ಮಹೋತ್ಸವ ವರ್ಷ ದಿನಾಚರಣೆ ಅಂಗವಾಗಿ ಶ್ರೀ ಶಿವಶಂಕರ ಬೇಮಳಗಿ (ಅಧ್ಯಕ್ಷರು ಧರಿನಾಡು ಸೌಹಾರ್ದ ಸಹಕಾರಿ ಸಂಘ ಬೀದರ್ ) ಇವರ ಅಧ್ಯಕ್ಷತೆಯಲ್ಲಿ ಸಹಕಾರಿ ಧ್ವಜಾರೋಹಣ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು, ಅತಿಥಿಗಳಾದ ಕಾಶಿನಾಥ್ ಜಿಲ್ಲಾ ಲೆಕ್ಕ ವ್ಯವಸ್ಥಾಪಕರು ನಿರ್ದೇಶಕರಾದ ಅಮರನಾಥ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ಪ್ರಭುದೇವ್ ಹಳ್ಳಿಖೆಡ್ಕರ್, ಸತೀಶಕುಮಾರ್ ಧರಣೆ ಗುರುನಾಥ ಹಾಗೂ ಸದಸ್ಯರು ಭಾಗವಹಿಸಿದರು.

# ಕಲಬುರಗಿ 24X7 ಕುಡಿಯುವ ನೀರು ಕಾಮಗಾರಿ 2026ರೊಳಗೆ ಪೂರ್ಣಗೊಳಿಸಲು :ಸಚಿವ ಬೈರತಿ ಸುರೇಶ ಸೂಚನೆ



ಕಲಬುರಗಿ,ಜ.3:ಕಲಬುರಗಿ ಮಹಾನಗರದಲ್ಲಿಪ್ರಗತಿಯಲ್ಲಿರುವ 24ಗಂಟೆನಿರಂತರಕುಡಿಯುವ ನೀರಿನಯೋಜನೆಕಾಮಗಾರಿ 2026ರಡಿಸೆಂಬರ್ ಅಂತ್ಯದ ವರೆಗೆ ಮುಗಿಸುವಂತೆ ಕಾಮಗಾರಿಯ ಟೆಂಡರ್ ಪಡೆದಿರುವ ಎಲ್ & ಟಿ ಕಂಪನಿಅಧಿಕಾರಿಗಳಿಗೆರಾಜ್ಯದ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬೈರತಿ ಸುರೇಶ ಗಡುವು ನೀಡಿದರು.

ಶುಕ್ರವಾರ ಇಲ್ಲಿನಜಿಲ್ಲಾಧಿಕಾರಿಗಳ ಕಚೇರಿಸಭಾಂಗಣದಲ್ಲಿಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರ, ಕಲಬುರಗಿ ಮಹಾನಗರ ಪಾಲಿಕೆ, ನಗರ ಮತ್ತು ಗ್ರಾಮಾಂತರ ಯೋಜನಾ, ಕೆ.ಯು.ಡಬ್ಲ್ಯೂ.ಎಸ್.ಡಿ.ಬಿ ಹಾಗೂ ಕೆ.ಯು.ಐ.ಎಫ್.ಡಿ.ಸಿ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆನಡೆಸಿದಅವರು,ಒಪ್ಪಂದಂತೆ ಇದೇ ವರ್ಷದ ಜೂನ್ ವರೆಗೆ ಕಾಮಗಾರಿ ಮುಗಿಸಬೇಕಿತ್ತು. ಕಂಪನಿ ನಿಧಾನಗತಿ ಕೆಲಸಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಸಚಿವರು, ಜನವರಿ ಅಂತ್ಯಕ್ಕೆ ಈಗಿರುವ 380ರ ಬದಲಾಗಿ 700 ಕಾರ್ಮಿಕರನ್ನು ನಿಯೋಜಿಸಿ ಕಾಮಗಾರಿಗೆ ವೇಗ ನೀಡಬೇಕೆಂದರು.

ಇನ್ನು ಕಾಮಗಾರಿ ಪೂರ್ಣಗೊಳ್ಳುವವರೆಗೆ ಬೇಸಿಗೆ ಕಾಲ ಸೇರಿದಂತೆ ನಗರದ 55 ವಾರ್ಡುಗಳಿಗೆ ಟ್ಯಾಂಕರ್ ಮೂಲಕ ನಿತ್ಯ ನೀರು ಪೂರೈಕೆ ಮಾಡಬೇಕು. ಇನ್ನು ಕಾಲಮಿತಿಯಲ್ಲಿ ಕೆಲಸ ಮಾಡದಿದ್ದಲ್ಲಿ ಕಂಪನಿಯನ್ನು ಕಪ್ಪು ಪಟ್ಟಿಗೆ ಸೇರಿಸಿ ರಾಜ್ಯದಲ್ಲಿ ಯಾವುದೇ ಟೆಂಡರ್ ಪಡೆ–ಯದಂತೆಕ್ರಮವಹಿಸಲಾಗುವುದು ಎಂದು ಕಂಪನಿಯ ಕ್ಲಸ್ಟರ್ ಹೆಡ್ ಅಧಿಕಾರಿ ನಾಗೇಂದ್ರ ಮತ್ತುಕುಮಾರಸೇನ್ ಅವರಿಗೆ ಎಚ್ಚರಿಕೆ ನೀಡಿದರು.

ಎಲ್ & ಟಿ ಕಂಪನಿಯ ಕ್ಲಸ್ಟರ್ ಹೆಡ್ ನಾಗೇಂದ್ರ ಮಾತನಾಡಿ, ಉದ್ದೇಶಿತ ಯೋಜನೆಯಲ್ಲಿ ನಗರದಲ್ಲಿ 12 ಓವರ್ ಹೆಡ್ ಟ್ಯಾಂಕ್ ನಿರ್ಮಿಸಲಾಗುತ್ತಿದ್ದು,ಇದರಲ್ಲಿ ಒಂದು ಪೂರ್ಣಗೊಳಿಸಿ ಅದರ ಮೂಲಕ ಒಟ್ಟಾರೆ 225 ಮನೆಗಳಿಗೆ ಗೃಹ ನಳ ಸಂಪರ್ಕದ ಮೂಲಕ ನೀರು ಪೂರೈಕೆ ಮಾಡಲಾಗುತ್ತಿದೆ. 6 ಟ್ಯಾಂಕ್ ಕಾಮಗಾರಿ ಪೂರ್ಣಗೊಂಡಿದ್ದು,ಉಳಿದವು ಪ್ರಗತಿಯಲ್ಲಿವೆ.ಒಟ್ಟಾರೆ62,000 ಮನೆಗಳಿಗೆ ನಲ್ಲಿ ಮೂಲಕ ಶುದ್ಧ ಕುಡಿಯುವ ಪೂರೈ–ಕೆಯ ಗುರಿ ಹೊಂದಲಾಗಿದೆ ಎಂದು ಮಾಹಿತಿ ನೀಡಿದರು. ಸಚಿವ ಬೈರತಿ ಸುರೇಶ ಮಾತನಾಡಿ ಸಿವಿಲ್ ಕಾಮಗಾರಿ ಮುಗಿಸಿದರೆ ಅದು ಸಂಪೂರ್ಣ ಆಗುವುದಿಲ್ಲ, ಜನರಿಗೆ ಮನೆಗೆ ನೀರು ತಲುಪಬೇಕು ಆಗಲೆ ಕಾಮಗಾರಿ ಪೂರ್ಣ ಎಂದು ಭಾವಿಸಲಾಗುತ್ತದೆ ಎಂದರು.

ಶಾಸಕ ಅಲ್ಲಮಪ್ರಭು ಪಾಟೀಲ ಮಾತನಾಡಿ, ಉದ್ದೇಶಿತ ಕುಡಿಯುವ ನೀರಿನ ಕಾಮಗಾರಿ ನಿಧಾನಗತಿಯಿಂದ ನಗರದಲ್ಲಿ ನೀರಿನ ಸಮಸ್ಯೆ ಹೆಚ್ಚಿದ್ದು, ಬೇಸಿಗೆಯಲ್ಲಿ ಹಾಹಾಕಾರಕ್ಕೆ ಕಾರಣವಾಗುತ್ತಿದೆ. ನಗರಕ್ಕೆ 34 ಎಂ.ಎಲ್.ಡಿ. ನೀರಿನ ಕೊರತೆ ಇದೆ. ಹೀಗಾಗಿ ನಗರದಲ್ಲಿನ 1,968 ಕೊಳವೆ ಬಾವಿ ಪೈಕಿ 400 ರಲ್ಲಿ ನೀರಿದ್ದು, ಫ್ಲಶ್, ಮೋಟಾರ್ ಅಳವಡಿಕೆಯಂತಹ ದುರಸ್ತಿ ಮಾಡಲು ಕಂಪನಿ ಮುಂದಾಗುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಇದಕ್ಕೆ ಧ್ವನಿಗೂಡಿಸಿದ ಎಂ.ಎಲ್.ಸಿ. ತಿಪ್ಪಣ್ಣಪ್ಪ ಕಮಕನೂರ ಎಲ್ & ಟಿ ಕಂಪನಿಯಿಂದ ಈ ಕಾಮಗಾರಿ ಪೂರ್ಣವಾಗಲ್ಲ, ಕೂಡಲೆ ಟೆಂಡರ್ ರದ್ದುಪಡಿಸಿ ಬೇರೆ ಸಂಸ್ಥೆಗೆ ನೀಡುವಂತೆ ಒತ್ತಾಯಿಸಿದರು.

ಸಚಿವ ಬೈರತಿ ಸುರೇಶ ಮಾತನಾಡಿ, ನಗರದಲ್ಲಿರುವ ಎಲ್ಲಾ 1,900 ಕೊಳವೆ ಬಾವಿ ನಿರ್ವಹಣೆ ಜವಾಬ್ದಾರಿ ಎಲ್ & ಟಿ ಕಂಪನಿಗೆ ಸೇರಿದ್ದಾಗಿದೆ. ಕೆಟ್ಟ ಕೊಳವೆ ಬಾವಿ ಫ್ಲಶ್ ಮಾಡಲು ಈಗಿರುವ ಒಂದು ಮಶೀನ್‌ಗಳಿಂದ ಸಾಲಲ್ಲ. ಇದನ್ನು 4ಕ್ಕೆ ಹೆಚ್ಚಿಸಬೇಕು. ಪ್ರತಿ ವಾರ್ಡ್‌ಗೆ ಕನಿಷ್ಠ 2ರಂತೆ ಟೆಕ್ಸ್ಮೋ ಸಬ್‌ಮರ್ಸಿಬಲ್ ಮೋಟಾರ್‌ಗಳು ಸ್ಟಾಕ್‌ನಲ್ಲಿಟ್ಟುಕೊಂಡು ಮೋಟಾರ್ ಕೆಟ್ಟದಲ್ಲಿ ಕೂಡಲೆ ಅಳವಡಿಸುವ ಕೆಲಸವಾಗಬೇಕೆಂದು ಅಧಿಕಾರಿಗಳಿಗೆ ಖಡಕ್ ಎಚ್ಚರಿಕೆ ನೀಡಿದರು.

ಪಾಲಿಕೆಯಿಂದ ಇ–ಸ್ವತ್ತು ನೀಡುವಲ್ಲಿ ವಲಯ 3ರ ಆಯುಕ್ತ ಮುಜಾಮಿಲ್ ಅವರ ನಿಧಾನಗತಿ ಪ್ರಗತಿಗೆ ಅಸಮಾಧಾನ ವ್ಯಕ್ತಪಡಿಸಿದ ಸಚಿವ ಬೈರತಿ ಸುರೇಶ ಅವರು ಕಾರಣ ಕೇಳುವ ನೋಟಿಸ್ ಜಾರಿಗೊಳಿಸುವಂತೆ ಪಾಲಿಕೆ ಆಯುಕ್ತರಿಗೆ ಸೂಚಿಸಿದರು. ಮೂರು ತಿಂಗಳೊಳಗೆ ಪ್ರಗತಿ ಸಾಧಿಸದಿದ್ದಲ್ಲಿ ಶಿಸ್ತು ಕ್ರಮ ಕೈಗೊಳ್ಳಾಗುವುದು ಎಂದು ವಲಯ ಆಯಕ್ತರಿಗೆ ಎಚ್ಚರಿಕೆ ನೀಡಿದರು.

ತ್ಯಾಜ್ಯ ಸಂಗ್ರಹಣೆಗೆ ಜಮೀನು ಕೊಡಿ: ಸಭೆಯಲ್ಲಿ ಕಲಬುರಗಿ ಪಾಲಿಕೆ ಮೇಯರ್ ಯಲ್ಲಪ್ಪ ನಾಯ್ಕೋಡಿ ಮಾತನಾಡಿ ಕಲಬುರಗಿ ನಗರ ದಿನದಿಂದ ದಿನಕ್ಕೆ ಬೆಳೆಯುತ್ತಿದೆ. ಈಗಿರುವ ಉದನೂರ ಎಸ್.ಡಬ್ಲ್ಯೂ.ಎಂ. ಘಟಕದಲ್ಲಿ ಕಸ ತುಂಬಿರುವ ಕಾರಣ ನಗರದ ನಾಲ್ಕು ದಿಕ್ಕನಲ್ಲಿ ಕಸ ಸಂಗ್ರಹಿಸಿ ವೈಜ್ಞಾನಿಕ ವಿಲೇವಾರಿ ಮಾಡಲು ತಲಾ 25 ಎಕರೆ ಜಮೀನು ಒದಗಿಸಬೇಕು ಎಂದು ಸಚಿವರಲ್ಲಿ ಮನವಿ ಮಾಡಿಕೊಂಡರು. ಇದ–ಕ್ಕೆ ಸಚಿವರು ಪ್ರತಿಕ್ರಿಯೆಸಿ ನಗರದಿಂದ 15–20 ಕಿ.ಮೀ. ದೂರ ಅಂತರದಲ್ಲಿ ಸರ್ಕಾರಿ ಜಮೀನು ಕೊಡಿ ಎಂದು ಡಿ.ಸಿ. ಬಿ.ಫೌಜಿಯಾ ತರನ್ನುಮ್ ಅವರಿಗೆ ನಿರ್ದೇಶನ ನೀಡಿದರು.

ಕರವಸೂಲಿ ಮಾಡಿ,ಒತ್ತುವರಿ ತೆರವುಗೊಳಿಸಿ: ನಗರದ ಅಭಿವೃದ್ಧಿಗೆ ಆರ್ಥಿಕ ಸಂಪನ್ಮೂಲ ಕ್ರೋಢಿಕರಣ ಮುಖ್ಯವಾಗಿದೆ. ಕರ ವಸೂಲಾತಿಗೆ ಒತ್ತು ನೀಡಬೇಕು. ಕರ ವಸೂಲು ಮಾಡದಿದ್ರೆ ಸಿಬ್ಬಂದಿ ವೇತನ ಹೇಗೆ ಪಾವತಿಸುತ್ತೀರಿ ಎಂದ ಸಚಿವ ಬಿ.ಎಸ್.ಸುರೇಶ ಅವರು, ಕರ ವಸೂಲು ಮಾಡಲು ಬಾಕಿ ಇರಿಸಿಕೊಂಡವರ ಮನೆ,ಅಂಗಡಿ, ವಾಣಿಜ್ಯ ಮುಂಗಟ್ಟುಗಳಿಗೆ ಪೌರಕಾರ್ಮಿಕರಿಂದಲೆ ಬೀಗ ಹಾಕಿಸಿ ಎಂದು ಪಾಲಿಕೆಯ ಮೇಯರ್ ಮತ್ತು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರದಲ್ಲಿ ಒತ್ತುವರಿ ಹೆಚ್ಚಿದೆ, ಉದ್ಯಾನವನದಲ್ಲಿ ಮನೆ ನಿರ್ಮಿಸಲಾಗಿದೆ ಎಂದು ಮೇಯರ್ ಯಲ್ಲಪ್ಪ ನಾಯ್ಕೋಡಿ ಸಭೆಯ ಗಮನ ಸೆಳೆದಾಗ ಗರಂ ಆದ ಸಚಿವರು, ಉದ್ಯಾನವನದಲ್ಲಿ ಮನೆ ನಿರ್ಮಾಣ ಮಾಡುವಾಗ ನೀವೇನು ಮಾಡುತ್ತಿದ್ದೀರಿ ಎಂದು ಪಾಲಿಕೆ ಆಯುಕ್ತರು ಮತ್ತು ವಲಯ ಆಯುಕ್ತರನ್ನು ಪ್ರಶ್ನಿಸಿದರು. ಕೂಡಲೆ ಉದ್ಯಾನವನ ಸೇರಿದಂತೆ ನಗರದೆಲ್ಲಡೆ ಒತ್ತುವರಿ ತೆರವು ಕಾರ್ಯ ಬರುವ ಸೋಮವಾರದಿಂದಲೆ ಅಭಿಯಾನದ ಮೂಲಕ ಆರಂಭಿಸಬೇಕು ಎಂದು ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಅವರಿಗೆ ಸೂಚಿಸಿದರು.

ಇನ್ನು ನಗರದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ಅನುಮೋದನೆ ಪಡೆಯದೆ ಅನಧಿಕೃತವಾಗಿ ತಲೆ ಎತ್ತಿರುವ ಲೇಔಟ್ ಮಾಲೀಕರಿಗೆ ಕೂಡಲೆ ನೋಟಿಸ್ ಜಾರಿಗೊಳಿಸಿ ಕಾನೂನು ಕ್ರಮ ಕೈಗೊಳ್ಳಬೇಕೆಂದು ಪ್ರಾಧಿಕಾರದ ಆಯುಕ್ತ ಗಂಗಾಧರ ಮಾಳಗಿ ಅವರಿಗೆ ಸಚಿವ ಬಿ.ಎಸ್.ಸುರೇಶ ಸೂಚಿಸಿದರು.

ಕಲಬುರಗಿಗೆ ವಿಶೇಷ ಪ್ಯಾಕೇಜ್ ಕೊಡಿ: ಶಾಸಕ ಅಲ್ಲಮಪ್ರಭು ಪಾಟೀಲ ಮಾತನಾಡಿ ನಗರದಲ್ಲಿ ಯು.ಜಿ.ಡಿ. ಸಂಫರ್ಕ ಸಮಪರ್ಕವಾಗಿಲ್ಲ. ಹಳೇಯದೆಲ್ಲ ಹಾಳಾಗಿದೆ. 700 ಕಿ.ಮೀ. ಒಳಚರಂಡಿ ಸಂಫರ್ಕ ಕಲ್ಪಿಸಲು 300 ಕೋಟಿ ರೂ. ಅವಶ್ಯಕತೆ ಇದ್ದು, ಬುರವ ಆಯವ್ಯಯದಲ್ಲಿ ಇದಕ್ಕೆ ಅನುದಾನ ಮೀಸಲಿರಿಸಬೇಕು. ನಗರದಲ್ಲಿನ 1,200 ವಿದ್ಯುತ್ ಕಂಬಗಳು ಶಿಥಿಲಾವಸ್ಥೆಯಲ್ಲಿದ್ದು, ಇತ್ತೀಚೆಗೆ ವಿದ್ಯುತ್ ಅವಘಡದಿಂದ ಇಬ್ಬರು ಸಾವನಪ್ಪಿದರೆ ಓರ್ವ ಮಹಿಳೆ ಸ್ಥಿತಿ ಚಿಂತಾಜನಕವಾಗಿದೆ. ಕೂಡಲೆ ಇದನ್ನು ಗಂಭೀರವಾಗಿ ಪರಿಗಣಿಸಿ ವಿಶೇಷ ಪ್ಯಾಕೇಜ್ ಘೋಷಿಸಿ ವಿದ್ಯುತ್ ಕಂಬಗಳನ್ನು ಬದಲಾಯಿಸಬೇಕೆಂದು ಸಚಿವರಲ್ಲಿ ಮನವಿ ಮಾಡಿಕೊಂಡರು. ಇದಕ್ಕೆ ಉತ್ತರಿಸಿದ ಸಚಿವ ಬೈರತಿ ಸುರೇಶ ಸಿ.ಎಂ. ಜೊತೆಗೆ ಚರ್ಚಿಸಲಾಗುವುದು ಎಂದರು.

ಸಭೆಯಲ್ಲಿ ಶಾಸಕರಾದ ಎಂ.ವೈ.ಪಾಟೀಲ, ವಿಧಾನ ಪರಿಷತ್ ಶಾಸಕರಾದ ಜಗದೇವ ಗುತ್ತೇದಾರ, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಕೆ.ಯು.ಐ.ಡಿ.ಎಫ್.ಸಿ ವ್ಯವಸ್ಥಾಪಕ ನಿರ್ದೇಶಕ ಬಿ.ಶರತ್, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಸೇರಿದಂತೆ ಇತರೆ ಅಧಿಕಾರಿಗಳು ಇದ್ದರು.

# ಶಾರೀರಿಕ, ಮಾನಸಿಕ ಬಲವರ್ಧನೆಗೆ ಕ್ರೀಡೆ ಅವಶ್ಯ:ನ್ಯಾ.ವಿಜಯ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.3:ಸದೃಢ ಶರೀರ ಹಾಗೂ ಮಾನಸಿಕ ಬಲವರ್ಧನೆಗೆ ಕ್ರೀಡೆ ಅವಶ್ಯವಾಗಿದ್ದು, ನಮ್ಮನ್ನು ನಾವು ಕ್ರೀಡಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕೆಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎನ್.ವಿ.ವಿಜಯ ಹೇಳಿದರು.

ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ಇಲಾಖೆ ಎಲ್ಲವೃಂದ ಸಂಘಗಳು,ಕ್ರೀಡಾ ಇಲಾಖೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಮೂರು ದಿನಗಳ ಕಾಲ ಜರುಗಿದ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕ್ರೀಡೆಯಿಂದ ಏಕತೆ, ಒಗ್ಗಟ್ಟು ಹಾಗೂ ಸಂಬಂಧಗಳು ಗಟ್ಟಿಯಾಗುವದರಿಂದ ಪಾಲಕರು ತಮ್ಮ ಮಕ್ಕಳಿಗೂ ಕೂಡಾ ಕ್ರೀಡೆಯ ಮಹತ್ವ ತಿಳಿಸುವದರ ಜೊತೆ ಕ್ರೀಡಾಕೂಟಗಳಲ್ಲಿ ಭಾಗವಹಿಸುವಂತೆ ಪ್ರೇರಣೆ ನೀಡಬೇಕು ಎಂದರು.

ಕ್ರೀಡಾ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಒತ್ತಡದ ನೌಕರಿ ನಿಭಾಯಿಸುವಲ್ಲಿ ಪ್ರತಿಯೊಬ್ಬರು ಮಾನಸಿಕವಾಗಿ ದೈಹಿಕವಾಗಿ ಕುಗ್ಗುವ ಪರಿಸ್ಥಿತಿಯನ್ನು ಇಂತಹ ಕ್ರೀಡೆಗಳಲ್ಲಿ ತೊಡಗಿಸಿಕೊಂಡಾಗ ಪುನಶ್ಚೇತನಗೊಳ್ಳಲು ಸಾಧ್ಯವಾಗುತ್ತದೆ. ಪ್ರತಿವರ್ಷ ಇಂತಹದೊಂದು ಕ್ರೀಡಾಕೂಟ ಆಯೋಜನೆಗೆ ಪರಂಪರೆ ಹಾಕಿಕೊಳ್ಳಬೇಕು. ಅಂದಾಗ ಮಾತ್ರ ಕ್ರೀಡೆಗೂ ಹಾಗೂ ಒತ್ತಡದ ಬದುಕುನಿಂದ ಹೊರಬಂದು ಲವಲವಿಕೆಯಿಂದ ಇರಲು ಸಾಧ್ಯವಾಗುತ್ತದೆ ಎಂದರು.

ಕ್ರೀಡಾಕೂಟಗಳಲ್ಲಿ ಕ್ರೀಡಾ ಮನೋಭಾವದಿಂದ ಭಾಗವಹಿಸಿ ಕ್ರೀಡೆಯ ಮಹತ್ವವನ್ನು ಅರಿಯಬೇಕು. ಸೋಲು ಗೆಲುವಿನ ಸೋಪಾನ ಎಂದು ತಿಳಿದು ಪ್ರತಿ ಆಟದಲ್ಲಿ ಸೋಲು ಬರುವದಿಲ್ಲ. ಗೆಲುವು ಬರುವದಿಲ್ಲ. ಗೆದ್ದಾಗ ಹಿಗ್ಗದೇ ಸೋತಾಗ ಕುಗ್ಗದೇ ಕ್ರೀಡಾ ಮನೋಭಾವ ಬೆಳೆಸಿಕೊಳ್ಳಬೇಕು ಎಂದರು. ಪೊಲೀಸ್ ಇಲಾಖೆ ಆಯೋಜಿಸಿದ ಕ್ರೀಡಾಕೂಟದ ಶಿಸ್ತನ್ನು ಪಂಚಾಯತರಾಜ್ ನೌಕರರ ಕ್ರೀಡಾಕೂಟದಲ್ಲಿ ಕಂಡುಬಂದಿದೆ ಎಂದು ತಿಳಿಸಿದರು.

ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ, ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಪರಿಶ್ರಮದಿಂದ ಇಂತಹದೊಂದು ಕ್ರೀಡಾ–ಕೂಟ ಅಚ್ಚುಕಟ್ಟಾಗಿ ನಡೆಸಲು ಸಾಧ್ಯವಾಗಿದೆ. ಕಳೆದ ವರ್ಷಕ್ಕಿಂತ ಈ ವರ್ಷ ಹೆಚ್ಚಿನ ಪ್ರಮಾಣದಲ್ಲಿ ಕ್ರೀಡೆಗಳಲ್ಲಿ ಭಾಗವಹಿಸಲು ನೌಕರರು ಬಂದಿರುವುದು ಸಂತೋಷದ ವಿಷಯವಾಗಿದೆ ಎಂದರು.



ಕ್ರೀಡಾ ಬಲೂನು ಹಾರಿಸಿ ಮಾತನಾಡಿದ ಯುಕೆಪಿಯ ಮಹಾವ್ಯವಸ್ಥಾಪಕ ಗಿತ್ತೆ ಮಾಧವ ವಿಠಲರಾವ್, ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು ಗ್ರಾಮೀಣ ಪ್ರದೇಶದ ಕ್ರೀಡಾಕೂಟಗಳನ್ನು ಗುರುತಿಸಿ ಅದರಲ್ಲೂ ಸರಕಾರಿ ನೌಕರ ಕ್ರೀಡಾಪಟುಗಳನ್ನು ಗುರುತಿಸಿ ಇಂತಹ ಕ್ರೀಡೆಗಳಲ್ಲಿ ಭಾಗವಹಿಸುವಂತೆ ಪ್ರೇರೇಪಿಸಲು ತಿಳಿಸಿದರು.

ಜಿಲ್ಲಾ ನೌಕರರ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಬಳ್ಳಾರಿ ಮಾತನಾಡಿ, ಈ ಬಾರಿ ಕ್ರೀಡಾಕೂಟ ಅತೀ ವಿಜೃಂಬನೆಯಿಂದ ನಡೆದಿದ್ದು, ಪ್ರತಿ ತಾಲೂಕಾ ಮಟ್ಟದಿಂದ ಬಂದಂತಹ ಕ್ರೀಡಾಪಟುಗಳು ತಮ್ಮದೇ ಆದ ಸಮವಸ್ತ್ರ ಧರಿಸಿ ಕ್ರೀಡಾ ಮನೋಭಾವದಿಂದ ಭಾಗವಹಿಸಿದ್ದು,ಆಕರ್ಷಣೀಯವಾಗಿದೆ. ಜಿ.ಪಂ ಸಿಇಓ ಕುರೇರ ಅವರ ಪ್ರೇರಣೆಯಿಂದ ಕ್ರೀಡಾಕೂಟ ಯಶಸ್ವಿಯಾಗಲು ಸಹಕಾರಿಯಾಗಿದೆ ಎಂದರು. ಪ್ರಾರಂಭದಲ್ಲಿ ಜಿ.ಪಂ ಉಪಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಜಿ.ಪಂ ಮುಖ್ಯ ಯೋಜನಾಧಿಕಾರಿ ಡಾ.ಪುನಿತ್ ಬಿ.ಆರ್, ಮುಖ್ಯ ಲೆಕ್ಕಾಧಿಕಾರಿ ಸಿದ್ದರಾಮೇಶ್ವರ ಉಕ್ಕಲಿ, ರಾಜ್ಯ ಪಂಚಾಯತ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ದಿ ಸಂಘದ ರಾಜ್ಯಾಧ್ಯಕ್ಷ ರಾಜು ವಾರದ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಜ. 6 ರಿಂದ 20 ರವರೆಗೆ "ವಿಶೇಷ ನೋಂದಣಿ ಅಭಿಯಾನ"

ಕಲಬುರಗಿ,ಜ.3:ಕರ್ನಾಟಕ ಸರ್ಕಾರದ ಮಹತ್ವಕಾಂಕ್ಷಿ ಯೋಜನೆಗಳಲ್ಲಿ ಒಂದಾದ 'ಯುವನಿಧಿ' ಯೋಜನೆಯಡಿ ಫಲಾನುಭವಿಗಳ ನೋಂದಣಿ ಪ್ರಕ್ರಿಯೆ ಈಗಾಗಲೇ ಚಾಲ್ತಿಯಲ್ಲಿದ್ದು, ಈ ಹಿನ್ನೆಲೆಯಲ್ಲಿ 2022–23 ಹಾಗೂ 2023–24ನೇ ಸಾಲಿನಲ್ಲಿ ಪದವಿ/ಡಿಪ್ಲೋಮಾ ತೇರ್ಗಡೆ ಹೊಂದಿದ ನಿರುದ್ಯೋಗಿ ಅಭ್ಯರ್ಥಿಗಳು 'ಯುವನಿಧಿ' ಯೋಜನೆಯಡಿ ೩ಣಣಠಿ:// ಜತಭಿಟಿಜಿಚಿಣಠ.ಞಚಿಡಿಟಿಚಿ–ಣಚಿಞಚಿ.ರಠಠ.ಟಿ ಸೇವಾ ಸಿಂಧು ಪೋರ್ಟಲ್‌ನಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು 2025ರ ಜನವರಿ 6 ರಿಂದ 20 ರವರೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಜಿಲ್ಲೆಯ ಎಲ್ಲಾ ವಿಶ್ವವಿದ್ಯಾಲಯಗಳು, ಸರ್ಕಾರಿ/ಅನುದಾನಿತ ಪದವಿ/ಡಿಪ್ಲೋಮಾ, ತಾಲ್ಲೂಕು ಕಚೇರಿಗಳಲ್ಲಿ "ವಿಶೇಷ ನೋಂದಣಿ ಅಭಿಯಾನ"ವನ್ನು ಹಮ್ಮಿಕೊಳ್ಳಲಾಗಿದ್ದು, ಅರ್ಹ ಫಲಾನುಭವಿಗಳು ಇದರ ಸದುಪಯೋಗಪಡೆಯಬೇಕೆಂದು ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ತಿಳಿಸಿದ್ದಾರೆ.

# ಕೌಟುಂಬಿಕ ದೌರ್ಜನ್ಯ, ಪ್ರಕರಣಗಳನ್ನು ತಡೆಯಲು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿ:ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್

ಕಲಬುರಗಿ:ಜ.3:ಇತ್ತಿಚೀನ ದಿನಗಳಲ್ಲಿ ಕೌಟುಂಬಿಕ ದೌರ್ಜನ್ಯ ಪ್ರಕರಣಗಳು ಹೆಚ್ಚಾಗುತ್ತಿದ್ದು ಇದನ್ನು ತಡೆಯಲು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಅವಶ್ಯಕವಾಗಿದೆ ಈ ಕುರಿತು ಅಧಿಕಾರಿಗಳುಕ್ರಮವಹಿಸಬೇಕೆಂದು ಜಿಲ್ಲಾಧಿಕಾರಿಗೆ ಭಿ ಪೌಜಿಯಾ ತರನ್ನುಮ್ ಅಧಿಕಾರಿಗಳಿಗೆ ಸೂಚನೆ ನೀಡಿದರು

.ಗುರುವಾರದಂದುಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಕೌಟುಂಬಿಕ ಕಲಹ ದೌರ್ಜನ್ಯ ಪ್ರಕರಣಗಳ ತಡೆಗೆ ಜಾಗೃತಿ ಮೂಡಿಸುವುದು ಜೊತೆಗೆ 181 ಮಹಿಳಾ ಸಹಾಯವಾಣಿ ಇದ್ದು ಸಾರ್ವಜನಿಕರು ತುರ್ತು ಸಮಯದಲ್ಲಿ 108, ಮತ್ತು 112 ಗೆ ಕರೆ ಮಾಡುವುದರ ಬಗ್ಗೆ ಜನರಲ್ಲಿ ಹೆಚ್ಚಿನ ಅರಿವು ಮೂಡಿಸಬೇಕಿದೆ

ಡಿಜಿಟಲ್,ಆನ್‌ಲೈನ್ ಸೈಬರ್ ಕ್ರೈಂ ಕುರಿತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,



ಲೀಡ್ ಬ್ಯಾಂಕ್ ಸೇರಿದಂತೆ ಸ್ವಯಂ ಸೇವಕರು ಜಾಗೃತಿ ಮೂಡಿಸಬೇಕು.ಅಲ್ಲದೇ ಬಹಳಷ್ಟು ಜನರಿಗೆ ಸೈಬರ್ ಕ್ರೈಂ ಸ್ಟೇಷನ್ ಇದೆ ಎನ್ನುವುದು ತಿಳಿದಿಲ್ಲ ಇದರ ಬಗ್ಗೆ ತಿಳಿಸಬೇಕು ಬೇಟಿ ಬಚಾವೋ–ಬೇಟಿ ಪಡಾವೋ ಯೋಜನೆಗೆ ಹೆಚ್ಚಿನ ಪ್ರಚಾರ ನೀಡಬೇಕು ಇದರಿಂದ ಬಹಳಷ್ಟು ಜನರಿಗೆ ಅನುಕೂಲವಾಗುತ್ತದೆ, ಉತ್ತರ ಪ್ರದೇಶ ಬಿಹಾರದಲ್ಲಿ ಹೆಚ್ಚಿನ ಜಾಗೃತಿ ಮೂಡಿಸಲಾಗುತ್ತದೆ ಅದೇ ರೀತಿ ಇಲ್ಲಿಯು ಹೆಚ್ಚಿನ ಗಮನ ಹರಿಸಲು ಅಧಿಕಾರಿಗಳಿಗೆ ಡಿಸಿ ಸಲಹೆ ಸೂಚನೆ ನೀಡಿದರು.

ಸಖಿ ಒನ್ ಸ್ಟಾಪ್ ಕೇಂದ್ರಲ್ಲಿ ಏಪ್ರಿಲ್ 2024ರಿಂದನವೆಂಬರ್ 2024 ರವರೆಗೆ ದಾಖಲಾದ ಪೋಕ್ಸೋ ಕಾಯ್ದೆಯಡಿ ಇಲ್ಲಿಯವರೆಗೆ ಒಟ್ಟು 48 ಪ್ರಕರಣಗಳು ಎಫ್‌ಐಆರ್ ಆಗಿದ್ದು, ಉಳಿದಂತೆ ಉಳಿದಂತೆ 36 ಪ್ರಕರಣಗಳು ಚಾಲ್ತಿಯಲ್ಲಿವೆ ಅಧಿಕಾರಿಗಳು ಸಭೆಯ ಗಮನಕ್ಕೆ ತಂದರು.

ಶಕ್ತಿ ಸದನ ( ಸ್ವಾಧಾರ ಗೃಹ ) ಯೋಜನೆಯಡಿ, ಮಹಾದೇವಿ ತಾಯಿ ಮಹಿಳಾ ವಿದ್ಯಾವರ್ಧಕ ಸಂಸ್ಕೆ ಸ್ವಾಧಾರ ಗೃಹ, ಸಂತೋಷ ಕಾಲೋನಿ ಕಲಬುರಗಿ,ಕರ್ನಾಟಕಸರ್ವೋದಯ ಸಂಸ್ಥೆ ಪಾರ್ವತಿ ಸ್ವಾಧಾರ ಗೃಹ ರಾಮಮಂದಿರ ಹತ್ತಿರ ಕಲಬುರಗಿ ಸಂಸ್ಥೆಯಲ್ಲಿರುವ ಹೆಣ್ಣು ಮಕ್ಕಳ ಸಂಖ್ಯೆ ಒಟ್ಟು 28 ಇದ್ದು, ಸಂಸ್ಥೆಯಲ್ಲಿರುವ ಮಕ್ಕಳ ಸಂಖ್ಯೆ. 05 ಇರುತ್ತದೆ ಎಂದರು.

ರಾಜ್ಯದಲ್ಲಿ ರಾಷ್ಟ್ರೀಯ ಶಿಶುಪಾಲನಾ ಕೇಂದ್ರ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಶಿಶುಪಾಲನಾ ಕೇಂದ್ರಗಳ 08 ಶಿಶು ಪಾಲನಾ ಕೇಂದ್ರಗಳಲ್ಲಿ ಹತ್ತಿರದ ಅಂಗನವಾಡಿ ಕೇಂದ್ರದಲ್ಲಿ ವಿಲೀನಗೊಳಿಸಿ, ಅಂಗನವಾಡಿ, ಕ್ರಂ ಕ್ರಷ್ ಕೇಂದ್ರಗಳಾಗಿ ಮುಂದುವರಿಸಲಾಗಿದೆ ಎಂದು ಸಭೆಯ ಗಮನಕ್ಕೆ ತಂದರು.

ಪ್ರಧಾನಮಂತ್ರಿ ಮಾತೃವಂದನಾ ಯೋಜನೆಯಡಿ ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಿಸಬೇಕು ಸರ್ಕಾರದಿಂದ ಸಿಗುವಂತ ಸೌಲಭ್ಯಗಳನ್ನು ನೀಡಬೇಕೆಂದು ಸಲಹೆ ಸೂಚನೆಗಳನ್ನು ನೀಡಿದರು. ಬ್ಯಾಂಕ್ ಖಾತೆ ಆಧಾರ್ ಲಿಂಕ್ ಮಾಡಬೇಕು ಎಂದರು.

ಸ್ತ್ರೀ ಶಕ್ತಿ ಯೋಜನೆಯ ಭವನಗಳಿಗೆ ಸರ್ಕಾರ ಎಷ್ಟು ಅನುದಾನ ಮಾಹಿತಿ ಮತ್ತು ಭವನಗಳ ನಿರ್ವಹಣೆಯ ಕೆಲಸ ಕಾರ್ಯಗಳ ಮಾಹಿತಿ ಪಡೆದುಕೊಂಡರು.

ಜಿಲ್ಲಾಧಿಕಾರಿ ಬಿ ಪೌಜಿಯಾ ಅವರು ಸ್ಫೂರ್ತಿ ಯೋಜನೆಯಡಿ ಸಿಗಬೇಕಾದ ಸೌಲಭ್ಯಗಳ ಮಾಹಿತಿ ಪಡೆದುಕೊಂಡು ಮಕ್ಕಳೊಂದಿಗೆ ಸಂತೋಷವನ್ನು ಹಂಚಿಕೊಂಡರು. ನಂತರ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹ ಭಂವರಸಿಂಗ್ ಮೀನಾ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳಾದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆಯ ಉಪನಿರ್ದೇಶ ರಾಜಕುಮಾರ ರಾಠೋಡ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಾಯಕ ನಿರ್ದೇಶಕ ಶಿವಶರಣಪ್ಪ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ಜಗದೇವಪ್ಪ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸುರ್ಯಾಕಾಂತ ಮದಾನೆ ಕ್ಷಯ ರೋಗ ನಿರ್ಮೂಲನಾ ಆಧಿಕಾರಿ ಡಾ. ಚಂದ್ರಕಾಂತ ನರಿಬೋಳಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಂಜುಳ ವಿ ಪಾಟೀಲ, ಗುಲಬರ್ಗಾ ನಗರದ ಶಿಶಿ ಅಭಿವೃ ಯೋಜನಾಧಿಕಾರಿ ಭೀಮರಾಯ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಎಲ್ಲಾ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಸ್ವಯಂ ಸೇವಕರು, ಸಭೆಯಲ್ಲಿ ಹಾಜರಿದ್ದರು.

## ಕಾಂಗ್ರೆಸ್ಸಿಗರು ಬಿಜೆಪಿಯವರ ಮೇಲೆ ಇಲ್ಲಸಲ್ಲದ ಆರೋಪ ಮಾಡುತ್ತಿದ್ದಾರೆ : ಲಕ್ಷ್ಮಣ್ ಕಾಳಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಕುಕನೂರ ಪಟ್ಟಣದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿ, ಉದ್ದೇಶಿಸಿ ರಾಜಕೀಯ ಎಂದ ಮೇಲೆ ಟಿಕೆ ಟಿಪ್ಪಣಿ ಸಹಜವಾಗಿದ್ದು ಆದರೆ ಕಾಂಗ್ರೆಸ್ ಪಕ್ಷದ ವಕ್ತಾರರು ಬಿಜೆಪಿಗರ ಕುರಿತಂತೆ ಕೀಳು ಮಟ್ಟದಲ್ಲಿ ಉಚ್ಚಾರಣೆ ಮಾಡಿರುವುದು ಅಕ್ಷಮ್ಯವಾಗಿದ್ದು ಇದನ್ನು ಬಿಜೆಪಿಗರು ಸಹಿಸುವುದಿಲ್ಲ ಎಂದು ಕರಬಸಯ್ಯ ಬಿನ್ನಾಳ ತಿಳಿಸಿದರು.

ನಮ್ಮ ಮುಖಂಡರಾದ ವೀರಣ್ಣಹುಬ್ಬಳ್ಳಿಯವರು ಯಾರನ್ನೇ ಆಗಲಿ ಸನ್ಮಾನ್ಯ ಎಂದು ಮಾತುಗಳನ್ನು ಪ್ರಾರಂಭಿಸುತ್ತಾರೆ ಆದರೆ ಅವರು ಶಾಸಕರನ್ನು ನಿಂದಿಸಿರುತ್ತಾರೆ ಎಂಬ ಹೇಳಿಕೆ ನೀಡಿರುವುದು ಸತ್ಯಕ್ಕೆ ದೂರವಾಗಿದ್ದು ಮತ್ತೊಮ್ಮೆ ಪರಾಮರ್ಶೆ ಮಾಡಿಕೊಳ್ಳಲಿ ಎಂದು ವೀರೇಶ್ ಸಬರದ ತಿಳಿಸಿದರು. ಯುವ ನಾಯಕ ವೀರಣ್ಣ ಹುಬ್ಬಳ್ಳಿಯವರು ನಮ್ಮ ಪಕ್ಷ ಹಾಗೂ ನಮ್ಮ ಸಮಾಜದ ಹಿರಿಯರಾಗಿದ್ದು ಅವರ ಜೊತೆ ಭಾರತೀಯ ಜನತಾ ಪಕ್ಷದ ಜಿಲ್ಲಾಧ್ಯಕ್ಷರಿಗೂ ಸಹ ಏಕವಚನದಲ್ಲಿ ಸಂಭವಿಸಿರುವುದು ನಾವು ಖಂಡಿಸುತ್ತೇವೆ. ನೀವು ಭಾಜಪ ಮುಖಂಡ ವೀರಣ್ಣ ಹುಬ್ಬಳ್ಳಿಯವರ ಮನೆಗೆ ಮುತ್ತಿಗೆ ಹಾಕುವುದಾಗಿ ತಿಳಿಸಿರುತ್ತೀರಿ ಆದರೆ ತಾವು ಬಳಸಿರುವ ಏಕವಚನ ಕರಿತು ಕ್ಷಮೆ ಕೇಳದಿದ್ದರೆ ನಾವು ಸಹ ನಿಮ್ಮ ಮನೆಗೆ ಮುತ್ತಿಗೆ ಹಾಕುತ್ತೇವೆ ಎಂದು ಎಚ್ಚರಿಕೆ ನೀಡಿದರು.

ಎಸ್ಸಿ ಮೋರ್ಚಾ ಮುಖಂಡ ಲಕ್ಷ್ಮಣ ಕಾಳಿ ಮಾತನಾಡಿ ಕಾಂಗ್ರೆಸ್ಸಿಗರು ನಮ್ಮ ಮೇಲೆ ಇಲ್ಲಸಲ್ಲದ ಆರೋಪ ಮಾಡಿದ್ದು ಅದನ್ನು ಸಾಬೀತು ಮಾಡುವಂತೆ ಸವಾಲು ಹಾಕುವುದಾಗಿ ತಿಳಿಸಿದರು ಇಲ್ಲವಾದಲ್ಲಿ ನಾವು ಏನು ಎಂಬುದನ್ನು ತೋರಿಸುತ್ತೇವೆ ಎಂದು ಹೇಳಿದರು.

ಈ ವೇಳೆಯಲ್ಲಿ ಪ್ರಮುಖರಾದ ಬಸವರಾಜ ಹಾಳಕೇರಿ, ಮಧು ಕಲ್ಮನಿ, ರಮೇಶ ಶಾಸ್ತ್ರಿ, ನಾಗಪ್ಪ ಕಲ್ಮನಿ, ಬಸವರಾಜ್ ಬಡಿಗೇರ, ಶರಣಪ್ಪ ಕಾಳಿ, ಚಂದ್ರು ಬಗ್ನಾಳ, ಜಗದೀಶ್ ಸುಡಿ, ರಾಜಶೇಖರ್ ದ್ಯಾಪುರ, ವಿನಾಯಕ ಸರಗಣಾಚಾರಿ, ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

## ಅರ್ಥಪೂರ್ಣವಾಗಿ ಶಿವಯೋಗಿ ಸಿದ್ದರಾಮೇಶ್ವರ ಜಯಂತಿ ಆಚರಣೆಗೆ ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜ,3–ಶಿವಯೋಗಿ ಸಿದ್ದರಾಮೇಶ್ವರ ಜಯಂತಿಯನ್ನು ಇದೇ ಜನವರಿ 20 ರಂದು ಜಿಲ್ಲಾಡಳಿತದವತಿಯಿಂದ ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ.

ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ನಡೆದ ಶಿವಯೋಗಿ ಸಿದ್ದರಾಮೇಶ್ವರ ಜಯಂತಿ ಆಚರಣೆ ಕುರಿತ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಗಿದೆ.

ಸಭೆಯ ಅಧ್ಯಕ್ಷತೆ ವಹಿಸಿದ್ದ ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ಅವರು, ಅಂ–ದು ಮಧ್ಯಾಹ್ನ 12–30 ಕ್ಕೆ ನಗರದ ಸರಕಾರಿ ಪದವಿ ಮಹಾವಿದ್ಯಾಲಯ ಸಭಾಂಗಣದಲ್ಲಿ ಈ ಕಾರ್ಯಕ್ರಮ ನಡೆಯಲಿದ್ದು, ಶಿಷ್ಠಾಚಾರದಂತೆ ಅತಿಥಿಗಣ್ಯರನ್ನು ಆಹ್ವಾನಿಸಲು, ವೇದಿಕೆ, ಆಹ್ವಾನ ಪತ್ರಿಕೆ ಸೇರಿದಂತೆ ಇನ್ನಿತರ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಅದರಂತೆ ಜಿಲ್ಲೆಯ ಎಲ್ಲ ಶಾಲಾ, ಕಾಲೇಜುಗಳಲ್ಲಿ, ಕಚೇರಿಗಳಲ್ಲಿ ಈ ಜಯಂತಿ ಆಚರಿಸಲು ಹಾಗೂ ತಾಲೂಕು ಮಟ್ಟದಲ್ಲಿ, ಈ ಜಯಂತಿಯನ್ನು ದಿನಾಂಕ 14/1/2025 ರಂದು ಆಚರಣೆಗೆ ಸಕಲ ಕ್ರಮಗಳನ್ನು ಕೈಗೊಳ್ಳಬೇಕು, ಯಾವುದೇ ರೀತಿಯ ಅಹಿತಕರ ಘಟನೆ ನಡೆಯದಂತೆ ಸೂಕ್ತ ಪೊಲೀಸ್ ಬಂದೋಬಸ್ತ ಮಾಡಲು ಹಾಗೂ ನುರಿತ ಉಪನ್ಯಾಸಕರನ್ನು ಜಿಲ್ಲಾಮಟ್ಟದಲ್ಲಿ ಕಾರ್ಯಕ್ರಮಕ್ಕೆ ಆಹ್ವಾನಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಕಾರ್ಯಕ್ರಮ ಅಚ್ಚುಕಟ್ಟಾಗಿ ಆಯೋಜಿಸಬೇಕು, ಜಿಲ್ಲೆಯ ಅಧಿಕಾರಿಗಳು, ಸಿಬ್ಬಂದಿಗಳು, ಆಯಾ ಸಮಾಜದ ಮುಖಂಡರು, ಸಂಘ ಸಂಸ್ಥೆಗಳವರು ತಪ್ಪದೇ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಅವರು ಸಲಹೆ ನೀಡಿದರು.

ಈ ಸಭೆಯಲ್ಲಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರದೇವಿ ಮಠಪತಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಮುಧೋಳ,

ಜಿಲ್ಲಾ ಭೋವಿ ಸಮಾಜದ ಜಿಲ್ಲಾಧ್ಯಕ್ಷ ನಾಗಪ್ಪ ಬೆನಕಲ್, ಸಮಾಜದ ಮುಖಂಡ ತಿಪ್ಪಣ್ಣ ಒಡೆಯರ್, ಸಿದ್ರಾಮಪ್ಪ ನಾಯ್ಕಲ್, ಮಿಲಿಂದ್ ಕುಮಾರ್. ಎಸ್.ಎಸ್ ,

ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಸತತ ಐದನೇ ಬಾರಿ ಗ್ರಾಪಂ ಅಧ್ಯಕ್ಷ ಆಯ್ಕೆ ಗಿರಣಿವಡ್ಡರ್



ಮಲ್ಲಮ್ಮ ನುಡಿ ವಾರ್ತೆ

ಇಂಡಿ : ತಾಲೂಕಿನ ಪಡನೂರು ಗ್ರಾಪಂ ಮಧ್ಯಂತರ ಚುನಾವಣೆಯಲ್ಲಿ ಅಧ್ಯಕ್ಷ ಪದಾಧಿಕಾರಿಗಳ ಆಯ್ಕೆ ನಡೆದಿದ್ದು, ಸತತ ಐದನೇ ಬಾರಿ ನೂತನ ಅಧ್ಯಕ್ಷರಾಗಿ ನೇತ್ರಾವತಿ ಗಿರಣಿವಡ್ಡರ್ ಅವಿರೋಧ ಆಯ್ಕೆಯಾಗಿದ್ದಾರೆ. ಗ್ರಾಮಸ್ಥರು ಅವರ ಅಭಿಮಾನಿಗಳು ಪಟಾಕಿ ಸಿಡಿಸಿ, ಸಿಹಿ ಹಂಚಿ, ಸಂಭ್ರಮಿಸಿ ಇನ್ನೂ ಕೆಲವು ಅಭಿಮಾನಿಗಳು ಶಾಲು ಹೊಂದಿಸಿ ಹೂವಿನ ಹಾರ ಹಾಕಿ ಅಭಿನಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ನೂತವಾಗಿ ಆಯ್ಕೆಯಾದ ಅಧ್ಯಕ್ಷೆ ನೇತ್ರಾವತಿ ಗಿರಣಿವಡ್ಡರ ಮಾತನಾಡಿ, ಸುಮಾರು 1995 ರಿಂದ 2025 ವರೆಗೆ ನಮ್ಮ ಮನೆತನದಲ್ಲಿ ಅಧ್ಯಕ್ಷ ಸ್ಥಾನವನ್ನು ಉಳಿಸಿಕೊಂಡು ಬಂದಿದೆ ಅಂದರೆ ಅದು ಗ್ರಾಮದ ಜನರು ನಮ್ಮ ಮೇಲೆ ಇಟ್ಟಿರುವಂತ ಪ್ರೀತಿ, ವಿಶ್ವಾಸ, ಗೌರವ, ನಂಬಿಕೆಗೆ, ಸದಾ ಚಿರುಋಣಿ ಎಂದರು.

ಗ್ರಾಪಂ ಅಧ್ಯಕ್ಷರಾಗಿ ಆಯ್ಕೆ ಮಾಡಿಕೊಂಡಿರುವ ಊರಿನ ಜನರಿಗೆ ಹಾಗೂ ಗ್ರಾಮ ಪಂಚಾಯತಿ ಸದಸ್ಯರಿಗೆ ಗಿರಣಿವಡ್ಡರ್ ಪರಿವಾರದಿಂದ ಹೃದಯಪೂರ್ವಕ ಧನ್ಯವಾದಗಳು ಹೇಳಿದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷ ಭಾರತಿ ಪಾಟೀಲ್, ರೇಣುಕಾ ಗಿರಣಿವಡ್ಡರ್ ಶೈಲಾಶ್ರೀ ಅರವತ್ತು, ಲಲಿತಾ ಬಾಯಿ ಅವರಾದಿ, ಕೇದಾರನಾಥ್ ಬಿರಾದರ್, ಮಹಾದೇವಿ ಜಾಧವ್, ಗ್ರಾಮಸ್ಥರು ಹಾಗೂ ಇನ್ನಿತರ ಉಪಸ್ಥಿತರಿದ್ದರು.

## ನಿರಂತರವಾಗಿ ಕೆಲಸ ಮಾಡಿದಾಗ ಕಾಮಗಾರಿಗಳು ಮುಗಿಯುತ್ತವೆ– ಸಚಿವ ಎನ್.ಎಸ್. ಭೋಸರಾಜು



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಯಾವುದೇ ಕೆಲಸ ಮತ್ತು ಕಾಮಗಾರಿಗಳು ಕಾಲಮಿತಿಯಲ್ಲಿ ಮುಗಿಯಬೇಕಾದರೆ ನಿರಂತರವಾಗಿ ಕೆಲಸ ಮಾಡಬೇಕು ಅಂದಾಗ ಮಾತ್ರ ಅವುಗಳು ಬೇಗನೆ ಮುಗಿಯುತ್ತವೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಕರ್ನಾಟಕ ವಿಧಾನ ಪರಿಷತ್ ಸಭಾ ನಾಯಕರಾದ ಎನ್.ಎಸ್.ಭೋಸರಾಜು ಹೇಳಿದರು.

ಅವರು ಶುಕ್ರವಾರ ಕೊಪ್ಪಳ ತಾಲ್ಲೂಕಿನ ನಾರಾಯಣಪೇಟೆ ಗ್ರಾಮದ ಕೊಪ್ಪಳ–ಯಲಬುರ್ಗಾ ಕೆರೆ ತುಂಬಿಸುವ ಯೋಜನೆಯ ಮೊದಲ ಹಂತದ ಕಾಮಗಾರಿಯ ಜಾಕವೆಲ್ ಮತ್ತು ಪಂಪಹೌಸ್ ಪರಿವೀಕ್ಷಣೆ ನಂತರ ಮಾಧ್ಯಮ ಪ್ರತಿನಿಧಿಗಳಿಗೆ ಮಾಹಿತಿ ನೀಡಿ ಮಾತನಾಡಿದರು.

ಕೊಪ್ಪಳ–ಯಲಬುರ್ಗಾ ಕೆರೆ ತುಂಬಿಸುವ ಯೋಜನೆಯ ಮೊದಲ ಹಂತದ ಕಾಮಗಾರಿ ಇದಾಗಿದ್ದು 6 ಕೆರೆಗಳನ್ನು 2.83 ಕೋಟಿ ವೆಚ್ಚದಲ್ಲಿ ಮಾಡಲಾಗುತ್ತಿದೆ. ಈಗಾಗಲೇ ಈ ಭಾಗದಲ್ಲಿನ ಸಮಸ್ಯೆಗಳನ್ನು ರಿವ್ಹಿವ್ ಮಾಡಲು ಎರಡು ಸಲ ಸಭೆಗಳನ್ನು ಮಾಡಲಾಗಿದೆ. ಇದರ ಜೊತೆಗೆ ಕೊಪ್ಪಳ ಜಿಲ್ಲೆಯ ಹುಲಗಿ ಗ್ರಾಮದ ಹತ್ತಿರ ಇರುವ ಹಿರೇಹಳ್ಳ ಏತ ನೀರಾವರಿ ಯೋಜನೆ ಹಾಗೂ ಕೆರೆ ತುಂಬಿಸುವ ಕಾಮಗಾರಿಗಳು, ಭಾಣಾಪೂರ ಗ್ರಾಮದಲ್ಲಿ ಕೊಪ್ಪಳ–ಯಲಬುರ್ಗಾ ಕೆರೆ ತುಂಬಿಸುವ ಏತ ನೀರಾವರಿ ಯೋಜನೆ, ಕಡೆಕೊಪ್ಪ ಗ್ರಾಮದಲ್ಲಿ ಕುಷ್ಟಗಿ ಏತ ನೀರಾವರಿ ಯೋಜನೆ, ಈ ಎಲ್ಲಾ ಕಾಮಗಾರಿಗಳ ಪರಿವೀಕ್ಷಣೆ ನಂತರ ಶನಿವಾರ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದೇನೆ ಎಂದು ಹೇಳಿದರು.

ಕೃಷ್ಣ–ಕಾವೇರಿ ಬೇಸಿನ ಕಾಮಗಾರಿಗಳನ್ನು ಒಂದು ವರ್ಷದಲ್ಲಿ ಮುಗಿಸುವಂತೆ ಹಾಗೂ ಕೆಲಸದ ವೇಗ ಹೆಚ್ಚಿಸುವಂತೆ ಮಾಡಲಾಗುತ್ತಿದೆ. ನಮ್ಮ ಭಾಗದಲ್ಲಿಯ ಕಾಮಗಾರಿಗಳೂ ಕಾಲಮಿತಿಯಲ್ಲಿ ನಡೆಯಬೇಕು ಎಂಬ ಉದ್ದೇಶಕ್ಕಾಗಿ ವಿವಿಧ ಕಾಮಗಾರಿಗಳ ಪರಿವೀಕ್ಷಣೆಗೆ ಬಂದಿದ್ದೇನೆ. ಕಾಲಮಿತಿಯಲ್ಲಿ ಕೆಲಸ ಮಾಡದ ಗುತ್ತಿಗೆದಾರರಿಗೆ ಪೆನಾಲ್ಟಿ ಹಾಕಲಾಗುತ್ತದೆ. ಗುತ್ತಿಗೆದಾರರು ಕೆಲಸವನ್ನು ಕಾಲಮಿತಿಯಲ್ಲಿ ಮುಗಿಸಿದಾಗ ಯಾವುದೇ ಸಮಸ್ಯೆಗಳಾಗುವುದಿಲ್ಲ ವಿಳಂಬವಾದರೆ ಇನ್ನೂ ಬೇರೆ ಸಮಸ್ಯೆಗಳು ಉಂಟಾಗುತ್ತವೆ ಎಂದು ಹೇಳಿದರು.

ಕೊಪ್ಪಳ–ಯಲಬುರ್ಗಾ ಕೆರೆ ತುಂಬಿಸುವ ಯೋಜನೆಯ ಮೊದಲ ಹಂತದ ಕಾಮಗಾರಿಯ ಜಾಕವೆಲ್ ಮತ್ತು ಪಂಪಹೌಸ್ ಪರಿವೀಕ್ಷಣೆ ಸಂದರ್ಭದಲ್ಲಿ ಸಚಿವರು ಯಾವ ತಿಂಗಳಲ್ಲಿ ಎಷ್ಟು ಕೆಲಸ ಮುಗಿಸಬೇಕು ಎಂದು ಮುಂಚಿತವಾಗಿ ತಮಲ್ಲಿ ಒಂದು ಯೋಜನೆ ಇರಬೇಕು. 18 ತಿಂಗಳಲ್ಲಿ ಮುಗಿಸುವ ಕೆಲಸವನ್ನು 6 ವರ್ಷ ಮಾಡಿದರೆ ಹೇಗೆ ಇದನ್ನು ಆದಷ್ಟು ಬೇಗನೆ ಮುಗಿಸಿ ವರದಿ ನೀಡುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಮತ್ತು ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ, ಸಣ್ಣ ನೀರಾವರಿ ಇಲಾಖೆಯ ಕಾರ್ಯದರ್ಶಿ ರಾಘವನ್, ಮುಖ್ಯ ಇಂಜಿನಿಯರ್ ಜಗದೀಶ್ ರಾಥೋಡ್, ಅಧೀಕ್ಷಕ ಇಂಜಿನಿಯರ್ ಲಿಂಗರಾಜ್, ಇಇ ಬಿ.ಎಸ್.ಪಾಟೀಲ್, ಇಇ ಶ್ರವಣಕುಮಾರ, ಎಇಇ.ಗಳಾದ ಜೆ.ಎನ್.ಜೋಳಗೊಂಡ, ದೇವೇಂದ್ರಪ್ಪ ಹಾಗೂ ರಶ್ಮೀ, ಜೂನಿಯರ್ ಇಂಜಿನಿಯರ್ ಪ್ರಕಾಶ ಪಾಟೀಲ್, ಚಂದ್ರಶೇಖರಯ್ಯ ಹಿರೇಮಠ, ಸಂಗಮೇಶ ಗುತ್ತಿ, ರೈಮನ್ ಸಾಬ್ ಮಕಪ್ಪನವರ್, ಮಂಜು ಏಡಿಯಾಪುರ, ಮಲ್ಲಪ್ಪ ಗುತ್ತಿ, ಯಂಕಣ್ಣ ಯೆರಾಸಿ, ಸೇರಿದಂತೆ ಇತರೆ ಅಧಿಕಾರಿಗಳು, ಗುತ್ತಿಗೆದಾರರು ಹಾಗೂ ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

### ಅಭಿವೃದ್ಧಿ ಪತ್ರಿಕೋದ್ಯಮ ಪ್ರಶಸ್ತಿಯ ಹಣ ಕೆಯುಡಬ್ಲೂಜೆ ದತ್ತಿಗೆ

## ಡಾ.ರಾಜಾ ರಾಮಣ್ಣ ಪ್ರಶಸ್ತಿ ಸ್ಥಾಪನೆಗೆ ನಿರ್ಧರಿಸಿದ ಗಿರೀಶ್ ಲಿಂಗಣ್ಣ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ವಾರ್ತಾ ಇಲಾಖೆ ಕೊಡ ಮಾಡುವ ಅಭಿವೃದ್ಧಿ ಪತ್ರಿಕೋದ್ಯಮ ಪ್ರಶಸ್ತಿಗೆ ಭಾಜನರಾಗಿರುವ ಅಂಕಣ–ಕಾರ ಗಿರೀಶ್ ಲಿಂಗಣ್ಣ ಅವರು ಪ್ರಶಸ್ತಿ ಮೊತ್ತ ಒಂದು ಲಕ್ಷ ರೂಗಳನ್ನು ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ದ್ತತಿನಿಧಿ ಪ್ರಶಸ್ತಿಗೆ ನೀಡಲು ನಿರ್ಧರಿಸಿದ್ದಾರೆ.

ಈ ಬಗ್ಗೆ ಸಂಘಕ್ಕೆ ಅಧಿಕೃತವಾಗಿ ಪತ್ರ ಬರೆದು ತಮ್ಮ ನಿರ್ಧಾರ ತಿಳಿಸಿರುವುದನ್ನು ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಸ್ವಾಗತಿಸಿದ್ದಾರೆ.

ಕರ್ನಾಟಕದಲ್ಲಿ ವಿಜ್ಞಾನ ಬರಹಗಾರರಿಗೆ, ವಿಜ್ಞಾನ ಸಂವಾಹಕರಿಗೆ ಹೆಚ್ಚಿನ ಉತ್ತೇಜನ, ಬೆಂಬಲ ನೀಡುವ ನಿಟ್ಟಿನಲ್ಲಿ, ನಾನು ಈ ಪ್ರಶಸ್ತಿಯೊಡನೆ ನೀಡಲಾಗುವ ಒಂದು ಲಕ್ಷ ರೂ ಮೊತ್ತವನ್ನು

ಕರ್ನಾಟಕ ವೃತ್ತಿನಿರತ ಪತ್ರಕರ್ತರ ಸಂಘಕ್ಕೆ (ಕೆಯುಡಬ್ಲ್ಯುಜೆ) ಹಸ್ತಾಂತರಿಸುತ್ತೇನೆ. ಈ ಮೊತ್ತದಿಂದ ನಮ್ಮ ರಾಜ್ಯದ ಪ್ರಸಿದ್ಧ ವಿಜ್ಞಾನಿ ಡಾ. ರಾಜಾ ರಾಮಣ್ಣನವರ ಹೆಸರಿನಲ್ಲಿ ದತ್ತಿನಿಧಿ ಪ್ರಶಸ್ತಿಯನ್ನು ಸ್ಥಾಪಿಸಬೇಕೆಂದು ಗಿರೀಶ್ ಲಿಂಗಣ್ಣ ಮನವಿ ಮಾಡಿದ್ದಾರೆ. ವಿಜ್ಞಾನ, ರಕ್ಷಣೆ, ಬಾಹ್ಯಾಕಾಶದಂತಹ ಸಂಕೀರ್ಣ ವಿಚಾರಗಳನ್ನು ಜನಸಾಮಾನ್ಯರಿಗೆ ಅರ್ಥವಾಗುವ ರೀತಿಯಲ್ಲಿ ಬರೆಯುವ (ಕನ್ನಡ ಅಥವಾ ಇಂಗ್ಲೀಷ್) ಪತ್ರಕರ್ತರು, ಅಂಕಣಕಾರರಿಗೆ ಪ್ರತಿ ವರ್ಷ ಪ್ರಶಸ್ತಿ ನೀಡಬೇಕು. ಹೆಚ್ಚು ಬರಹಗಾರರು ಇಂತಹ ಪ್ರಮುಖ ವಿಚಾರಗಳ ಕುರಿತು ಬರೆಯುವಂತೆ ಮಾಡುವುದು ಮತ್ತು ಯುವ ಮನಸ್ಸುಗಳನ್ನು ಆಸಕ್ತಿಕರ ವೈಜ್ಞಾನಿಕ ಬರಹಗಳಿಂದ ಸೆಳೆಯುವಂತೆ ಮಾಡುವುದು ತಮ್ಮ ಉದ್ದೇಶವಾಗಿದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.


**ಡಾ.ರಾಜರಾಮಣ್ಣ ಪ್ರಶಸ್ತಿ ಕೆಯುಡಬ್ಲೂಜೆ ಅಭಿನಂದನೆ:**

ಅಂಕಣಕಾರ ಗಿರೀಶ್ ಲಿಂಗಣ್ಣ ಅವರ ಆಶಯದಂತೆಯೇ ಕೆಯುಡಬ್ಲೂಜೆ ಡಾ.ರಾಜರಾಮಣ್ಣ ಹೆಸರಿನಲ್ಲಿ ದತ್ತಿನಿಧಿಯನ್ನು ಸ್ಥಾಪಿಸಲಾಗುವುದು ಎಂದು ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ತಿಳಿಸಿದ್ದಾರೆ.

ಕರ್ನಾಟಕದ ಹೆಮ್ಮೆಯ ಪುತ್ರರಾದ ಡಾ. ರಾಜಾ ರಾಮಣ್ಣ ಜಗತ್ತು ಕಂಡ ಶ್ರೇಷ್ಠ ಪರಮಾಣು ವಿಜ್ಞಾನಿಗಳಲ್ಲಿ ಒಬ್ಬರು. ಭಾರತದ ವೈಜ್ಞಾನಿಕ ಪ್ರಗತಿಯ ಹಿಂದೆ ಡಾ. ರಾಜಾ ರಾಮಣ್ಣನವರ ಕೊಡುಗೆ ಅಪಾರವಾಗಿದೆ. ಈ ಬಹುಮಾನವನ್ನು ವಿಜ್ಞಾನ ವಿಚಾರಗಳು ಎಲ್ಲರಿಗೂ ತಲುಪುವಂತೆ ಮಾಡುವ ಪತ್ರಕರ್ತರಿಗೆ ಪ್ರತಿ ವರ್ಷವೂ ನೀಡಲಾಗುವುದು ಎಂದು ತಿಳಿಸಿರುವ ತಗಡೂರು, ಗಿರೀಶ್ ಲಿಂಗಣ್ಣ ಅವರನ್ನು ಅಭಿನಂದಿಸಿದ್ದಾರೆ.

ಮಲ್ಲಮ್ಮ ನುಡಿ ಕನ್ನಡ ದಿನ ಪತ್ರಿಕೆಯಲ್ಲಿ ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ: 09964206170

## ಕೊಪ್ಪಳ ಬಿಜೆಪಿ ಮಹಿಳಾ ಘಟಕದಿಂದ ಬಸವೇಶ್ವರ ವೃತ್ತದಲ್ಲಿ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕರ್ನಾಟಕದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ಆತ್ಮಹತ್ಯೆ ಹಾಗೂ ಹತ್ಯೆ ಭಾಗ್ಯವನ್ನು ಕರ್ನಾಟಕದ ಜನತೆಗೆ ನೀಡಿದೆ ಎಂದು ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ ಹೇಳಿದರು.

ರಾಜ್ಯದಲ್ಲಿ ಬಾಣಂತಿಯರು ಮತ್ತು ಶಿಶುಗಳ ಸಾವು ಹೆಚ್ಚಲು ರಾಜ್ಯ ಸರಕಾರದ ನಿರ್ಲಕ್ಷ್ಯವೇ ಕಾರಣ ಎಂದು ಆರೋಪಿಸಿ ನಗರದ ಬಸವೇಶ್ವರ ವೃತ್ತದ ಬಳಿ ಬಿಜೆಪಿ ಮಹಿಳಾ ಘಟಕದಿಂದ ಗುರುವಾರದಂದು ಪ್ರತಿಭಟನೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ್ ಮಾತನಾಡುತ್ತಾ ರಾಜ್ಯದಲ್ಲಿ ಆರು ಅಧಿಕಾರಿಗಳ ಆತ್ಮಹತ್ಯೆ ಹಾಗೂ 7 ನೂರಕ್ಕೂ ಹೆಚ್ಚು ಬಾಣಂತಿಯರ ಸಾವಿಗೆ ಸರಕಾರದ ನಿರ್ಲಕ್ಷ್ಯವೇ ಕಾರಣ ಹೊರತು ವೈದ್ಯರ ನಿರ್ಲಕ್ಷ್ಯ ಅಲ್ಲ. ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರಿಗೆ ಸಾವುಗಳನ್ನು ತಡೆಯಲು ಸಾಧ್ಯವಾಗಲಿಲ್ಲ. ತಾಯಿಯನ್ನು ಕಳೆದು ಕೊಂಡ ಮಕ್ಕಳಿಗೆ ಕನಿಷ್ಠ 25 ಲಕ್ಷ ರೂ ಪರಿಹಾರ ನೀಡಬೇಕೆಂದು ಆಗ್ರಹಿಸಿದರು.

ಬಾಣಂತಿಯರಿಗೆ ಪೋಶನ್ ಅಭಿಯಾನ, ಜನನಿ ಸುರಕ್ಷಾ ಯೋಜನೆ, ಆಹಾರದ ಕಿಟ್, ಕ್ಯಾಲ್ಸಿಯಂ, ಪ್ರೋಟೀನ್, ಕಬ್ಬಿಣದಂತಹ ಸಾಮಗ್ರಿಗಳನ್ನು ನೀಡುವುದು, ನಿಯಮಿತ ತಪಾಸಣೆ ನಡೆಸುವುದು ಹಾಗೂ ಮಾತೃ ಒಂದನೇ ಯೋಜನೆಯ ಹಣ ಫಲಾನುಭವಿಗಳಿಗೆ ತಲುಪಿಸಲು ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ಹೇಳಿದರು.

ಭಾರತೀಯ ಜನತಾ ಪಕ್ಷದ ಕೊಪ್ಪಳ ಜಿಲ್ಲಾಧ್ಯಕ್ಷ ನವೀನ ಗುಳಗಣ್ಣನವರು ಮಾತನಾಡುತ್ತಾ ಕರ್ನಾಟಕ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಆರು ಅಧಿಕಾರಿಗಳು ಆತ್ಮಹತ್ಯೆಯನ್ನು ಮಾಡಿಕೊಂಡಿದ್ದು 700ಕ್ಕೂ ಹೆಚ್ಚು ಬಾಣಂತಿಯರು ರಾಜ್ಯದಲ್ಲಿ ಸಾವನ್ನಪ್ಪಿದ್ದಾರೆ ಹಾಗೂ 1100 ಕು ಹೆಚ್ಚು ನವಜಾತ ಶಿಶುಗಳ ಸಾವಾಗಿರುವುದು ಕರ್ನಾಟಕ ಕಾಂಗ್ರೆಸ್ ಸರ್ಕಾರದ ನಿರ್ಲಕ್ಷ್ಯ ಧೋರಣೆಯೆ ಕಾರಣವಾಗಿದೆ ಎಂದು ಆರೋಪಿಸಿದರು. ಆರೋಗ್ಯ ಇಲಾಖೆಯಲ್ಲಿ ನಡೆಯುತ್ತಿರುವ ವ್ಯಾಪಕ ಭ್ರಷ್ಟಾಚಾರ, ಕಮಿಷನ್ ದಂಧೆ ಇದಕ್ಕೆಲ್ಲ ಪ್ರಮುಖ ಕಾರಣವಾಗಿದ್ದು ಕಳಪೆ ಔಷದ ಹಾಗೂ ವೈದ್ಯಕೀಯ ಸಾಮಗ್ರಿಗಳ ಪೂರೈಕೆ ಸೇರಿದಂತೆ ಬಾಣಂತಿಯರ ಹಾಗೂ ಹಸುಗುಸುಗಳಿಗಾಗಿ ಕೇಂದ್ರ ಸರ್ಕಾರದ ಯೋಜನೆಗಳಾದ ಇಂದ್ರಧನುಷ್, ಮಾತೃವಂದನ ಯೋಜನೆಗಳನ್ನು ರಾಜ್ಯ ಸರ್ಕಾರ ಸರಿಯಾಗಿ ಜನರಿಗೆ ತಲುಪಿಸುತ್ತಿಲ್ಲ ಹಾಗೂ ಕೇಂದ್ರ ಸರ್ಕಾರ ಈ ಯೋಜನೆಗಳಿಗೆ ನೀಡುವ ಅನುದಾನದ ದುರ್ಬಳಕೆ ಮಾಡುತ್ತಿರುವುದು ನಿಜಕ್ಕೂ ಯೋಚನೆಯ ಸ್ಥಿತಿಯಾಗಿದೆ.

## ಸರ್ಕಾರಿ ಪ್ರಥಮ ದರ್ಜೆ ಕಾಲೇಜು ನಲ್ಲಿ ಅಕ್ಷರದವ್ವ ಸಾವಿತ್ರಿಬಾಯಿ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಗಂಗಾವತಿ ತಾಲೂಕಿನ ಶ್ರೀರಾಮ್ ನಗರದಲ್ಲಿ ಇರುವ ಚಿಲುಕೂರಿ ನಾಗೇಶ್ವರರಾವ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು . ಭಾರತಮಾತೆಯ ಹೆಮ್ಮೆಯ ಪುತ್ರಿಯಾದ, ಭಾರತದ ಪ್ರಪ್ರಥಮ ಶಿಕ್ಷಕಿಯಾದ ,ಅಕ್ಷರದವ್ವರಾದ ಸಾವಿತ್ರಿಬಾಯಿ ಫುಲೆಯವರ ಜಯಂತ್ಯೋತ್ಸವವನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಸಹಪ್ರಾಧ್ಯಾಪಕರಾದ ಡಾ.ಸರ್ಫರಾಜ್ ಅಹ್ಮದ್ ಮಾತನಾಡಿ. ನಾವೆಲ್ಲರೂ ಸೌಹಾರ್ದತೆಯನ್ನು ಬದುಕನ್ನು ಕಟ್ಟಿಕೊಳ್ಳಲು ಸಾವಿತ್ರಿಬಾಯಿ ಫುಲೆಯವರ ಜೀವನದ ಚರಿತ್ರೆಯನ್ನು ತಿಳಿದುಕೊಂಡಾಗ ಮಾತ್ರ ನಾವು ಸರಳವಾಗಿ ಬದುಕಲು ಸಾಧ್ಯ ಮತ್ತು ಶ್ರೀಮತಿ ಫುಲೆಯವರು ಶೋಷಿತ ಸಮುದಾಯಗಳಿಗೆ ಶಿಕ್ಷಣ ನೀಡಲು ಎದುರಿಸಿದ ಸವಾಲುಗಳ ಕುರಿತಾಗಿ ವಿವರಿಸಿದರು. ನಂತರ ಅಧ್ಯಾಪಕರಾದ ಪ್ರೊ. ಕರಿಗೂಳಿಯವರು ಮಾತನಾಡಿ, ಸಾವಿತ್ರಿಬಾಯಿ ಫುಲೆಯವರು ತಾವು ಅಸ್ಪೃಶ್ಯರಲ್ಲದಿದ್ದರೂ ಕೂಡ ತಮ್ಮ ಮನೆಯಲ್ಲಿ ಭಾವಿ ತೋಡಿಸಿ ಅಸ್ಪೃಶ್ಯರಿಗೆ ನೀರು ಕೊಟ್ಟು ಜೀವ ಉಳಿಸಿ ಸಾಮಾಜಿಕ ಸಮಾನತೆಯನ್ನು ಪ್ರತಿಪಾದಿಸಿದ ಮಹಾನ್ ಮಾನವತಾವಾದಿ ದುರ್ಬಲ ವರ್ಗಗಳ ಶೈಕ್ಷಣಿಕ ಏಳಿಗೆಗಾಗಿ ಸ್ತ್ರೀ ಶಿಕ್ಷಣ ಹಾಗೂ ಮಹಿಳಾ ಸಬಲೀಕರಣಕ್ಕಾಗಿ ಜೀವನದುದ್ದಕ್ಕೂ ಶ್ರಮಿಸಿದವರು,

ಶಿಕ್ಷಣದ ಮೂಲಕ ಸಾಮಾಜಿಕ ಮನ್ನಣೆಯನ್ನು ಉನ್ನತ್ತೀಕರೀಸಬಹುದು ಎಂದು ಸಾಬೀತು ಮಾಡಿದ ಮಹಾ ಮಹಿಳೆ, ಪತಿಯನ್ನೇ ಗುರುಸಮಾನ ಭಾವಿಸಿ ವಿದ್ಯೆ ಕಲಿತು ಲೋಕಕ್ಕೆ ಹಂಚಿದ ಆದರ್ಶ ಅರ್ಧಾಂಗಿ, ಆದುದರಿಂದಲೇ ಫುಲೆ ದಂಪತಿಗಳು ಬಾಬಾಸಾಹೇಬ ಅಂಬೇಡ್ಕರರ ಮೇಲೆ ಅಗಾಧ ಪ್ರಭಾವ ಬೀರಿದ್ದರು,

ಇಂದಿನ ದಿನಗಳಲ್ಲಿ ನಾವು ಎದುರಿಸುತ್ತಿರುವ ಸಾಮಾಜಿಕ ಸಮಸ್ಯೆಗಳಿಗೆ ನಮ್ಮ ನೆಚ್ಚಿನ ನಾಯಕರ ಚಿಂತನೆಗಳು ಪರಿಹಾರವಾದಗ ಮಾತ್ರ ಅವರನ್ನು ಅನುಸರಿಸುತ್ತಿದ್ದೇವೆ ಎಂದು ಅರ್ಥ, ಮೇರುವ್ಯಕ್ತಿಗಳಾದ ಸಾವಿತ್ರಿಭಾಯಿ ಫುಲೆಯವರ ವಿಚಾರಗಳನ್ನು ಪಾಲಿಸಿ ವಿದ್ಯಾರ್ಥಿಗಳು ನವಭಾರತವನ್ನು – ಸಮಭಾರತವಾಗಿಸಬೇಕು ಎಂದರು.

ಸಾಮಾಜಿಕ ಮೌಢ್ಯತೆಯನ್ನು ತೊಲಗಿಸುವಲ್ಲಿ ,ಹಾಗೂ ಆಧುನಿಕ ಮಹಿಳೆಯರ ದೃಢ ಮನೋಸ್ಥೈರ್ಯಕ್ಕೆ ಸಾವಿತ್ರಿಬಾಯಿ ಫುಲೆಯವರ ಚಿಂತನೆಗಳು ಕಾರಣವೆಂದು ಪ್ರಾಂಶುಪಾಲರಾದ ಕೆ.ಎಸ್.ಶೋಭಾರವರು ಕರೆ–ಕೊಟ್ಟರು.

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಸಾಂಸ್ಕೃತಿಕ ಸಂಚಾಲಕರಾದ ತಾತಪ್ಪ.ಕೆ.ಮಾತನಾಡಿದರು.

ಪ್ರಾಧ್ಯಾಪಕರಾದ ರವಿಕುಮಾರ್, ಡಾ.ಶಶಿಕುಮಾರ, ವಿರೂಪಾಕ್ಷ, ಶಂಕ್ರಪ್ಪ,

ಈಶಪ್ಪಮೇಟಿ, ಪರಶುರಾಮ್, ಸಂಧ್ಯಾ, ದೇವರಾಜ್, ವೆಂಕಟರಾಜು, ಪೀರಾವಲಿ,

ಬೋಧಕೇತರರಾದ ಜಬೀನ ಾಬೇಗಂ, ವಿನಾಯಕ, ಶಾಂತಮ್ಮ, ದುರ್ಗಾಕೃಷ್ಣ,ರವರು ಉಪಸ್ಥಿತರಿದ್ದರು.

## ಅಮೃತ್ ಮಿತ್ರ ಕಾರ್ಯಕ್ರಮ

ಯಾದಗಿರಿ : ಜನವರಿ 03–: ಕೇಂದ್ರ ಪುರಸ್ಕೃತ ಅಮೃತ್–2.0 ಅಭಿಯಾನದ "ಅಮೃತ್ ಮಿತ್ರ" ಕಾರ್ಯಕ್ರಮದ ತಾಂತ್ರಿ ಚಟುವಟಿಕೆಯಡಿ (Technical) ಕಾರ್ಯಕ್ರಮದಡಿ ಯಾದಗಿರಿ ನಗರಸಭೆ ವ್ಯಾಪ್ತಿಯಲ್ಲಿನ Maintenance of WTP Water Quality Sampling ನಿರ್ವಹಣೆ ಮಾಡಲು ಡೇ–ನಲ್ಮ್ ಅಭಿಯಾನದಡಿ ಅರ್ಹ ಮಹಿಳಾ ಸ್ವ–ಸಹಾಯ ಸಂಘಗಳಿಂದ ಆಸಕ್ತಿ ವ್ಯಕ್ತಪಡಿಸುವಿಕೆ ಆಹ್ವಾನಿಸಲಾಗಿದೆ ಎಂದು ಯಾದಗಿರಿ ನಗರಸಭೆ ಪೌರಾಯುಕ್ತರು ಉಮೇಶ ಚವ್ಹಾಣ ಅವರು ತಿಳಿಸಿದ್ದಾರೆ. ಅಮೃತ್ ಯೋಜನೆಯು ಕೇಂದ್ರ ಪುಸ್ಕೃತ ಯೋಜನೆಯಾಗಿದ್ದು, ರಾಜ್ಯದಲ್ಲಿ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯ ಮುಖ್ಯ ಉದ್ದೇಶ ನಗರ ಪ್ರದೇಶಗಳಿಗೆ ಸುಸ್ಥಿರ ಮತ್ತು ಶುದ್ಧ ನೀರು ಪೂರೈಕೆ ಮತ್ತು ನಿರ್ವಹಣೆ ಮಾಡುವುದು ಹಾಗೂ ಅಮೃತ್ ನಗರಗಳಲ್ಲಿ ಶೇ.100 ರಷ್ಟು ಒಳಚರಂಡಿ ನಿರ್ವಹಣೆಯನ್ನು ಖಚಿತಪಡಿಸುವುದಾಗಿರುತ್ತದೆ. ಕೇಂದ್ರ ಸರ್ಕಾರವು ಅಮೃತ್ ಯೋಜನೆಯಡಿ "ಅಮೃತ್ ಮಿತ್ರ" ಕಾರ್ಯಕ್ರಮವನ್ನು ಅನುಷ್ಟಾನಗೊಳಿಸುತ್ತಿದ್ದು ಸದರಿ ಕಾರ್ಯಕ್ರಮದ ಮುಖ್ಯ ಉದ್ದೇಶ ಅಮೃತ್ 2.೦ ಅಭಿಯಾನದಡಿಯ ವಿವಿಧ ತಾಂತ್ರಿಕ ಮತ್ತು ತಾಂತ್ರಿ–ಕೇತರ ಚಟುವಟಿಕೆಗಳನ್ನು ಕೇಂದ್ರ ಪುರಸ್ಕೃತ ಯೋಜನೆಯಾದ ಡೇ–ನಲ್ಮ್ ಅಭಿಯಾನದಡಿ ಯಾದಗಿರಿ ನಗರಸಭಾ ವ್ಯಾಪ್ತಿಯಲ್ಲಿ ರಚಿಸಲಾಗಿರುವ ಮಹಿಳಾ ಸ್ವ–ಸಹಾಯ ಸಂಘಗಳ ಮೂಲಕ ಸದರಿ ಚಟುವಟಿಕೆಗಳನ್ನು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಅನುಷ್ಠಾನಗೊಳಿಸಲು ಆಸಕ್ತಿ ಇರುವ ಮಹಿಳಾ ಸ್ವ–ಸಹಾಯ ಸಂಘಗಳಿಂದ ಭಾಗವಹಿಸಬಹುದಾಗಿದೆ. ಆಸಕ್ತ ಮಹಿಳಾ ಸ್ವ–ಸಹಾಯ ಸಂಘಗಳು ಯಾದಗಿರಿ ನಗರಸಭೆಯ ಡೇ–ನಲ್ಮ್ ಶಾಖೆಯಿಂದ ಅರ್ಜಿ ನಮೂನೆಯನ್ನು ಪಡೆದುಕೊಂಡು 2025ರ ಜನವರಿ 18 ರಂದು ಸಂಜೆ 5.30 ಗಂಟೆಯ ಒಳಗೆ ತಮ್ಮ ಪ್ರಸ್ತಾವನೆಯನ್ನು ಮುಚ್ಚಿದ ಲಕೋಟೆಯಲ್ಲಿ ಪೌರಾಯುಕ್ತರು ನಗರಸಭೆ ಯಾದಗಿರಿ ಇಲ್ಲಿಗೆ ಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜ.13 ರಂದು ಜಿಲ್ಲಾ ಮಟ್ಟದ ದಿಶಾ ಸಮಿತಿ ಸಭೆ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ:ಜ.03:ಜಿಲ್ಲಾಪಂಚಾಯತ್ ವತಿಯಿಂದ ಜಿಲ್ಲಾ ಅಭಿವೃದ್ಧಿ ಸಮನ್ವಯ ಉಸ್ತುವಾರಿ ಸಮಿತಿ "ದಿಶಾ" ಸಮಿತಿಯ ದ್ವಿತೀಯ ತ್ರೈಮಾಸಿಕ ಸಭೆಯನ್ನು ಜ.13 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್‌ನ ನಜೀರ್‌ಸಾಬ್ ಸಭಾಂಗಣದಲ್ಲಿ ನಡೆಸಲು ನಿಗದಿಪಡಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಹಾಗೂ ದಿಶಾ ಸಮಿತಿಯ ಸದಸ್ಯಕಾರ್ಯದರ್ಶಿಯೂ ಆದ ರಾಹುಲ್ ಶರಣಪ್ಪ ಸಂಕನೂರು ಅವರು ತಿಳಿಸಿದ್ದಾರೆ.ಬಳ್ಳಾರಿ ಲೋಕಸಭಾ ಕ್ಷೇತ್ರದ ಸಂಸದರು ಹಾಗೂ ಜಿಲ್ಲಾ ಮಟ್ಟದ ದಿಶಾ ಸಮಿತಿಯ ಅಧ್ಯಕ್ಷರೂ ಆದ ಈ.ತುಕಾರಾಂ ಅವರು ಸಭೆಯ ಅಧ್ಯಕ್ಷತೆವಹಿಸುವರು. ಸಭೆಗೆ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳು ಅಗತ್ಯಪೂರ್ಣ ಮಾಹಿತಿಯೊಂದಿಗೆ ತಪ್ಪದೇ ಹಾಜರಾಗಬೇಕು ಎಂದು ಅವರು ತಿಳಿಸಿದ್ದಾರೆ.

# ಜ.08 ಮತ್ತು 09 ರಂದು ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರ ಪ್ರವಾಸ ಕಾರ್ಯಕ್ರಮ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಜ.03:ಕರ್ನಾಟಕರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರಾದ ಟಿ.ಶ್ಯಾಮ್ ಭಟ್ ಹಾಗೂ ನ್ಯಾಯಾಂಗ ಸದಸ್ಯರಾದ ಎಸ್.ಕೆ.ವಂಟಿಗೋಡಿ ಅವರು ಜ.08 ಮತ್ತು 09 ರಂದು ಬಳ್ಳಾರಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವರು.ಜ.08 ರಂದು ಮಧ್ಯಾಹ್ನ ಬೆಂಗಳೂರಿನಿಂದ ಹೊರಟು, ಸಂಜೆ 07.30 ಗಂಟೆಗೆ ಬಳ್ಳಾರಿಗೆ ಆಗಮಿಸುವರು. ಬಳಿಕ ಜಿಂದಾಲ್‌ನ ಸರ್ಕ್ಯೂಟ್ ಹೌಸ್‌ನಲ್ಲಿ ವಾಸ್ತವ್ಯ ಮಾಡುವರು.ಜ.09 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ಬಳ್ಳಾರಿಯ ವಿವಿಧ ಸ್ಥಳಗಳಿಗೆ ಭೇಟಿ ನೀಡುವರು. ಮಧ್ಯಾಹ್ನ 03.30 ಗಂಟೆಯಿಂದ ಸಂಜೆ 04.30 ಗಂಟೆಯವರೆಗೆ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಂವಾದ ಸಭೆ ನಡೆಸುವರು. ಬಳಿಕ ಸಂಜೆ 04.30 ರಿಂದ 05.30 ರವರೆಗೆ ಪತ್ರಿಕಾಗೋಷ್ಠಿ ನಡೆಸುವರು.ನಂತರ ಸಂಜೆ 06 ಗಂಟೆಗೆ ಬೆಂಗಳೂರಿಗೆ ಪ್ರಯಾಣಿಸುವರು ಎಂದು ಆಪ್ತ ಕಾರ್ಯದರ್ಶಿ ಅರುಣ್ ಪೂಜಾರ್ ಅವರು ತಿಳಿಸಿದ್ದಾರೆ.

# ಹಂಪಿ ಉತ್ಸವ ಫೆ.28 ರಿಂದ ಆರಂಭ



**ಮಲ್ಲಮ್ಮ ನುಡಿ ವಾರ್ತೆ**

ಹೊಸಪೇಟೆ:ಜ3: ವಿಶ್ವವಿಖ್ಯಾತ ಹಂಪಿ ಉತ್ಸವ ಆಚರಣೆಗೆ ದಿನಾಂಕ ನಿಗದಿಯಾಗಿದ್ದು, ಫೆ.28 ರಿಂದ ಮೂರು ದಿನಗಳ ಅದ್ದೂರಿಯಾಗಿ ಆಚರಿಸಲು ಸರ್ಕಾರ ತೀರ್ಮಾನಿಸಿದೆ. ಫೆ.28 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಉತ್ಸವಕ್ಕೆ ಚಾಲನೆ ನೀಡಲಿದ್ದಾರೆ.

ಹಂಪಿಯಲ್ಲಿ ಕಳೆದ ವರ್ಷ ಫೆ.2ರಿಂದ ಮೂರು ದಿನಗಳ ಕಾಲ ಉತ್ಸವ ಅದ್ದೂರಿಯಾಗಿ ಆಚರಿಸಲಾಗಿತ್ತು. ಈ ವರ್ಷ ಫೆ.28 ರಿಂದ ಮೂರು ದಿನಗಳ ಕಾಲ ಉತ್ಸವ ನಡೆಯಲಿದೆ. ಉತ್ಸವ ಆಚರಣೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಸಮ್ಮತಿ ನೀಡಿದ್ದು, ಅದ್ದೂರಿ ಆಚರಣೆಗೆ ಸೂಚನೆ ನೀಡಿದ್ದಾರೆ. ಉತ್ಸವಕ್ಕೆ ಸಕಲ ಸಿದ್ದತೆ ಮಾಡಿಕೊಳ್ಳಲು ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹಮ್ಮದ್ ಖಾನ್, ವಿಜಯನಗರ ಜಿಲ್ಲಾಧಿಕಾರಿಗೆ ಸೂಚನೆ ನೀಡಿದ್ದಾರೆ.ಸಮಿತಿ ರಚನೆ:ಉತ್ಸವಕ್ಕೆ ದಿನಾಂಕ ನಿಗದಿಯಾಗುತ್ತಿಂದತೇ ವಿಜಯನಗರ ಜಿಲ್ಲಾಡಳಿತ ಕಾರ್ಯಪ್ರವತ್ತವಾಗಿದ್ದು, ಕಳೆದ ವರ್ಷದಂತೆ ಈ ವರ್ಷವೂ ಹಂಪಿ ಉತ್ಸವವನ್ನು ಅದ್ದೂರಿಯಾಗಿ ಆಚರಿಸಲು ತೀರ್ಮಾನಿಸಿದ್ದು, ವಿವಿಧ ಇಲಾಖೆ ಅಧಿಕಾರಿಗಳ ಸಹಯೋಗದಲ್ಲಿ ಆಚರಣೆ ಸಮಿತಿ ರಚನೆ ಮಾಡಲು ಮುಂದಾಗಿದೆ. ಇದಕ್ಕಾಗಿ ಇನ್ನೆರಡು ದಿನಗಳಲ್ಲಿ ಅಧಿಕಾರಿಗಳ ಸಭೆ ನಡೆಸಲಿದೆ.ಸ್ಥಳೀಯ ಕಲಾವಿದರಿಗೆ ಆದ್ಯತೆ: ಕಳೆದ ವರ್ಷದಂತೆ ಈ ಬಾರಿ ಉತ್ಸವದಲ್ಲಿ ಸ್ಥಳೀಯ ಕಲಾವಿದರಿಗೆ ಹೆಚ್ಚಿನ ಆದ್ಯತೆ ಸಿಗಲಿದೆ. ಆದರೆ, ಕಳೆದ ಮೂರು ವರ್ಷ ಉತ್ಸವದಲ್ಲಿ ಪ್ರದರ್ಶನ ನೀಡಿದ ಕಲಾವಿದರು ಹೊರತು ಪಡಿಸಿ, ಹೊಸಬರಿಗೆ ಆದ್ಯತೆ ನೀಡಲು ಜಿಲ್ಲಾಡಳಿತ ತೀರ್ಮಾನಿಸಿದೆ.ನಾಲ್ಕು ವೇದಿಕೆ: ಹಂಪಿ ನೆಲದಲ್ಲಿ ಕಳೆದ ವರ್ಷದಂತೆ ಈ ವರ್ಷವೂ ಗಾಯತ್ರಿ ಪೀಠ, ಎದುರು ಬಸವಣ್ಣ ಮಂಟಪ, ವಿರೂಪಾಕ್ಷೇಶ್ವರ ದೇವಾಲಯ, ಕಡಲೆಕಾಳು ಗಣಪತಿ ದೇವಾಲಯ ಬಳಿ ನಾಲ್ಕು ವೇದಿಕೆಗಳನ್ನು ನಿರ್ಮಿಸಲಾಗುವುದು. ಈ ಎಲ್ಲಾ ವೇದಿಕೆಗಳಲ್ಲಿ ಸ್ಥಳೀಯ ಕಲಾವಿದರಿಗೆ ಅವಕಾಶ ಸಿಗಲಿದೆ. ಪ್ರತಿ ವರ್ಷದ ಉತ್ಸವದಲ್ಲಿ ಇರುವಂತೆ ಸಹಾಸ ಕ್ರೀಡೆ ಹಾಗೂ ಗ್ರಾಮೀಣ ಕ್ರೀಡೆಗಳು ನಡೆಯಲಿವೆ. ಕುಸ್ತಿ ಪಂದ್ಯಾವಳಿ, ಗುಂಡು ಎತ್ತುವುದು, ಬಂಡಿ ಗಾಲಿ ತೋಡಿಸುವುದು. ಕಮಲಾಪುರ ಕೆರೆಯಲ್ಲಿ ಬೋಟಿಂಗ್ ಸೇರಿದಂತೆ ಇತರೆ ಕ್ರೀಡೆಗಳು ನಡೆಯಲಿವೆ.ಹಂಪಿ ಬೈಸ್ಕೈ:ಪ್ರವಾಸಿಗರು ಹಂಪಿಯನ್ನು ಅಗಾಸದಿಂದ ಕಣ್ತುಂಬಿಕೊಳ್ಳಲು ಈ ಬಾರಿಯೂ ಹಂಪಿ ಉತ್ಸವದಲ್ಲಿ ಹೆಲಿಕ್ಯಾಪ್ಟರ್ ಹಾರಾಟ ನಡೆಯಲಿದೆ. ಕಮಲಾಪುರ ಮಯೂರ ಭುವನೇಶ್ವರಿ ಹೋಟೆಲ್ ಆವರಣದಲ್ಲಿ ಹೆಲಿಪ್ಯಾಡ್ ನಿರ್ಮಾಣವಾಗಲಿದೆ.ಧ್ವನಿ ಮತ್ತು ಬೆಳಕು:ಹಂಪಿ ಉತ್ಸವದ ಮುಖ್ಯ ಆಕರ್ಷಣೆ ಎಂದು ಕರೆಯಲಾಗುವ ಧ್ವನಿ ಮತ್ತು ಬೆಳಕು ವಿಜಯನಗರ ವೈಭವ ಕಾರ್ಯಕ್ರಮವೂ ಎಂದಿನಂತೆ ಗಜಶಾಲೆಯ ಆವರಣದಲ್ಲಿ ನಡೆಯಲಿದೆ. ಇದರಲ್ಲಿಯೂ ಸ್ಥಳೀಯ ಕಲಾವಿದರಿಗೆ ಅವಕಾಶ ಸಿಗಲಿದೆ. ಮುಖ್ಯವೇದಿಕೆಗಳಲ್ಲಿ ಹೆಸರಾಂತ ಕಲಾವಿದರು, ಚಿತ್ರನಟರು ಭಾಗವಹಿಸುವುದರಿಂದ ಉಳಿದ ವೇದಿಕೆಗಳ ಬಳಿ ಜನರೇ ಇರುವುದಿಲ್ಲ. ಹೀಗಾಗಿ ನಾಲ್ಕು ವೇದಿಕೆಗಳಲ್ಲಿ ಖ್ಯಾತ ಕಲಾವಿದರಿಂದ ಪ್ರದರ್ಶನ ಏರ್ಪಡಿಸಿದರೆ, ಆಯಾ ವೇದಿಕೆಗಳಲ್ಲಿಯೂ ಸಹ ಜನಸ್ತೋಮ ಸೇರಲಿದೆ. ಈ ನಿಟ್ಟಿನಲ್ಲಿ ಜಿಲ್ಲಾಡಳಿತ ಚಿಂತನೆ ನಡೆಸಬೇಕಿದೆ.ಸಮಾನ ಅವಕಾಶ ಸಿಗಲಿ:ಉತ್ಸವದಲ್ಲಿ ಭಾಗಿಯಾಗುವ ಪ್ರತಿಯೊಬ್ಬ ಕಲಾವಿದರನ್ನು ಸಮನಾಗಿ ಕಾಣಬೇಕಿದೆ.ಹೆಸರಾಂತ ಕಲಾವಿದರಿಗೆ ಸಿಗುವಂತ ವಸತಿ ಸೌಲಭ್ಯ ಹಾಗೂ ಊಟದ ವ್ಯವ್ಯಸೆಯನ್ನು ಸಣ್ಣ-ದೊಡ್ಡ ಎಂದು ತಾರತ್ಯಮ ಮಾಡದೇ ಎಲ್ಲರಿಗೂ ಸಮಾನ ಸೌಲಭ್ಯಗಳನ್ನು ಈ ಬಾರಿ ಜಿಲ್ಲಾಡಳಿತ ಕಲ್ಪಿಸಬೇಕಿದೆ.ಕಳೆದ ಉತ್ಸವದಲ್ಲಿ ಜನಪದ ಅಕಾಡೆಮಿ ಮಾಜಿ ಅಧ್ಯಕ್ಷೆ ಮಂಜಮ್ಮ ಜೋಗತಿಯವರನ್ನು ಎದುರು ಬಸವಣ್ಣ ವೇದಿಕೆ ರಾಯಬಾರಿಯನ್ನಾಗಿ ಮಾಡಿ ಗೌರವಿಸಲಾಗಿತ್ತು. ಮೂರು ದಿನಗಳ ಕಾಲ ಸ್ಥಳದಲ್ಲಿದ್ದು, ಕಲಾವಿದರಿಗೆ ಮಂಜಮ್ಮ ಜೋಗತಿ ಹುರಿದುಂಬಿಸಿದ್ದರು. ಈ ಬಾರಿ ಜಿಲ್ಲೆಯ ಮತ್ತೊಬ್ಬ ಕಲಾವಿದರನ್ನು ಗುರುತಿಸಿ, ರಾಯಬಾರಿ ಮಾಡಲಿ ಎಂಬ ಒತ್ತಾಯ ಕೇಳಿ ಬಂದಿದೆ.ನ.3,4,5 ಉತ್ಸವ ಆಚರಿಸಿ:ಮೈಸೂರು ದಸರಾ ಉತ್ಸವಕ್ಕೆ ನೀಡುವ ಮನ್ನಣೆಯನ್ನು ಹಂಪಿ ಉತ್ಸವಕ್ಕೂ ಸರ್ಕಾರ ನೀಡಬೇಕು. ಪ್ರತಿವರ್ಷ ನ.3,4,5ರಂದು ಹಂಪಿ ಉತ್ಸವ ಆಚರಣೆ ಮಾಡಬೇಕು. ಮಾಜಿ ಉಪಮುಖ್ಯಮಂತ್ರಿ ಎಂ.ಪಿ.ಪ್ರಕಾಶ ಅವರನ್ನು ನೆನೆಯಬೇಕು ಎಂಬು ಜಿಲ್ಲೆಯ ಜನರ ಒತ್ತಾಸೆಯಾಗಿದೆ.ಫೆ.28ರಿಂದ ಮೂರು ದಿನಗಳ ಕಾಲ ಹಂಪಿ ಉತ್ಸವ ಆಚರಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಮ್ಮತಿ ನೀಡಿದ್ದಾರೆ. ಈ ಬಾರಿಯೂ ಅದ್ದೂರಿಯಾಗಿ ಆಚರಿಸಲಾಗುವುದು ಇದಕ್ಕೆ ಅಗತ್ಯ ಸಿದ್ದತೆ ಕೈಗೊಳ್ಳಲು ಜಿಲ್ಲಾಧಿಕಾರಿಗೆ ನಿರ್ದೇಶನ ನೀಡಲಾಗಿದೆ.ಜಮೀರ್ ಅಹಮ್ಮದ್ ಖಾನ್ಹಂಪಿ ಉತ್ಸವ ಈ ಭಾಗದ ಜನರ ಹೆಮ್ಮೆ. ಅದ್ದೂರಿ ಉತ್ಸವ ಆಚರಣೆ ಜಿಲ್ಲಾಡಳಿತ ಅಗತ್ಯ ಸಿದ್ದತೆ ಕೈಗೊಳ್ಳಲಿದೆ.ಸ್ಥಳೀಯ ಕಲಾವಿದರಿಗೆ ಉತ್ಸವದಲ್ಲಿ ಅವಕಾಶ ಸಿಗಲಿದೆ. ಈ ಉತ್ಸವದ ಯಶ್ವಸಿಗೆ ಎಲ್ಲರೂ ಕೈಜೋಡಿಸಲಿ.ಎಚ್.ಗವಿಯಪ್ಪ, ಶಾಸಕರು, ವಿಜಯನಗರ ಕೇತ್ರ.ಈ ವರ್ಷವೂ ಹಂಪಿ ಉತ್ಸವವನ್ನು ಅದ್ದೂರಿಯಾಗಿ ಆಚರಿಸಲು ತೀರ್ಮಾನಿಸಿದೆ.

ಸ್ಥಳೀಯ ಕಲಾವಿದರಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು. ಇದಕ್ಕಾಗಿ ವಿವಿಧ ಇಲಾಖೆ ಅಧಿಕಾರಿಗಳ ಸಹಯೋಗದಲ್ಲಿ ಆಚರಣೆ ಸಮಿತಿ ರಚಿಸಲಾಗುವುದು.

ಎಂ.ಎಸ್.ದಿವಾಕರ,ಜಿಲ್ಲಾಧಿಕಾರಿ, ವಿಜಯನಗರ ಜಿಲ್ಲೆ.

# ಮನೋಹರ್ ಬಾಬು.ಜಿ ಅವರಿಗೆ ಪಿಎಚ್‌ಡಿ ಪದವಿ



**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ:ಜ.03:ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ನಿರ್ವಹಣಾ ಶಾಸ್ತ್ರ ಅಧ್ಯಯನ ವಿಭಾಗದ ವಿದ್ಯಾರ್ಥಿಯಾಗಿದ್ದ ಮನೋಹರ್ ಬಾಬು.ಜಿ ಅವರಿಗೆ ಪಿಎಚ್‌ಡಿ ಪದವಿ ಲಭಿಸಿದೆ.ವಿವಿಯ ನಿರ್ವಹಣಾಶಾಸ್ತ್ರ ಅಧ್ಯಯನ ವಿಭಾಗದ ಪ್ರಾಧ್ಯಾಪಕರಾದ ಡಾ.ರವಿ ನಾರಾಯಣ.ಕೆ.ಎಸ್ ಅವರ ಮಾರ್ಗದರ್ಶನದಲ್ಲಿ ಸಿದ್ಧಪಡಿಸಿದ್ದ "ಎ ಸ್ಟಡಿ ಆನ್ ಪ್ರಾಬ್ಲಮ್ಸ್ ಪ್ರಾಸ್ಪೆಕ್ಟಸ್ ಆಫ್ ಎಂಪ್ಲಾಯಿಸ್ ಇನ್ ಗಾರ್ಮೆಂಟ್ ಮ್ಯಾನುಫ್ಯಾಕ್ಚರಿಂಗ್ ಯುನಿಟ್ಸ್ ವಿತ್ ಸ್ಪೆಷಲ್ ರೆಫರೆನ್ಸ್ ಟು ಕಲ್ಯಾಣ ಕರ್ನಾಟಕ ರೀಜನ್" ಎಂಬ ಪ್ರೌಢ ಪ್ರಬಂಧಕ್ಕೆ ವಿಶ್ವವಿದ್ಯಾಲಯವು ಪಿಎಚ್‌ಡಿ ಪದವಿ ಪ್ರದಾನ ಮಾಡಿದೆ ಎಂದು ವಿವಿ ಪ್ರಕಟಣೆ ತಿಳಿಸಿದೆ.

# ಸುರಕ್ಷಿತ ಹೆರಿಗೆಗೆ ಕಬ್ಬಿಣಾಂಶ ಮಾತ್ರೆಗಳ ಸೇವನೆ ಅಗತ್ಯ: ಡಿಹೆಚ್‌ಒ ಡಾ.ಯಲ್ಲಾ ರಮೇಶಬಾಬು



**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ:ಜ.03:ಕಬ್ಬಿಣಾಂಶ ಮಾತ್ರೆಗಳ ಸೇವನೆಯಿಂದ ಗರ್ಭಿಣಿಯರಲ್ಲಿ ರಕ್ತಹೀನತೆ ಕಡಿಮೆ ಮಾಡುವುದರ ಜೊತೆಗೆ ಹೆರಿಗೆ ಸಮಯದಲ್ಲಿ ಹೆಚ್ಚುವರಿ ರಕ್ತದ ಅವಶ್ಯಕತೆಯನ್ನು ತಪ್ಪಿಸುತ್ತದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶಬಾಬು ಅವರು ಹೇಳಿದರು.ಕುರುಗೋಡು ತಾಲ್ಲೂಕಿನ ಯಲ್ಲಾಪುರ ಕ್ರಾಸ್ ಬಳಿ ವಾಸವಿರುವ ಹಂಡಿಜೋಗಿ ಸಮುದಾಯದ ವಲಸೆ ಪ್ರದೇಶಕ್ಕೆ ಭೇಟಿ ನೀಡಿ ಗರ್ಭಿಣಿ ಮಹಿಳೆಯರೊಂದಿಗೆ ಆರೋಗ್ಯ ವಿಚಾರಿಸಿ ಅವರು ಮಾತನಾಡಿದರು.ಕಬ್ಬಿಣಾಂಶ ಮಾತ್ರೆ ನುಂಗಿದರೆ ಭ್ರೂಣ ದಪ್ಪವಾಗುತ್ತದೆ, ಕಪ್ಪು ಬಣ್ಣದ ಮಗು ಹುಟ್ಟುತ್ತದೆ ಎಂಬ ತಪ್ಪು ನಂಬಿಕೆ,ಗಾಳಿಸುದ್ದಿಗಳನ್ನು ನಂಬದೇ, ವೈದ್ಯರ ಸಲಹೆಯಂತೆ ಉಚಿತವಾಗಿ ನೀಡುವ ಕಬ್ಬಿಣಾಂಶ ಮಾತ್ರೆಗಳನ್ನು ಪ್ರತಿದಿನ ಒಂದರಂತೆ ಕನಿಷ್ಟ 180 ಮಾತ್ರೆ,ರಕ್ತಹೀನತೆಯ ಪ್ರಮಾಣ ತೀವ್ರವಾಗಿದ್ದಲ್ಲಿ ದಿನಕ್ಕೆ 2 ರಂತೆ 360 ಮಾತ್ರೆಗಳನ್ನು 6 ತಿಂಗಳ ಅವಧಿಗೆ ಸೇವಿಸಬೇಕು ಎಂದು ಅವರು ತಿಳಿಸಿದರು.ಗರ್ಭಿಣಿ ಎಂದು ತಿಳಿದ ನಂತರ ರಕ್ತದಲ್ಲಿ ಕಬ್ಬಿಣಾಂಶ ಹೆಚ್ಚಿಸಿ ಗರ್ಭಿಣಿಯು ಲವಲವಿಕೆಯಿಂದ ಇರಲು, ಗರ್ಭದಲ್ಲಿ ಭ್ರೂಣದ ಸರಿಯಾದ ಬೆಳವಣಿಗೆಗೆ ಮತ್ತು ಸುರಕ್ಷಿತ ಹೆರಿಗೆಗೆ ಸಹಕಾರಿಯಾಗುತ್ತದೆ. ಕುಟುಂಬದ ಸದಸ್ಯರು ಆರೋಗ್ಯ ಇಲಾಖೆಯಿಂದ ನೀಡುವ ಕಬ್ಬಿಣಾಂಶ ಮಾತ್ರೆಗಳನ್ನು ತಪ್ಪದೇ ಗರ್ಭಿಣಿಗೆ ನುಂಗಿಸಬೇಕು ಎಂದು ಅವರು ಮನವರಿಕೆ ಮಾಡಿದರು.ಮುಖ್ಯವಾಗಿ ಗಂಡಾಂತರ ಗರ್ಭಿಣಿಯರು ಎಂದು ಗುರ್ತಿಸಿದ ನಂತರ ಚೊಚ್ಚಲ ಗರ್ಭಿಣಿ, ಎತ್ತರ ಕಡಿಮೆ, ಅಧಿಕ ರಕ್ತದೊತ್ತಡ, ರಕ್ತದಲ್ಲಿ ಕಬ್ಬಿಣಾಂಶ ಕೊರತೆ, ಅವಳಿ-ಜವಳಿ ಗರ್ಭಿಣಿ, ವಿವಾಹವಾಗಿ ಐದಕ್ಕಿಂತ ಹೆಚ್ಚು ವರ್ಷಗಳ ನಂತರ ಗರ್ಭಿಣಿಯಾಗಿರುವುದು,ಮೊದಲ ಹೆರಿಗೆ ಸಿಸೇರಿಯನ್ ಮುಂತಾದ ಕಾರಣಗಳಿದ್ದರೆ ನಿರ್ಲಕ್ಷಿಸಬಾರದು. ತೀವ್ರ ರಕ್ತಹೀನತೆಯಂತಹ ಸನ್ನಿವೇಶದಲ್ಲಿ ಸ್ಥಳೀಯವಾಗಿ ನೀಡುವ ಚಿಕಿತ್ಸೆ (ಐಎಫ್‌ಎ ಮಾತ್ರೆ, ಐರನ್ ಸುಕ್ರೋಸ್, ರಕ್ತ ಹಾಕಿಸುವಿಕೆ) ಪಡೆಯಬೇಖು. ಸುಧಾರಣೆಯಾಗದಿದ್ದಲ್ಲಿ ತಜ್ಞರ ಬಳಿ ತಪ್ಪದೇ ಭೇಟಿ ನೀಡಬೇಕು. ಅಗತ್ಯವಿದ್ದಲ್ಲಿ ಸ್ಕ್ಯಾನ್ ಮಾಡಿಸಬೇಕು. ಮೊದಲ ಹೆರಿಗೆ ಶಸ್ತ್ರಚಿಕಿತ್ಸೆ ಮೂಲಕವಾದಲ್ಲಿ ಪುನಃ ಗರ್ಭಿಣಿಯಾಗುವ ಅವಧಿಯನ್ನು ಕನಿಷ್ಠ 3 ವರ್ಷಕ್ಕೆ ಕಡ್ಡಾಯವಾಗಿ ಮುಂದೂಡಬೇಕು. ಇದಕ್ಕಾಗಿ ಅಂತರ ಚುಚ್ಚುಮದ್ದು, ಕಾಪರ್-ಟಿ,ನಿರೋಧ್ ಬಳಸಲು ಸೂಚಿಸಿದರು.ಈ ಸಂದರ್ಭದಲ್ಲಿ ಕುರುಗೋಡು ತಾಲ್ಲೂಕು ಆರೋಗ್ಯ ಮೇಲ್ವಿಚಾರಣಾಧಿಕಾರಿ ಡಾ.ಮಂಜುನಾಥ ಜವಳಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಆರೋಗ್ಯ ಮೇಲ್ವಿಚಾರಣಾಧಿಕಾರಿ ವಿರುಪಾಕ್ಷಪ್ಪ, ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿ ರೇಣುಕಾ, ಆಶಾ ಕಾರ್ಯಕರ್ತೆ ಕಾವೇರಿ, ಅಂಗನವಾಡಿ ಕಾರ್ಯಕರ್ತೆ ಆಶಾಕುಮಾರಿ ಮತ್ತು ಸ್ಥಳೀಯರು ಉಪಸ್ಥಿತರಿದ್ದರು.

# ಬ್ಯಾಂಕಿಂಗ್ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ; ನೋಂದಣಿಗೆ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ:ಜ.03:ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಎಸ್‌ಬಿಐ, ಇತರ ಬ್ಯಾಂಕ್ ಅಧಿಕಾರಿಗಳ ಮತ್ತು ಗುಮಾಸ್ತರ ಹುದ್ದೆಗಳಿಗೆ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಮೈಸೂರಿನ ಕೇಂದ್ರ ಕಚೇರಿಯಲ್ಲಿ 45 ದಿನಗಳ ತರಬೇತಿ ನೀಡಲು ಉದ್ದೇಶಿಸಲಾಗಿದೆ.ಆಸಕ್ತರು ಜ.08 ರೊಳಗಾಗಿ ಬೆಳಿಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಲು ದೂ.0821-2515944 ಗೆ ಸಂಪರ್ಕಿಸಬಹುದು ಎಂದು ಕರಾಮುವಿ ಕುಲಸಚಿವ ಪ್ರೊ. ಕೆ.ಬಿ.ಪ್ರವೀಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ಗಾಗಿ ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ:ಜ.03:ಪ್ರಸ್ತಕಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಹೆಚ್.ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ಅರ್ಹ ಹೊಸ ವಿದ್ಯಾರ್ಥಿಗಳಿಂದ ಮಾಸಿಕ ವ್ಯಾಸಂಗವೇತನ/ಫೆಲೋಶಿಪ್‌ಗಾಗಿ ಆಫ್-ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.2024-25ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಹೆಚ್.ಡಿ ಅಧ್ಯಯನ ಪ್ರಾರಂಭಿಸಿರುವ (ದಿನಾಂಕ:10-01-2024 ಮತ್ತು ಅದರ ನಂತರ ಪ್ರಥಮ ವರ್ಷದ ಪಿಹೆಚ್.ಡಿ. ಪ್ರಾರಂಭಿಸಿರಬೇಕು) ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಹಾಗೂ 3(ಬಿ) ಗೆ ಸೇರಿದ ಅರ್ಹ ಅಭ್ಯರ್ಥಿಗಳು ಮಾಸಿಕ ವ್ಯಾಸಂಗವೇತನ/ಫೆಲೋಶಿಪ್‌ಗಾಗಿ ಅರ್ಜಿ ಸಲ್ಲಿಸಬಹುದು. ಕರ್ನಾಟಕದ ಶಾಸನಬದ್ಧ ವಿಶ್ವವಿದ್ಯಾಲಯಗಳಲ್ಲಿ ಹಾಗೂ ಅಧೀನಕ್ಕೆ ಒಳಪಡುವ ಸಂಸ್ಥೆಗಳಲ್ಲಿ ಪ್ರಥಮ ವರ್ಷದ ಪಿಹೆಚ್.ಡಿ ಅಧ್ಯಯನ ಮಾಡುತ್ತಿರುವ ಹೊಸ ಅಭ್ಯರ್ಥಿಗಳು ಮಾತ್ರ ಆಫ್-ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು.ಅರ್ಜಿ ಸಲ್ಲಿಸಲು ಜ.20 ಕೊನೆಯ ದಿನವಾಗಿರುತ್ತದೆ. ವಿವರಗಳಿಗಾಗಿ ಇಲಾಖಾ ವೆಬ್‌ಸೈಟ ïhttps://bcwd.karnatakaka.govಟಿ ನಲ್ಲಿ ಲಭ್ಯವಿದ್ದು, ಅಭ್ಯರ್ಥಿಗಳು ಎಲ್ಲಾ ಮಾಹಿತಿಯನ್ನು ಓದಿ, ತಿಳಿದುಕೊಂಡು ನಂತರ ಅರ್ಜಿ ಸಲ್ಲಿಸಬೇಕು.ಹೆಚ್ಚಿನ ಮಾಹಿತಿಗಾಗಿ ಮೊ.8050770004 ಗೆ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜ.8 ರೊಳಗೆ ಸಭೆ ಕರೆಯದಿದ್ದರೆ ಸಂಡೂರು ಶಾಸಕರ ಮನೆ ಮುಂದೆ ಧರಣಿ




**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಜ.3:ತಾಲೂಕಿನ ಕುಡುತಿನಿ ಸುತ್ತ ಮುತ್ತಲು ಕೈಗಾರಿಕೆಗಳ ಸ್ಥಾಪನೆಗೆ ವಶಪಡಿಸಿಕೊಂಡ ಜಮೀನಿಗೆ ಹೆಚ್ಚಿನ ಪರಿಹಾರ ಕೊಡಬೇಕು, ಕೈಗಾರಿಕೆಗಳನ್ನು ಆರಂಭಿಸಬೇಕು. ಇಲ್ಲವೇ ರೈತರ ಜಮೀನು ರೈತರಿಗೆ ವಾಪಾಸ್ ನೀಡಬೇಕೆಂದು ಕುಡುತಿನಿಯಲ್ಲಿ ನಡೆಸುತ್ತಿರುವ ಧರಣಿ ಸತ್ಯಾಗ್ರಹ ಆರಂಭಗೊಂಡು ಎರೆಡು ವರ್ಷ ಕಳೆದರೂ ಸರ್ಕಾರ ಸ್ಪಂದಿಸಿಲ್ಲ. ಸಂಡೂರು ಉಪ ಚುನಾವಣೆ ಸಂದರ್ಭದಲ್ಲಿ ಈ ಸಮಸ್ಯೆ ಪರಿಹರಿಸುವುದಾಗಿ ಹೇಳಿದ್ದ ಮಾತು ಸುಳ್ಳಾಗಿದೆ. ಜ. 8 ರೊಳಗೆ ಈ ಕುರಿತು ಚರ್ಚಿಸಲು ಸಿಎಂ ಅವರು ಸಭೆ ಕರೆಯದಿದ್ದರೆ ಜ. 9 ರಿಂದ ಸಂಡೂರು ಶಾಸಕ ಮನೆ ಮುಂದೆ ಧರಣಿ ಸತ್ಯಾಗ್ರಹ ಮಾಡಲು ಭೂಸಂತ್ರಸ್ಥರು ನಿರ್ಧರಿಸಿದ್ದಾರೆ.ಕರ್ನಾಟಕ ಪ್ರಾಂತ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಯು.ಬಸವರಾಜ್ ನಗರದಲ್ಲಿಂದು ಸುದ್ದಿಗೋಷ್ಠಿ ನಡೆಸಿ. ಕುಡಿತಿನಿ ಭಾಗದಲ್ಲಿ ಲಕ್ಷ್ಮೀ ಮಿತ್ತಲ್, ಉತ್ತಮ್ ಗಾಲ್ವಾ. ಏನ್ ಎಂ ಡಿ ಸಿ ಗಾಗಿ ಕೆ ಐ ಡಿ ಬಿ ಮುಖಾಂತರ ರಾಜ್ಯ ಸರ್ಕಾರ 12500 ಎಕರೆ ಭೂಮಿಯನ್ನು 14 ವರ್ಷದ ಹಿಂದೆ ಪಡಿಸಿಕೊಂಡಿದ್ದು, ರೈತರಿಗೆ ನ್ಯಾಯವಾದ ಭೂ ಬೆಲೆಗಾಗಿ. ಕಾರ್ಖಾನೆಗಳನ್ನು ಕೂಡಲೇ ಪ್ರಾರಂಭ ಮಾಡಬೇಕು, ಇಲ್ಲಾ ನಮ್ಮ ಭೂಮಿ ನಮಗೆ ವಾಪಸ್ಸು ಕೊಡಬೇಕೆಂದು. ಕಳೆದ 748 ದಿನಗಳಿಂದಲೂ ಹೋರಾಟ ಮಾಡಿತ್ತಿದೆ. ಸಂಡೂರು ಉಪ ಚುನಾವಣೆ ಸಂದರ್ಭದಲ್ಲಿ ಸಿಎಂ.ಸಿದ್ದರಾಮಯ್ಯ, ಶಾಸಕರು ರೈತರಿಗೆ ನ್ಯಾಯ ಕೊಡಿಸುವುದಾಗಿ ಭರವಸೆ ನೀಡಿದ್ದರು. ಅಲ್ಲದೆ, ಬೆಳಗಾಂ ಅಧಿವೇಶನದಲ್ಲಿ ಜಂಟಿ ಸಭೆ ಮಾಡಿ ಸಮಸ್ಯೆ ಪರಿಹಾರ ಮಾಡುತ್ತೇವೆಂದು ಹೇಳಿತ್ತು. ಬೆಳಗಾಂ ಅಧಿವೇಶನದಲ್ಲಿ ಚರ್ಚೆ ಮಾಡಲು ಸಾಧ್ಯವಾಗದ ಕಾರಣ, ಜನವರಿ ಮೊದಲನೆಯ ವಾರದಲ್ಲಿ ಜಂಟಿ ಸಭೆ ಮಾಡಲು ಭರವಸೆ ನೀಡಿದ್ದರು. ಅದಕ್ಕಾಗಿ ಜನವರಿ 8 ರ ಒಳಗೆ ಸಭೆಯನ್ನು ಕರೆ-ಯದೆ ಕಾಲ ಹರಣ ಮಾಡಲು ಮುಂದಾದರೆ ಜನವರಿ 9 ರಂದು ಸಂಡೂರ್ ಶಾಸಕರ ಮನೆ ಮುಂದೆ ಹೋರಾಟ ಮಾಡಲು ತೀರ್ಮಾನ ಮಾಡಲಾಗದೆಂದು ತಿಳಿಸಿದರು.ಪತ್ರಿಕಾ ಗೋಷ್ಠಿಯಲ್ಲಿ ಸಿಐಟಿಯುನ ಸಂಘಟನೆಯ ಜಿಲ್ಲಾ ಅಧ್ಯಕ್ಷ ಜೆ ಸತ್ಯಬಾಬು, ಎಂ ತಿಪ್ಪೇಸ್ವಾಮಿ, ಶೇಖರ್, ಶಿವರಾಮ ರೆಡ್ಡಿ, ಅಂಜಿನಪ್ಪ ಕುಡಿತೀನಿ, ರಮೇಶ್ ಮುಂತಾದವರು ಇದ್ದರು.

# ಸಾವಿತ್ರಿಬಾಯಿ ಫುಲೆ ಕೊಡುಗೆ ಅಪಾರ: ಸಿದ್ದನಗೌಡ ಮಂಗಳೂರ



**ಮಲ್ಲಮ್ಮ ನುಡಿ ವಾರ್ತೆ**

ತಾಳಿಕೋಟಿ:ದೇಶದ ಮೊದಲ ಮಹಿಳಾ ಶಿಕ್ಷಕಿ, ಅಕ್ಷರದವ್ವ ಎಂದೇ ಪ್ರಸಿದ್ಧರಾಗಿರುವ ಮಾತೆ ಸಾವಿತ್ರಿಬಾಯಿ ಫುಲೆ ಅವರು ಶಿಕ್ಷಣ ರಂಗದಲ್ಲಿ ಅದರಲ್ಲೂ ಮಹಿಳೆಯರ ಶಿಕ್ಷಣಕ್ಕಾಗಿ ಮಾಡಿದ ಕಾರ್ಯ ಸದಾ ಸ್ಮರಣೀಯವಾಗಿದೆ ಎಂದು ಸರ್ವ ಜ್ಞ ವಿದ್ಯಾಪೀಠದ ಸಂಸ್ಥಾಪಕ ಅಧ್ಯಕ್ಷ ಸಿದ್ದನಗೌಡ ಮಂಗಳೂರು ಹೇಳಿದರು. ಪಟ್ಟಣದ ಪ್ರತಿಷ್ಠಿತ ಸರ್ವಜ್ಞ ವಿದ್ಯಾಪೀಠ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಭಾರತದ ಮೊದಲ ಮಹಿಳಾ ಶಿಕ್ಷಕಿ ಸಾವಿತ್ರಿಬಾಯಿ ಫುಲೆ ರವರ 194 ನೇ ಜಯಂತಿ ಅಂಗವಾಗಿ ಶುಕ್ರವಾರ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಅವರು ಮಾತನಾಡಿ ಸಾವಿತ್ರಿಬಾಯಿಯವರು ಬಾಲ್ಯದಲ್ಲಿ ಶಿಕ್ಷಣ ಪಡೆಯಲು ಅನುಭವಿಸಿದ ಅವಮಾನ ಮತ್ತು ಹಿಂಸೆಯನ್ನು ಸವಾಲಾಗಿ ತೆಗೆದುಕೊಂಡು ಶಿಕ್ಷಣವನ್ನು ಪಡೆದುಕೊಂಡು ಈ ಕ್ಷೇತ್ರದಲ್ಲಿ ಕ್ರಾಂತಿಯನ್ನು ಮಾಡಿದರು. ಸಾವಿರಾರು ಅನಾಥ ಹೆಣ್ಣು ಮಕ್ಕಳಿಗೆ ವಸತಿ ಶಾಲೆಗಳನ್ನು ತೆರೆದು ಅವರನ್ನು ಸುಶಿಕ್ಷಿತ ವಂತರನ್ನಾಗಿ ಮಾಡಿದರು. ಅವರ ಹಕ್ಕುಗಳ ರಕ್ಷಣೆಗಾಗಿ ಹಗಲಿರು ಶ್ರಮಿಸಿದರು ಅವರ ಈ ಹೋರಾಟದ ಬದುಕು ನಮಗೆಲ್ಲರಿಗೂ ಪ್ರೇರಣದಾಯಕವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಮುಖ್ಯಗುರುಗಳಾದ ಸಂತೋಷಪವಾರ.ಶಿಕ್ಷಕರಾದ ರಾಜು ಜವಳಗೇರಿ, ದೈಹಿಕ ಶಿಕ್ಷಕರಾದ ಬಸವರಾಜ ಚಳ್ಳಗಿ,ಶಾಂತಗೌಡ ಬಿರಾದಾರ,ಭೀಮನಗೌಡ ಸಾಸನೂರ,ರಸೂಲಸಾ ತುರಕಣಗೇರಿ, ರವಿಕುಮಾರ ಮಲ್ಲಾಬಾದಿ, ಬಸವರಾಜ ಸವದತದತ್ತಿ ,ಮೌಲಾಲಿ ವಾಲಿಕಾರ, ಸಿದ್ದನಗೌಡ ಮೂದನೂರು, ಶರಣಗೌಡ ಕಾಚಾಪುರ. ಸಿದ್ದನಗೌಡ ಚೌದರಿ, ಸಂಜುಕುಮಾರ ಭಜಂತ್ರಿ,ರಮೇಶ ಪಾಸೋಡಿ, ರೂಪಾ ಪಾಟೀಲ, ಶಿವಲೀಲಾ ಚುಂಚನೂರ,ಲಕ್ಷ್ಮಿ ಚುಂಚುರ, ದೇವಿಂದ್ರಗುಳೆದ,ಅನಿತಾ ಚೌದ್ರಿ, ಅಂಬುಜಾ ಹಜೇರಿ,ರಾಜಬಿ ಬಿದರಿ,ಕಲ್ಪನಾ ಹಜೇರಿ,ನಾಗರತ್ನ ಮೈಲೇಶ್ವರ,ಹೇಮಾ ಕೊಡೆಕಲ್, ನಾಗಶ್ರೀ ನಾಯಕ, ಮೇಘಾ ಪಾಟೀಲ, ಮುಬಿನ ಮುರಾಳ, ತನುಶ್ರೀ ಮಹೇಂದ್ರಕರ,ಸರ್ವ ಗುರು ಬಳಗದವರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಜ್ಞಾನದಾಸೋಹಿ ಸಿದ್ದೇಶ್ವರ ಸ್ವಾಮಿಗಳು



**ಮಲ್ಲಮ್ಮ ನುಡಿ ವಾರ್ತೆ**

ಪ್ರವಚನಗಳ ಮೂಲಕ ಜನರ ಜ್ಞಾನದ ಹಸಿವುವನ್ನು ನೀಗಿಸಿದ ಜ್ಞಾನ ದಾಸೋಹಿ ಎಂದು ಪ್ರಖ್ಯಾತರಾದವರು ಶ್ರೀ ಸಿದ್ದೇಶ್ವರ ಸ್ವಾಮೀಜಿ ಅವರು ಎಂದು ಪ್ರಾಂಶುಪಾಲ ನವೀಲಕುಮಾರ ಉತ್ಕಾರ್ ಹೇಳಿದರು.

ಸಂತಪುರ್ ಸಿದ್ದರಾಮೇಶ್ವರ ಪದವಿ ಪೂರ್ವ ಕಾಲೇಜಿನಲ್ಲಿ ಗುರುವಾರ ವಿಜಯಪುರ ಜ್ಞಾನ ಯೋಗಾಶ್ರಮದ ಪೂಜ್ಯಶ್ರೀ ಸಿದ್ದೇಶ್ವರ ಸ್ವಾಮೀಜಿಯವರ ಗುರು ನಮನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಜ್ಞಾನತನವನ್ನು ಪ್ರವಚನಗಳ ಮೂಲಕ ಹೋಗಲಾಡಿಸಿ ಸರಳತೆಯ ಮಾದರಿಯಾಗಿ ಸಮಾಜಕ್ಕೆ ಸುಗಂಧವನ್ನು ಬೀರಿದವರು ಸಿದ್ದೇಶ್ವರ ಶ್ರೀಗಳು ಎಂದರು.

ಪ್ರತಿಭಾವಂತ ವಿದ್ಯಾರ್ಥಿನಿ ಸುಧಾರಣೆ ಸಂಗಪ್ಪ ಮಾತನಾಡಿ ಸರಳತೆಯಿಂದ ಸಮಾಜಕ್ಕೆ ದಾರಿದೀಪವಾದವರೇ ಸಿದ್ದೇಶ್ವರ ಶ್ರೀಗಳು ಎಂದರು.

ಪ್ರತಿಭಾವಂತ ವಿದ್ಯಾರ್ಥಿನಿಗಳಾದ ಶ್ವೇತಾ ಬಸವರಾಜ,ಆರತಿ ಶಿವರಾಜ ಉಪನ್ಯಾಸಕರಾದ ಸುಧಾ ಕೌಟಿಗೆ, ಪ್ರಿಯಾಂಕಾ ಗುನ್ನಳ್ಳಿಕರ್,ನಿರ್ಮಲಾ ಜಮಾದಾರ, ರಾಜಕುಮಾರ ಹಳ್ಳಿಕರ್, ಸುಧೀರ ಆಲೂರೆ, ಸಂತೋಷ ಧೂಳಗಂಡೆ, ಜಿತೆ-ೕಂದ್ರ ಡಿಗ್ಗಿ, ವನದೇವಿ ಎಕ್ಕಳೆ, ಅಶ್ವಿನಿ ಹಿಂದೊಡ್ಡಿ ಇದ್ದರು.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿರಿ: 9964206170

# ಜ.10 ರಂದು ಬಿ.ಕೆ.ಶಿವಾನಿ ಅಕ್ಕನವರ ಪ್ರವಚನ



ಬೀದರ, ಜ.3: ಈ ತಿಂಗಳ 10 ರಂದು ಸಾಯಂಕಾಲ 6.30 ರಿಂದ ರಾತ್ರಿ 8 ರ ವರೆಗೆ ನಗರದ ಕರ್ನಾಟಕ ಫಾರ್ಮಸಿ ಕಾಲೇಜು ಮೈದಾನದಲ್ಲಿ ಅಂತರಾಷ್ಟ್ರೀಯ ವಾಗ್ಮಿಗಳಾದ ಬಿ.ಕೆ.ಶಿವಾನಿ ಅಕ್ಕನವರು "ಆನಂದಮಯ ಜೀವನ" ಎಂಬ ವಿಷಯ ಕುರಿತು ವಿಶೇಷ ಪ್ರವಚನ ನೀಡುವರು ಎಂದು ಬ್ರಹ್ಮಾಕುಮಾರಿ ಕೇಂದ್ರ ಸಂಗಾರೆಡ್ಡಿ ಹಾಗೂ ಬೀದರ್ ಶಿವಶಕ್ತಿ ಭವನದ ಸಂಚಾಲಕರಾದ ಬಿ.ಕೆ.ಸುಮಂಗಲಾ ಅಕ್ಕನವರು ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಬಿ.ಕೆ.ಶಿವಾನಿ ಅಕ್ಕನವರು ಈ ತಿಂಗಳ 9, 10 ಹಾಗೂ 11 ರಂದು ಮಹಾರಾಷ್ಟ್ರದ ಉದಗಿರ, ಕರ್ನಾಟಕದ ಬೀದರ್ ಹಾಗೂ ಕಲಬುರಗಿ, ತೆಲಂಗಾಣ ರಾಜ್ಯದ ಸಂಗಾರೆಡ್ಡಿಯಲ್ಲಿ ವಿಶೇಷ ಪ್ರವಚನ ನೀಡುವರು. ಬೀದರ್‌ನಲ್ಲಿ 10 ರಂದು 6.30 ಗಂಟೆಗೆ ಕಾರ್ಯಕ್ರಮ ಪ್ರಾರಂಭವಾಗಿ ಅರ್ಧ ಗಂಟೆಯ ವರೆಗೆ ಸಂಗೀತ ಕಾರ್ಯಕ್ರಮ, 6 ರಿಂದ 6.30ರ ವರೆಗೆ ಬಿ.ಕೆ.ಶಿವಾನಿ ಅಕ್ಕನವರು, ಜಿಲ್ಲಾ ಉಸ್ತುವಾರಿ ಮಂತ್ರಿ ಈಶ್ವರ ಖಂಡ್ರೆ ಸೇರಿದಂತೆ ಇತರೆ ಜನಪ್ರತಿನಿಧಿಗಳಿಂದ ದೀಪ ಪ್ರಜ್ವಲನೆ ಹಾಗೂ ಕಾರ್ಯಕ್ರಮದ ಕುರಿತು ಮಾತನಾಡುವರು. ಸರಿಯಾಗಿ 6.30 ಗಂಟೆಯಿಂದ 8 ಗಂಟೆಯ ವರೆಗೆ ಒಂದು ವರೆ ಗಂಟೆಗಳ ಕಾಲ ಶಿವಾನಿ ಅಕ್ಕನವರು ಪ್ರೇರಣಾದಾಯಕ ಸಂದೇಶ ನೀಡುವರು. ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಆನ್‌ಲೈನ್ ನೋಂದಣಿ ಆರಂಭಾಗಿದ್ದು, ಈಗಾಗಲೆ 5 ಸಾವಿರ ಜನರು ಗೂಗಲ್ ಫಾರ್ಮ್ ಮೂಲಕ ಹೆಸರು ನೋಂದಣಿ ಮಾಡಿಕೊಂಡಿದ್ದಾರೆ.

ಒಟ್ಟು 12 ಸಾವಿರ ಆಸನದ ವ್ಯವಸ್ಥೆ ಮಾಡಲಾಗುವುದು. ಅದರಲ್ಲಿ 3 ಸಾವಿರ ಜನರಿಗೆ ವಿಐಪಿ ಸೌಲಭ್ಯ ಕಲ್ಪಿಸಲಾಗುವುದು. ಈ ಕಾರ್ಯಕ್ರಮವನ್ನು ಲೈವ್ ಮೂಲಕವು ವೀಕ್ಷಿಸಬಹುದಾಗಿದೆ. ಇದರಲ್ಲಿ 10 ವರ್ಷದ ಕೆಳಗಿನ ಮಕ್ಕಳಿಗೆ ಆಸ್ಪದವಿರುವುದಿಲ್ಲ. 6.30 ರಿಂದ 8 ಗಂಟೆಯ ವರೆಗೆ ಯಾರೂ ಸ್ಥಳಬಿಟ್ಟು ಕದಲಬಾರದೆಂದು ಬಿ.ಕೆ.ಶಿವಾನಿ ಅಕ್ಕನವರ ಆದೇಶವಾಗಿರುತ್ತದೆ. ಅದರ ಜೊತೆಗೆ 11, 12 ರಂದು ಹುಬ್ಬಳ್ಳಿಯ ಬಿ.ಕೆ.ವೀಣಾ ಅಕ್ಕನವರಿದಂದ ಪ್ರವಚನ ಕಾರ್ಯಕ್ರಮ ಜರುಗಲಿದೆ. ಈ ಮೂರು ದಿನಗಳ ಕಾಲ ಬೆಳಿಗ್ಗೆ 6.30 ರಿಂದ 7.30ರ ವರೆಗೆ ರಾಜಯೋಗ ಶಿಬಿರ, ರಾತ್ರಿ 6.30 ರಿಂದ 8 ಗಂಟೆಯ ವರೆಗೆ ಪ್ರವಚನ ಕಾರ್ಯಕ್ರಮ ಜರುಗಲಿದೆ ಎಂದು ಸುಮಂಗಲಾ ಅಕ್ಕನವರು ಹೇಳಿದರು.

ಬ್ರಹ್ಮಕುಮಾರಿ ಶಿವಶಕ್ತಿ ಭವನದ ಸಂಚಾಲಕರಾದ ಬಿ.ಕೆ.ಸುನಂದಾ ಅಕ್ಕನವರು ಮಾತನಾಡಿ, ವಿಶ್ವದ 140ಕ್ಕೂ ಅಧಿಕ ದೇಶಗಳಲ್ಲಿ ಹಾಗೂ ಬೀದರ್ ಜಿಲ್ಲೆಯ ಸುಮಾರು 100ಕ್ಕೂ ಅಧಿಕ ಸ್ಥಳಗಳಲ್ಲಿ ಬ್ರಹ್ಮಾಕುಮಾರಿ ಕೇಂದ್ರಗಳು ಹಾಗೂ ಗೀತಾ ಪಾಠಶಾಲೆಗಳು ಕಾರ್ಯನಿರ್ವಹಿಸುತ್ತಿವೆ. ಬ್ರಹ್ಮಾಕುಮಾರಿ ಈಶ್ವರಿಯ ವಿಶ್ವವಿದ್ಯಾಲಯದಲ್ಲಿ ನಿತ್ಯ ಯೋಗ, ಧ್ಯಾನ, ರಾ-ಜಯೋಗ ಶಿಬಿರ, ಆಧ್ಯಾತ್ಮ ಪ್ರವಚನ ಸೇರಿದಂತೆ ವಿವಿಧ ಆಧ್ಯಾತ್ಮಿಕ ಕಾರ್ಯಕ್ರಮಗಳು ನಡೆಯುತ್ತಿವೆ. ಮನುಷ್ಯನ ದುರ್ಗುಣ, ದುರಾಚಾರ, ದುರ್ನಡತೆ ಹೋಗಲಾಡಿಸಲು ಭಾರತದ ಉದ್ದಗಲಕ್ಕು ಗ್ರಾಮೀಣ ಭಾಗದ ಹಾಗೂ ಜನರಿಗೂ ಈಶ್ವರಿಯ ಸೇವೆ ಒದಗಿಸಲು ಬ್ರಹ್ಮಾಕುಮಾರಿ ಕೇಂದ್ರಗಳು ಹಾಗೂ ಗೀತಾ ಪಾಠಶಾಲೆಗಳ ಮೂಲಕ ನಿತ್ಯ ನಿರಂತರ, ಆಧ್ಯಾತ್ಮ ಹಾಗೂ ರಾಜಯೋಗದ ಮಹತ್ವ ಸಾರಲಾಗುತ್ತದೆ. ಪರಮಾತ್ಮನ ಸಂದೇಶವಾದ ಮುರ್ಲಿ ಮೂಲಕ ಜಗತ್ತಿನ ಅನೇಕ ಹೃದಯಗಳನ್ನು ಸಂಪರ್ಕಿಸುತ್ತ ಬಂದಿದೆ. ಹೀಗೆ ಹತ್ತು ಹಲವಾರು ಕಾರ್ಯಚಟುವಟಿಕೆಗಳನ್ನು ಕೈಗೊಂಡಿರುವ ಈಶ್ವರಿಯ ವಿಶ್ವವಿದ್ಯಾಲಯಕ್ಕೆ ಎಲ್ಲರೂ ಕೈಜೋಡಿಸಬೇಕೆಂದು ಸುನಂದಾ ಅಕ್ಕನವರು ಕೋರಿದರು.

ಬಿಎಸ್‌ಎನ್‌ಎಲ್‌ನ ನಿವೃತ್ತ ವ್ಯವಸ್ಥಾಪಕ ಕಾಶಿನಾಥ ಕೊಂಡಾ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

## ಸಾವಿತ್ರಿಬಾಯಿ ಫುಲೆ ಶಿಕ್ಷಣದ ಜ್ಯೋತಿ



ಸಮಾಜದಲ್ಲಿ ಎಲ್ಲರೂ ಶಿಕ್ಷಿತರಾಗಬೇಕು ಮಹಿಳೆಯರು ಎಲ್ಲ ಕ್ಷೇತ್ರದಲ್ಲಿ ಮುಖ್ಯವಾಹಿನಿಗೆ ಬರಬೇಕು ಎನ್ನುವುದು ಸಾವಿತ್ರಿಬಾಯಿ ಫುಲೆ ಆಶಯ ಹೊಂದಿದ್ದರು.
–ಗುರುಬಸವ ಪಟ್ಟದ್ದೇವರು ಪೀಠಾಧಿಪತಿಗಳು ಹಿರೇಮಠ ಸಂಸ್ಥಾನ ಭಾಲ್ಕಿ

ಮಲ್ಲಮ್ಮ ನುಡಿ ವಾರ್ತೆ
(ಮಲ್ಲಪ್ಪಾ ಟಿ ಹಾಸಗೊಂಡ)

ಭಾಲ್ಕಿ:ಜ.3: ಸಾವಿತ್ರಿಬಾಯಿ ಫುಲೆ ಅವರು ದೇಶದಲ್ಲಿ ಮಹಿಳಾ ಶಿಕ್ಷಣದ ಕ್ರಾಂತಿ ಜ್ಯೋತಿಯಾಗಿದ್ದಾರೆ ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು.

ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದಲ್ಲಿ ಶುಕ್ರವಾರ ಆಯೋಜಿಸಿದ್ದ ಸಾವಿತ್ರಿಬಾಯಿ ಫುಲೆ ಜಯಂತಿ ಕಾರ್ಯಕ್ರಮದ ಸಾನ್ನಿಧ್ಯವಹಿಸಿ ಅವರು ಮಾತನಾಡಿದರು.

ಮಹಿಳೆ ನಾಲ್ಕು ಗೋಡೆಗಳಿಂದ ಹೊರಬಂದು ವಿದ್ಯೆ ಕಲಿಯುವುದು ಅಪರಾಧವಲ್ಲ ಎನ್ನುವುದನ್ನು ಗಟ್ಟಿದನಿಯಲ್ಲಿ ತಿಳಿಸಿದವರು ಫುಲೆ ಅಂತವರ ಆದರ್ಶ ಇಂದಿನ ಯುವ ಜನತೆಗೆ ಪ್ರೇರಣೆ ಆಗಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಆಡಳಿತಾಧಿಕಾರಿ ಮೋಹನ ರೆಡ್ಡಿ, ಪ್ರಾಚಾರ್ಯ ಬಸವರಾಜ ಮೊಳಕೀರೆ, ಪ್ರಾಧ್ಯಾಪಕರು, ವಿದ್ಯಾರ್ಥಿಗಳು ಇದ್ದರು.

## ಗ್ರಾಮೀಣ ಭಾಗದ ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ಅಗತ್ಯ



ಗ್ರಾಮೀಣ ಭಾಗದಲ್ಲಿ ಕಳೆದ 12ವರ್ಷಗಳಿಂದ ಸುಸಜ್ಜಿತ ಸೌಲಭ್ಯಗಳೊಂದಿಗೆ ಮಕ್ಕಳಿಗೆ ಗುಣಾತ್ಮಕ ಶಿಕ್ಷಣದ ಜತೆಗೆ ಮಾನವೀಯ ಕಲಿಸಿ ಕೊಡುವ ಪ್ರಯತ್ನ ಮಾಡಲಾಗುತ್ತಿದೆ.
– ರಾಜಕುಮಾರ ಲಿಂಬಾಶೆಟ್ಟಿ ಅಧ್ಯಕ್ಷರು ಕೆ.ಎಲ್.ಪಬ್ಲಿಕ್ ಶಾಲೆ ಹಾಲಹಳ್ಳಿ(ಕೆ)

ಮಲ್ಲಮ್ಮ ನುಡಿ ವಾರ್ತೆ
(ಮಲ್ಲಪ್ಪಾ ಟಿ ಹಾಸಗೊಂಡ)

ಭಾಲ್ಕಿ:ಜ.3: ಗ್ರಾಮೀಣ ಭಾಗದ ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ನೀಡಿದಾಗ ನಗರ ಪ್ರದೇಶದ ಮಕ್ಕಳಿಗಿಂತ ಉತ್ತಮ ಸಾಧನೆ ತೋರಲು ಸಾಧ್ಯವಾಗುತ್ತದೆ ಎಂದು ಸರಿಗಮಪ ಖ್ಯಾತಿಯ ದಿಯಾ ಹೆಗಡೆ ಹೇಳಿದರು.

ತಾಲೂಕಿನ ಹಾಲಹಳ್ಳಿ(ಕೆ) ಗ್ರಾಮದ ಕೆ.ಎಲ್.ಪಬ್ಲಿಕ್ ಶಾಲೆಯಲ್ಲಿ ಆಯೋಜಿಸಿದ್ದ 12ನೆಯ ಶಾಲಾ ವಾರ್ಷಿಕೋತ್ಸವ ಮತ್ತು ಜಬ್ಬಾ(ಆಸ್ಮಾನ ಛುನೇಕಾ) ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗದಲ್ಲಿ ಕೆ.ಎಲ್.ಪಬ್ಲಿಕ್ ಶಾಲೆ ಬಡ ಮಕ್ಕಳಿಗೆ ಕಡಿಮೆ ಖರ್ಚಿನಲ್ಲಿ ಗುಣಾತ್ಮಕ ಶಿಕ್ಷಣ ಮತ್ತು ಸಂಸ್ಕಾರ ನೀಡುತ್ತಿರುವುದು ಸಂತಸ ತರಿಸಿದೆ ಎಂದು ತಿಳಿಸಿದರು.

ಸಾನ್ನಿಧ್ಯವಹಿಸಿದ ಹುಲಸೂರ ಗುರುಬಸವೇಶ್ವರ ಸಂಸ್ಥಾನ ಮಠದ ಶಿವಾನಂದ ಸ್ವಾಮೀಜಿ ಮಾತನಾಡಿ, ಗ್ರಾಮೀಣ ಭಾಗದಲ್ಲಿ ಕೆ.ಎಲ್.ಶಿಕ್ಷಣ ಸಂಸ್ಥೆ ಉತ್ತಮ ಶಿಕ್ಷಣಕ್ಕೆ ಪ್ರಖ್ಯಾತಿ ಪಡೆದು ಕೊಂಡಿದೆ. ಪಾಲಕರು ಸದುಪಯೋಗ ಪಡೆದು ಕೊಂಡು ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವ ಪ್ರಯತ್ನ ಮಾಡಬೇಕು ಎಂದು ತಿಳಿಸಿದರು.

ಜಿಲ್ಲಾ ಕಸಾಪ ಅಧ್ಯಕ್ಷ ಸುರೇಶ ಚನಶೆಟ್ಟಿ ಮಾತನಾಡಿ, ಈ ಶಿಕ್ಷಣ ಸಂಸ್ಥೆಯಲ್ಲಿ ಮಕ್ಕಳಲ್ಲಿ ಶಿಸ್ತು ಜತೆಗೆ ದೇಶಭಕ್ತಿ ಮಹತ್ವ ಹೇಳಿಕೊಡುತ್ತಿರುವುದು ಹೆಮ್ಮೆ ತರಿಸಿದೆ ಎಂದು ತಿಳಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಚನ್ನಪ್ಪ ಹಳ್ಳದ್ ಮಾತನಾಡಿ, ಮಕ್ಕಳನ್ನು ಸಾಧ್ಯವಾದಷ್ಟು ಮೊಬೈಲ್‌ಗಳಿಂದ ದೂರವಿಡಬೇಕು. ಮಕ್ಕಳಲ್ಲಿ ಓದಿನ ಜತೆಗ ಪಠ್ಯೇತರ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಲು ಪ್ರೇರಪಿಸಬೇಕು ಎಂದು ತಿಳಿಸಿದರು.

ಚಾರ್ಟರ್ಡ್ ಅಕೌಂ-ಟೆಂಟ್ ರಾಹುಲ ಮಿಶ್ರಾ ಮಾತನಾಡಿದರು.

ಈ ಸಂದರ್ಭದಲ್ಲಿ ಗ್ರಾಪಂ ಅಧ್ಯಕ್ಷ ಅಶೋಕ ಜಾಧವ, ಸಿ.ಆರ್.ಪಿ. ಶಿರೋಮಣಿ ಆಚಾರಿ, ಪಿಎಸ್ ಐ ಬಾಬು ಬಿರಾದಾರ, ಧನರಾಜ ಸೋರಳ್ಳಿ, ಬಸವರಾಜ ರಿಕ್ಕೆ, ಸತೀಶ ಪಸರಗಿ, ನಾಗೇಂದ್ರ ಸೋರಳ್ಳಿ, ಅನೀಲಕುಮಾರ ಹಂಗರಗಿ, ಶಾಲೆಯ ಮುಖ್ಯಶಿಕ್ಷಕಿ ಅರ್ಚನಾ ಲಿಂಬಾಶೆಟ್ಟಿ ಸೇರಿದಂತೆ ಶಿಕ್ಷಕರು ಹಾಜರಿದ್ದರು.

# ಪಾರಂಪರಿಕ ನಡಿಗೆಗೆ ಡಿ.ಸಿ. ಚಾಲನೆ:
## ಐತಿಹಾಸಿಕ ಸ್ಮಾರಕಗಳ ಮಹತ್ವ ಅರಿಯುವಂತೆ ವಿದ್ಯಾರ್ಥಿಗಳಿಗೆ ಕರೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜ.3: ಐತಿಹಾಸಿಕ ಸ್ಮಾರಕಗಳ ಇತಿಹಾಸ ಮತ್ತು ಅದರ ಮಹತ್ವ ಅರಿತು ಇತರರಿಗೂ ತಿಳಿಸುವ ಕೆಲಸ ವಿದ್ಯಾರ್ಥಿ ಸಮುದಾಯ ಮಾಡಬೇಕು ಎಂದು ಡಿ.ಸಿ. ಬಿ.ಫೌಜಿಯಾ ತರನ್ನುಮ್ ಹೇಳಿದರು.

ಶುಕ್ರವಾರ ಕೆ.ಕೆ.ಆರ್.ಡಿ.ಬಿ, ಕಲಬುರಗಿ ಜಿಲ್ಲಾಡಳಿತ, ಪ್ರವಾಸೋದ್ಯಮ ಇಲಾಖೆ ಹಾಗೂ ಇಂಟ್ಯಾಕ್ ಸಂಸ್ಥೆಯ ಸಹಯೋಗದೊಂದಿಗೆ ಕಲಬುರಗಿ ನಗರದ ಶ್ರೀ ಶರಣಬಸವೇಶ್ವರ ದೇವಸ್ಥಾನದಿಂದ ಕಲಬುರಗಿ ಕೋಟೆ ವರೆಗೆ ಜರುಗಿದ "ನಮ್ಮ ನಡೆ ಕೋಟೆ ಕಡೆ" ಘೋಷವಾಕ್ಯದ ಪಾರಂಪರಿಕ ನಡಿಗೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ನಮ್ಮ ಐತಿಹಾಸಿಕ ಸ್ಮಾರಕಗಳು ನಮಗೆ ಹೆಮ್ಮೆ ಇದೆ. ಇಂತಹ ಸ್ಮಾರಕಗಳ ರಕ್ಷಣೆ ಜೊತೆಗೆ ಅಲ್ಲಿ ಸ್ವಚ್ಛತೆ ಕಾಪಾಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಜಿಲ್ಲೆಯಲ್ಲಿ 30 ಪ್ರವಾಸಿ ತಾಣಗಳ ಅಭಿವೃದ್ಧಿಗೆ ಡಿ.ಪಿ.ಅರ್. ಸಿದ್ಧಪಡಿಸಿ ಸರ್ಕಾರಕ್ಕೆ ವರದಿ ಸಲ್ಲಿಸಿದೆ. ಈ ವರ್ಷ ಕೆ.ಕೆ. ಆರ್.ಡಿ. ಬಿ. ಮಂಡಳಿ ಇಂತಹ ಪ್ರವಾಸಿ ತಾಣಗಳು ಸಂರಕ್ಷಣೆಗೆ 10 ಕೋಟಿ ರೂ. ಅನುದಾನ ಮೀಸಲಿರಿಸಿದೆ. ಜಿಲ್ಲೆಯ ಪ್ರವಾಸಿ ತಾಣಗಳ ಅಭಿವೃದ್ಧಿಪಡಿಸಲಾಗುವುದು ಎಂದರು.

ಕೋಟೆ ವರೆಗೆ ವಾಕಥಾನ್: ಶ್ರೀ ಶರಣಬಸವೇಶ್ವರರ ದೇವಸ್ಥಾನದಿಂದ ಲಾಲಗೇರಿ ಕ್ರಾಸ್ ಮಾರ್ಗವಾಗಿ ಕಲಬುರಗಿ ಕೋಟೆ ವರೆಗೆ ಪಾರಂಪರಿಕೆ ನಡಿಗೆಯಲ್ಲಿ ವಿಶ್ವನಾಥ್ ರೆಡ್ಡಿ ಮುದ್ನಾಳ, ಜಿಮ್ಸ್ ಮೆಡಿಕಲ್ ಕಾಲೇಜ್, ಪಿ.ಡಿ.ಎ ಇಂಜಿನೀಯರಿಂಗ್ ಕಾಲೇಜ್, ಎಂ.ಆರ್.ಎಂ.ಸಿ ಮೆಡಿಕಲ್ ಕಾಲೇಜು, ಸೋಲಾಪುರದ ಬಸವೇಶ್ವರ ಆಯುರ್ವೇದಿಕ್ ಮೆಡಿಕಲ್ ಕಾಲೇಜ್, ಕೆ.ಸಿ.ಟಿ ಇಂಜಿನೀಯರಿಂಗ್ ಕಾಲೇಜಿನ ವಿದ್ಯಾರ್ಥಿಗಳು ಹೆಜ್ಜೆ ಹಾಕಿದರು. ನಿವೃತ್ತ ಪ್ರಾಧ್ಯಾಪಕ ಡಾ.ಶಂಭುಲಿಂಗ ವಾಣಿ ಅವರು ನಡಿಗೆಯುದ್ದಕ್ಕೂ ಕೋಟೆ ಇತಿಹಾಸದ ಕುರಿತು ತಿಳಿಹೇಳಿದರು. ನಂತರ ಕಲಬುರಗಿ ಕೋಟೆಯೊಳಗಿನ ರಣಮಂಡಳ, ಜಾಮಿಯಾ ಮಸೀದಿ, ಕೋಟೆ ಸುತ್ತ ಕಂದಕ, ಆನೆಲಯ, ಗುಪ್ತದ್ವಾರ, ಪ್ರವೇಶ ದ್ವಾರ ಹೀಗೆ ನಾನಾ ಸ್ಥಳಗಳನ್ನು ವೀಕ್ಷಿಸಲಾಯಿತು. ಇಂಟ್ಯಾಕ್ ಸಂಸ್ಥೆಯ ಡಾ.ಶಂಭುಲಿಂಗ ವಾಣಿ ಮಾತನಾಡಿ, 800 ವರ್ಷದ ಹಳೆಯ ಈ ಕೋಟೆ ರಾಜಾ ಗುಲಚಂದ್ ನಿರ್ಮಿಸಿದರು. 1346ರಲ್ಲಿ ಬಹಮನಿ ಸುಲ್ತಾನರು ಈ ಕೋಟೆ ವಶಪಡಿಸಿ ಅಧಿಕಾರ ಅರಂಭಿಸಿದರು. ಕೋಟೆ 3 ಕಿ.ಮೀ ಸುತ್ತಳತೆ ಇದ್ದು, ಶತ್ರುಗಳು ಬಾರದಂತೆ 15 ಅಡಿ ಅಳ, 30 ಅಡಿ ಅಗಲ ಸುತ್ತ ನೀರಿನ ಕಂದಕ ನಿರ್ಮಿಸಿ ನೀರಿನಲ್ಲಿ ಜಲಚರ ಪ್ರಾಣಿ ಬಿಡುತ್ತಿದ್ದರು. ಎರಡು ಗೋಡೆ ಒಳಗೊಂಡ 26 ತೋಪುಗಳಿವೆ. 8 ಗುಪ್ತ ದ್ವಾರಗಳಿವೆ ಎಂದ ಅವರು ಕಲಬುರಗಿ ಜೊತೆಗೆ ಎರಡನೇ ರಾಜಧಾನಿಯಾಗಿ ಫಿರೋಜಾಬಾದ ಘೋಷಿಸಿಕೊಂಡಿದ್ದರು ಎಂದು ಕೋಟೆ ಇತಿಹಾಸ ಹೇಳಿದರು.

ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕಿ ಅನುಸುಯಾ ಹೂಗಾರ, ಕೃಷಿ ಸಹಾಯಕ ನಿರ್ದೇಶಕ ಚಂದ್ರಕಾಂತ ಜೀವಣಗಿ ಸೇರಿದಂತೆ ಇತರೆ ಅಧಿಕಾರಿಗಳು ಭಾಗವಹಿಸಿದ್ದರು.






"ರಾಜ್ಯದ ಶ್ರೇಷ್ಠ ಸಹಕಾರಿ ಬ್ಯಾಂಕ ಪ್ರಶಸ್ತಿ ಪುರಸ್ಕೃತ"

ಶ್ರೀ ಬಸವೇಶ್ವರ ಸಹಕಾರಿ ಬ್ಯಾಂಕ ನಿಯಮಿತ., ಬಾಗಲಕೋಟ.

ಹೊಸ ವರ್ಷ ತರಲಿ ಸುಖ, ಸಮೃದ್ಧಿ, ಆಯಸ್ಸು, ಆರೋಗ್ಯ
ಅಸೂಯೆ ಎಂದಿಗೂ ಬೆಳೆಯದಿರಲಿ. ಪ್ರೀತಿಯ ಬಳ್ಳಿ ಹಬ್ಬುತಿರಲಿ.
ನಂಬಿಕೆ ಬೆಳೆದು ಹೆಮ್ಮರವಾಗಲಿ, ಸಂಬಂಧಗಳ ಬೆಸುಗೆ
ಗಟ್ಟಿಯಾಗಲಿ. ಹೊಸವರ್ಷ ಎಂದಿಗೂ ಹರುಷವಾಗಿರಲಿ.
ಬ್ಯಾಂಕಿನ ಗೌರವಾನ್ವಿತ ಸದಸ್ಯರು-ಗ್ರಾಹಕರು-ಅಭಿಮಾನಿಗಳು ಹಾಗೂ ನಾಡಿನ ಸಮಸ್ತ ಜನತೆಗೆ

2025ರ ಹೊಸ ವರ್ಷದ ಹಾರ್ದಿಕ ಶುಭಾಶಯಗಳು.

( ಆರ್. ವಾಯ್. ಪಟ್ಟಣದ )
ಉಪಾಧ್ಯಕ್ಷರು

ನಿರ್ದೇಶಕರು

( ಪ್ರಕಾಶ ಈ. ತಪಶೆಟ್ಟಿ. )
ಅಧ್ಯಕ್ಷರು,

ಸಿ.ಟಿ.ಪಾಟೀಲ, ಎಮ್.ಜಿ.ವಾಲಿ, ವಿ.ವಿ.ಶಿರಗಣ್ಣವರ, ಎಸ್.ಎಸ್.ಅರಿಶಿನಗೋಡಿ, ಶಶಿಧರ ಎಸ್. ಜಿಗಳೂರ, ಎಸ್.ಟಿ.ಬಳ್ಳಾರಿ, ಎಸ್.ಸಿ.ಆರಬ್ಬಿ, ಎಸ್.ಸಿ.ಆಡಿನ, ಸುನೀಲ ಬಿ. ಕಲಬುರ್ಗಿ, ಎಚ್.ಎಸ್.ರಾಠೋಡ, ಡಿ.ಟಿ.ನಾಯಕ, ಎಸ್.ಎಸ್.ಹೆರಕಲ್, ಎಸ್. ಎಮ್. ತಪಶೆಟ್ಟಿ, ಶ್ರೀಮತಿ ಗೀತಾ ಎಸ್. ನಾರಾ. ಶ್ರೀಮತಿ ಶೈಲಜಾ ಎಮ್. ಗುಡಗುಂಟಿ,
ಮುಖ್ಯ ಕಾರ್ಯನಿರ್ವಹಣಾಧಿಕಾರಿ / ಶಾಖಾ ವ್ಯವಸ್ಥಾಪಕರು / ಸಿಬ್ಬಂದಿ ವರ್ಗ


## ಕಮಲನಗರ: ಸಾವಿತ್ರಿಬಾಯಿ ಫುಲೆ ಅವರ ಜಯಂತಿ ಆಚರಣೆ




ಮಲ್ಲಮ್ಮ ನುಡಿ ವಾರ್ತೆ
(ಪರಮೇಶ ರಾಂಪುರೆ)

ಕಮಲನಗರ:ಜ.3: ಇಲ್ಲಿನ ಶಾಸ್ತ್ರೀ ಶಿಕ್ಷಣ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ನಡೆಯುತ್ತಿರುವ ಭಾಗಿರಥಿ ಪಬ್ಲಿಕ್ ಶಾಲೆಯಲ್ಲಿ ಶುಕ್ರವಾರ ದೇಶದ ಪ್ರಥಮ ಮಹಿಳಾ ಶಿಕ್ಷಕಿ ಸಾವಿತ್ರಿಬಾಯಿ ಫುಲೆ ಅವರ ಜಯಂತಿಯನ್ನು ಆಚರಿಸಲಾಯಿತು.

ಸಾವಿತ್ರಿಬಾಯಿ ಫುಲೆ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದ ಮುಖ್ಯಶಿಕ್ಷಕ ಮನೋಜಕುಮಾರ ಹಿರೇಮಠ ಅವರು ಮಾತನಾಡಿ, ವಿದ್ಯಾರ್ಥಿಗಳಿಗೆ ಫುಲೆ ಅವರು ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿರುವ ಸೇವೆ ಕುರಿತು ವಿವರಿಸಿದರು.

ಶೇಖ್ ಇಜಾಜ್, ಶ್ರೀದೇವಿ ಸೋನಕಾಂಬಳೆ, ದೀಪಮಾಲಾ ಸೂರ್ಯವಂಶಿ, ರಾಜಶ್ರೀ ಸಿರಗಿರೆ, ಶೀತಲ ನಂದಕುಮಾರ ಹಂಗರಗೆ, ಉಷಾ ವಿದ್ಯಾಸಾಗರ, ಅಂಜಲಿ ಸ್ವಾಮಿ, ಪಂಚಫುಲಾ, ಅಶ್ವಿನಿ ಸೇರಿದಂತೆ ಶಾಲೆಯ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಪಾಲ್ಗೊಂಡಿದರು.

ಮಾನಸಿ, ದೀಪಿಕಾ ಸಂತೋಷ, ಚೈತ್ರಾಲಿ ಪ್ರದೀಪ, ಸುದರ್ಶನಾ, ಮಹೇಶ್ವರಿ, ದಿವ್ಯಾ, ಕರುಣಾ ರಾಜಕುಮಾರ, ಅವನಿ ಬಚ್ಚಣ್ಣಾ, ತನಿಷ್ಕಾ ರವಿ ಇವರುಗಳು ಸಾವಿತ್ರಿಬಾಯಿ ಫುಲೆ ಅವರ ವೇಷಧರಿಸಿದ್ದು ನೋಡುಗರ ಗಮನ ಸೆಳೆದರು. ದೀಕ್ಷಾ ಕಾಲೇಕರ್ ನಿರೂಪಿಸಿದರು. ಶ್ರೇಯಾ ಸಂಗಪ್ಪ ಬಿರಾದಾರ ಸ್ವಾಗತಿಸಿದರು. ಸ್ವಾತಿ ಉಮೇಶ ಮಹಾಜನ ವಂದಿಸಿದರು.


ನಗರಸಭೆ ಕಾರ್ಯಾಲಯ, ಬೀದರ

ಸಂಖ್ಯೆ:ಬಿಎಂಸಿ/ಆರೋಗ್ಯ/ಸಿಆರ್-213/ಎನ್‌ಜಿ/ಸಿಆರ್-495/2024-25 ದಿನಾಂಕ:01-01-2025

:: ಟೆಂಡರ್ ಪ್ರಕಟಣೆ ::

1) ಕಾಮಗಾರಿ / ಸರಕು / ಸೇವೆಯ ವಿವರ: DMA/2024-25/SE4368, DMA/2024-25/OW/WORK_INDENT34305, DMA/2024-25/OW/WORK_INDENT34306, DMA/2024-25/OW/WORK_INDENT34307, 2) ಕಾಮಗಾರಿಯ ಅಂದಾಜು ಮೊತ್ತ: e-portal ನಲ್ಲಿ ನಮೂದಿಸಿದಂತೆ 3) ಗುತ್ತಿಗೆದಾರರ ಅರ್ಹತೆ ವಿವರ: e-portal ನಲ್ಲಿ ನಮೂದಿಸಿದಂತೆ, 4) ಟೆಂಡರ ಅರ್ಜಿಯ ಬೆಲೆ ಮತ್ತು ಇ.ಎಂ.ಡಿ. ಮೊತ್ತದ ವಿವರ: e-portal ನಲ್ಲಿ ನಮೂದಿಸಿದಂತೆ, 5) ಟೆಂಡರ ಫಾರಂ ಪಡೆಯಲು ಅಂತಿಮ ದಿನಾಂಕ & ಭರ್ತಿ ಮಾಡಿ ಸಲ್ಲಿಸಲು: 10-01-2025 upto 04.00 PM, 6) ಟೆಂಡರ ತೆರೆಯುವ ದಿನಾಂಕ: 13-01-2025 at 10.30 AM, 7) ಹೆಚ್ಚಿನ ವಿವರಗಳಿಗೆ ಸಂಪರ್ಕಿಸಬೇಕಾದ ವಿಳಾಸ ಕಛೇರಿ ವಿಳಾಸ, ದೂರವಾಣಿ ಸಂಖ್ಯೆ: ಪೌರಾಯುಕ್ತರು ನಗರಸಭೆ ಬೀದರ. ಇ-ಮೇಲ್: itstaff_ulb_bidar@yahoo.com 08482-240432, 8) ಅಂತರಜಾಲ ತಾಣದ ವಿಳಾಸ: https://kppp.karnataka.gov.in/

ಸಹಿ/- ಪೌರಾಯುಕ್ತರು
ನಗರಸಭೆ ಬೀದರ

ವಾ.ಸಾ.ಸಂ.ಇ/ಬೀದರ/326/ಕೆ.ಎಸ್.ಎಂ.ಸಿ.&ಎ/2024-25


Printed, Published and Owned by : Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad - 585330.
Editor: Ramesh Reddy, Office Ph. No: +91 9449732000.